ಸಂಪುಟ: 22, ಸಂಚಿಕೆ: 194, ಪುಟಗಳು: 8, ಗುರುವಾರ, 24 ಏಪ್ರಿಲ್ 2025 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3

### ಸುಭಾಷಿತ

ನೀವು ಮತ್ತು ನಿಮ್ಮವರ ನಡುವೆ ಮೂರನೆಯವರು ಬಾರದಂತೆ ನೋಡಿಕೊಳ್ಳಿ. ಏಕೆಂದರೆ ಬಹುತೇಕ ಸಂಬಂಧಗಳನ್ನು ಹಾಳು ಮಾಡುವವರು ಅವರೇ ಆಗಿರುತ್ತಾರೆ.

### ಪಂಚಾಂಗ

(ಗುರುವಾರ 24 ಏಪ್ರಿಲ್-2025)

- ಶ್ರೀ ವಿಶ್ವಾವಸು ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ಚೈತ್ರ ಮಾಸ, ಕೃಷ್ಣಪಕ್ಷ,
- ಏಕಾದಶಿ / ದ್ವಾದಶಿ, ಗುರುವಾರ,
- ಶತಭಿಷ ನಕ್ಷತ್ರ / ಪೂರ್ವ ಭಾದ್ರಪದ ನಕ್ಷತ್ರ.
- ರಾಹುಕಾಲ - 01:56 ರಿಂದ 03:29
- ಗುಳಿಕಕಾಲ - 09:14 ರಿಂದ 10:48
- ಯಮಗಂಡಕಾಲ - 06:07 ರಿಂದ 07:41




# ಭಾರತದ ನಿರ್ಧಾರಕ್ಕೆ ಪಾಕ್ ತತ್ತರ

## ತುರ್ತಾಗಿ ಉನ್ನತ ಮಟ್ಟದ ಸಭೆ ಕರೆದ ಪಾಕಿಸ್ತಾನ

**ಇಸ್ಲಾಮಾಬಾದ್:** ಜಮ್ಮು ಮತ್ತು ಕಾಶ್ಮೀರದ ಅನಂತನಾಗ್ ಜಿಲ್ಲೆಯ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ 26 ಜನರು ಸಾವನ್ನಪ್ಪಿದ್ದಾರೆ. ಈ ದಾಳಿಯನ್ನು ಬಲವಾಗಿ ಖಂಡಿಸಿದ ಭಾರತ, ಗಡಿಯಾಚೆಗಿನ ಭಯೋತ್ಪಾದನೆಯ ವಿರುದ್ಧ ದೊಡ್ಡ ಕ್ರಮ ಕೈಗೊಳ್ಳುವ ಮೂಲಕ ಪಾಕಿಸ್ತಾನಕ್ಕೆ ಅನೇಕ ದೊಡ್ಡ ಆಘಾತ ನೀಡಿದೆ.

ಒಂದೆಡೆ ಭಾರತವು ಸಿಂಧೂ ನದಿ ನೀರು ಒಪ್ಪಂದವನ್ನು ನಿಲ್ಲಿಸುವ ಮೂಲಕ ಪಾಕಿಸ್ತಾನಕ್ಕೆ ದೊಡ್ಡ ಸಮಸ್ಯೆಯನ್ನು ಸೃಷ್ಟಿಸಿದೆ, ಮತ್ತೊಂದೆಡೆ, ಪಾಕಿಸ್ತಾನದ ರಾಯಭಾರ ಕಚೇರಿಯನ್ನು ಮುಚ್ಚುವ ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ. ಪಾಕಿಸ್ತಾನಿಗಳು 48 ಗಂಟೆಗಳ ಒಳಗೆ ಭಾರತವನ್ನು ತೊರೆಯುವಂತೆ ಸೂಚನೆಗಳನ್ನು ನೀಡಲಾಗಿದೆ. ಈಗ ಭಾರತದ ಈ ಹೆಜ್ಜೆಗಳಿಂದ ಪಾಕಿಸ್ತಾನವು ತೊಂದರೆಗೀಡಾಗಿದೆ. ಪಾಕಿಸ್ತಾನದಲ್ಲಿ ತುರ್ತಾಗಿ ಉನ್ನತ ಮಟ್ಟದ ಸಭೆ ಕರೆದಿದೆ.

ಭಾರತದ ಕ್ರಮಗಳಿಗೆ ಸೂಕ್ತ ಪ್ರತಿಕ್ರಿಯೆ ನೀಡಲು ಪಾಕಿಸ್ತಾನದ ಉನ್ನತ ನಾಗರಿಕ ಸಂಸ್ಥೆ ಗುರುವಾರ ಸಭೆ ಸೇರಲಿದೆ ಎಂದು ಪಾಕಿಸ್ತಾನ ರಕ್ಷಣಾ ಸಚಿವ ಖ್ವಾಜಾ ಆಸಿಫ್ ಬುಧವಾರ ತಡರಾತ್ರಿ ತಿಳಿಸಿದ್ದಾರೆ. ಪ್ರಧಾನಿ ಶಹಬಾಜ್ ಷರೀಫ್ ಅವರ ಅಧ್ಯಕ್ಷತೆಯಲ್ಲಿ ರಾಷ್ಟ್ರೀಯ ಭದ್ರತಾ ಸಮಿತಿಯ ಸಭೆ ನಡೆಯಲಿದೆ ಎಂದು ಆಸಿಫ್ ಹೇಳಿಕೆಯಲ್ಲಿ ತಿಳಿಸಿದ್ದಾರೆ.



**ಭಾರತದ ತ್ವರಿತ ಕ್ರಮ:** ನವದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಭದ್ರತೆ ಕುರಿತ ಸಂಪುಟ ಸಮಿತಿ ಸಭೆಯ ನಂತರ, 1960 ರಲ್ಲಿ ಜಾರಿಗೆ ಬಂದ ಸಿಂಧೂ ನದಿ ನೀರು ಒಪ್ಪಂದವನ್ನು ತಡೆಹಿಡಿಯಲು ಭಾರತ ನಿರ್ಧರಿಸಿದೆ ಅದೇ ಸಮಯದಲ್ಲಿ, ಭಾರತವು ಅಟ್ಟಾರಿ ಚೆಕ್ ಪೋಸ್ಟ್ ಅನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಚ್ಚುವುದಾಗಿ ಘೋಷಿಸಿದೆ.

ಇದಲ್ಲದೆ, ಸಾರ್ಕ್ ವೀಸಾ ವಿನಾಯಿತಿ ಯೋಜನೆಯಡಿಯಲ್ಲಿ ಪಾಕಿಸ್ತಾನಿ ಪ್ರಜೆಗಳಿಗೆ ಭಾರತಕ್ಕೆ ಪ್ರಯಾಣಿಸಲು ಅನುಮತಿ ಇರುವುದಿಲ್ಲ ಮತ್ತು ಈ ಹಿಂದೆ ಪಾಕಿಸ್ತಾನಿ ಪ್ರಜೆಗಳಿಗೆ ನೀಡಲಾದ ಯಾವುದೇ ಅಂತಹ ವೀಸಾಗಳನ್ನು ರದ್ದುಗೊಳಿಸಲಾಗಿದೆ ಎಂದು ಪರಿಗಣಿಸಲಾಗುತ್ತದೆ. ಭಾರತದಲ್ಲಿರುವ ಪಾಕಿಸ್ತಾನಿ ರಾಯಭಾರ ಕಚೇರಿಯನ್ನು ಮುಚ್ಚಲು ಸರ್ಕಾರ ನಿರ್ಧರಿಸಿದೆ.

### ಖ್ವಾಜಾ ಆಸಿಫ್ ಹೇಳಿದ್ದೇನು?

ಭಾರತದ ಕ್ರಮಗಳಿಗೆ ಸೂಕ್ತ ಪ್ರತಿಕ್ರಿಯೆ ನೀಡಲು ಈ ಸಭೆಯಲ್ಲಿ ನಿರ್ಧಾರಗಳನ್ನು ತೆಗೆದುಕೊಳ್ಳಲಾಗುವುದು ಎಂದು ಹೇಳಿದ್ದಾರೆ. ಮಾಹಿತಿಯ ಪ್ರಕಾರ, ಎಲ್ಲಾ ಸಶಸ್ತ್ರ ಪಡೆಗಳ ಮುಖ್ಯಸ್ಥರು ಮತ್ತು ಪ್ರಮುಖ ಕ್ಯಾಬಿನೆಟ್ ಸಚಿವರು ಸಭೆಯಲ್ಲಿ ಭಾಗವಹಿಸಲಿದ್ದಾರೆ. ಮಂಗಳವಾರ ಪಹಲ್ಗಾಮ್‌ನಲ್ಲಿ ನಡೆದ ದಾಳಿಯ ನಂತರ, ಭಾರತವು ಗಡಿಯಾಚೆಗಿನ ಭಯೋತ್ಪಾದನೆಯ ವಿರುದ್ಧ ಕಠಿಣ ನಿಲುವನ್ನು ಅಳವಡಿಸಿಕೊಳ್ಳುವ ಮೂಲಕ ಅನೇಕ ದೊಡ್ಡ ಘೋಷಣೆಗಳನ್ನು ಮಾಡಿದೆ. ಪಹಲ್ಗಾಮ್ ದಾಳಿಗೂ ಪಾಕಿಸ್ತಾನಕ್ಕೂ ಸಂಬಂಧವಿಲ್ಲ ಎಂದು ಖ್ವಾಜಾ ಹೇಳಿದ್ದಾರೆ.

ಪಾಕಿಸ್ತಾನದ ವಿದೇಶಾಂಗ ಸಚಿವಾಲಯವು ನೀಡಿರುವ ಪ್ರತಿಕ್ರಿಯೆಯಲ್ಲಿ, ಅನಂತನಾಗ್ ಜಿಲ್ಲೆಯಲ್ಲಿ ನಡೆದ ದಾಳಿಯಲ್ಲಿ ಪ್ರವಾಸಿಗರು ಸಾವನ್ನಪ್ಪಿದ ಬಗ್ಗೆ ನಮಗೆ ಬೇಸರವಿದೆ, ಮೃತರ ಕುಟುಂಬಗಳಿಗೆ ನಮ್ಮ ಸಂತಾಪ ಸೂಚಿಸುತ್ತೇವೆ ಮತ್ತು ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಹಾರೈಸುತ್ತೇವೆ ಎಂದು ಬರೆದಿದ್ದರು.

## ಸರ್ವಪಕ್ಷ ಸಭೆ ಕರೆದ ಮೋದಿ



**ನವದೆಹಲಿ:** ಜಮ್ಮು ಕಾಶ್ಮೀರದ ಅನಂತ್ ನಾಗ್ ಜಿಲ್ಲೆಯಲ್ಲಿರುವ ಪಹಲ್ಗಾಮ್ ನಲ್ಲಿ ನಡೆದ ಉಗ್ರ ದಾಳಿಗೆ ಸಂಬಂಧಿಸಿದಂತೆ ಚರ್ಚೆ ನಡೆಸಲು ಪ್ರಧಾನಿ ಮೋದಿ ನೇತೃತ್ವದ ಕೇಂದ್ರ ಸರ್ಕಾರವು ಸರ್ವಪಕ್ಷ ಸಭೆ ಕರೆದಿದೆ. ಈ ಮಹತ್ವದ ಸಭೆಯ ಅಧ್ಯಕ್ಷತೆಯನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ವಹಿಸುವ ಸಾಧ್ಯತೆ ಇದೆ. ಪಹಲ್ಗಾಮ್ ದಾಳಿಗೆ ಸಂಬಂಧಿಸಿದ ಪ್ರಮುಖ ವಿಷಯಗಳು, ಪ್ರಸ್ತುತ ಭದ್ರತಾ ಪರಿಸ್ಥಿತಿಯನ್ನು ಈ ಸಭೆಯಲ್ಲಿ ಚರ್ಚಿಸಬಹುದು ಎಂದು ಹೇಳಲಾಗುತ್ತಿದೆ.

ಮಂಗಳವಾರ ಜಮ್ಮು ಮತ್ತು ಕಾಶ್ಮೀರದಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ 26 ಜನರು ಪ್ರಾಣ ಕಳೆದುಕೊಂಡಿದ್ದಾರೆ. ಈ ದಾಳಿಯಿಂದ ಇಡೀ ದೇಶ ದುಃಖಿತವಾಗಿದೆ. ಇಂತಹ ಪರಿಸ್ಥಿತಿಯಲ್ಲಿ, ಭಯೋತ್ಪಾದನೆಯನ್ನು ಹತ್ತಿಕ್ಕಲು ಮತ್ತು ಈ ದಾಳಿಗೆ ಪ್ರತೀಕಾರ ತೀರಿಸಿಕೊಳ್ಳಲು ಕೇಂದ್ರ ಸರ್ಕಾರ ನಿರಂತರವಾಗಿ ತನ್ನ ಕಾರ್ಯತಂತ್ರವನ್ನು ರೂಪಿಸುತ್ತಿದೆ.

ಭಯೋತ್ಪಾದಕ ದಾಳಿಯ ವಿರುದ್ಧ ಕ್ರಮ ಕೈಗೊಳ್ಳಲು ಬುಧವಾರ ಪ್ರಧಾನಿಯವರ ನಿವಾಸದಲ್ಲಿ ಭದ್ರತೆ ಕುರಿತ ಸಂಪುಟ ಸಮಿತಿ (ಸಿಸಿಎಸ್) ಸಭೆ ಸೇರಿತು. ಈ ಸಭೆಯಲ್ಲಿ ಹಲವು ಪ್ರಮುಖ ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ. ದಾಳಿಯಲ್ಲಿ ಭಾರತೀಯರು ಮತ್ತು ಒಬ್ಬ ನೇಪಾಳಿ ಪ್ರಜೆ ಸಾವನ್ನಪ್ಪಿದ್ದಾರೆ. ಇತರ ಹಲವರು ಗಾಯಗೊಂಡರು.

ಗುರುವಾರ ಸಂಜೆ ನಡೆಯಲಿರುವ ಸರ್ವಪಕ್ಷ ಸಭೆಯಲ್ಲಿ ಕೇಂದ್ರವು ವಿವಿಧ ರಾಜಕೀಯ ಪಕ್ಷಗಳ ನಾಯಕರಿಗೆ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಕುರಿತು ಮಾಹಿತಿ ನೀಡಲಿದ್ದು, ಅವರ ಅಭಿಪ್ರಾಯಗಳನ್ನು ಕೇಳಲಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಗೃಹ ಸಚಿವ ಅಮಿತ್ ಶಾ ಅವರು ನಾಯಕರಿಗೆ ಮಾಹಿತಿ ನೀಡುವ ನಿರೀಕ್ಷೆಯಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

ಪುಟ 2

## ಕೇಂದ್ರದ ಜತೆ ನಾವಿದ್ದೇವೆ

### ಉಗ್ರರನ್ನು ಸಂಪೂರ್ಣ ಮಟ್ಟ ಹಾಕಿ: ಸಿಎಂ ಸಿದ್ದರಾಮಯ್ಯ

**ಬೆಂಗಳೂರು:** ನಮ್ಮ ದೇಶದಲ್ಲಿ ಉಗ್ರ ಚಟುವಟಿಕೆ ಇರಬಾರಬಾರದು. ಭಯೋತ್ಪಾದನೆಯನ್ನು ಸಂಪೂರ್ಣ ಮಟ್ಟ ಹಾಕಬೇಕು. ಕೇಂದ್ರ ಸರ್ಕಾರ ಎಲ್ಲಾ ಉಗ್ರರನ್ನು ನಾಶಪಡಿಸುವ ಕೆಲಸ ಮಾಡಬೇಕು. ಕೇಂದ್ರ ಸರ್ಕಾರದ ಜತೆ ನಾವೆಲ್ಲ ಇದ್ದೇವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು. ಪಹಲ್ಗಾಂನಲ್ಲಿ ಉಗ್ರ ದಾಳಿಯಲ್ಲಿ ಮೃತಪಟ್ಟ ಭರತ್ ಭೂಷಣ್ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದ ಬಳಿಕ ಬೆಂಗಳೂರಿನಲ್ಲಿ ಮಾತನಾಡಿದ ಅವರು, ಅಮಾನೀಯವಾದ ಕೃತ್ಯ ಇದು, ಇದನ್ನು ತೀವ್ರವಾಗಿ ಖಂಡಿಸುತ್ತೇನೆ ಎಂದರು.

ಭರತ್ ಭೂಷಣ್ ಅವರನ್ನು ಹಾಡಹಗಲೇ ಹೆಂಡತಿ, ಮಗುವಿನ ಕಣ್ಣೆದುರೇ ಶೂಟ್ ಮಾಡಿ ಹತ್ಯೆ ಮಾಡಿದ್ದಾರೆ. ಈ ರೀತಿಯ ಘಟನೆ ಮತ್ತೆ ಮರುಕಳಿಸದಂತೆ ನೋಡಿಕೊಳ್ಳಬೇಕು. ನಮ್ಮ ದೇಶದಲ್ಲಿ ಉಗ್ರರು ಇರದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸಿದ್ದರಾಮಯ್ಯ ಆಗ್ರಹಿಸಿದರು.

ಪುಟ 2





## ಶಿವಮೊಗ್ಗ ತಲುಪಿದ ಮಂಜುನಾಥ್ ಮೃತದೇಹ

**ಶಿವಮೊಗ್ಗ:** ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರ ಗುಂಡಿಗೆ ಬಲಿಯಾದ ಉದ್ಯಮಿ ಮಂಜುನಾಥ್ ರಾವ್ ಅವರ ಮೃತದೇಹ ಶಿವಮೊಗ್ಗಕ್ಕೆ ತಲುಪಿದೆ.

ಬೆಂಗಳೂರಿನಿಂದ ತುಮಕೂರು, ಚಿತ್ರದುರ್ಗ ಮಾರ್ಗವಾಗಿ ಆಂಬುಲೆನ್ಸ್ ಮೂಲಕ ಮಂಜುನಾಥ್ ಪಾರ್ಥಿವ ಶರೀರ ಶಿವಮೊಗ್ಗಕ್ಕೆ ಸಾಗಿಸಲಾಯಿತು. ಈ ವೇಳೆ ತುಮಕೂರಿನ ಕ್ಯಾತಸಂದ್ರದ ಟೋಲ್ ಗೇಟ್‌ನಲ್ಲಿ ಅಂತಿಮ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗಿತ್ತು. ನಗರ ಶಾಸಕ ಜ್ಯೋತಿಗಣೇಶ್, ಬಿಜೆಪಿ ಜಿಲ್ಲಾಧ್ಯಕ್ಷ ಹೆಬ್ಬಾಕ ರವಿ ಸೇರಿದಂತೆ ಹಲವರು ಅಂತಿಮ ದರ್ಶನ ಪಡೆದರು.

ಪುಟ 2

## ಭಯೋತ್ಪಾದನೆ ಮೂಲಕ ಸತ್ಯ ಮುಚ್ಚಿಹಾಕಲು ಸಾಧ್ಯವಿಲ್ಲ

**ಮಂಗಳೂರು:** ದಕ್ಷಿಣ ಕಾಶ್ಮೀರದ ಪಹಲ್ಗಾಮ್ ನಲ್ಲಿ ಅಮಾಯಕ ಪ್ರವಾಸಿಗರ ಮೇಲೆ ನಡೆದ ಹೇಡಿತನದ ಭಯೋತ್ಪಾದಕ ದಾಳಿ ನನ್ನ ಮನಸ್ಸಿಗೆ ತೀವ್ರ ನೋವು ನೀಡುವ ಜೊತೆಗೆ ಬಹಳ ಆಕ್ರೋಶವನ್ನುಂಟುಮಾಡಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಹೇಳಿದ್ದಾರೆ.



ಉಗ್ರರು ಮುಗ್ಧ ಜನರ ಮೇಲೆ ನಡೆಸಿರುವ ಈ ದಾಳಿಯನ್ನು ಕಟುವಾಗಿ ಖಂಡಿಸಿರುವ ಅವರು, ಈ ದಾಳಿಯಲ್ಲಿ ಶಿವಮೊಗ್ಗ, ಮಹಾರಾಷ್ಟ್ರ, ತೆಲಂಗಾಣ ಸೇರಿದಂತೆ ದೇಶದ ಹಲವೆಡೆಯಿಂದ ಕಾಶ್ಮೀರಕ್ಕೆ ಬಂದಿದ್ದ ಕುಟುಂಬಗಳು ತಮ್ಮ ಪ್ರೀತಿ-ಪಾತ್ರರನ್ನು ಕಳೆದುಕೊಂಡಿರುವುದು ಹೃದಯ ಮಿಡಿಯುವಂತೆ ಮಾಡಿದೆ. ಇದು ಕೇವಲ ಒಂದು ಪ್ರದೇಶ ಅಥವಾ ಗುಂಪಿನ ಮೇಲೆ ನಡೆದ ದಾಳಿಯಲ್ಲ. ಬದಲಿಗೆ ಇದು ಪ್ರತಿ ಭಾರತೀಯರ ಮನೆಯ ಮೇಲೆ ನಡೆದಿರುವ ದಾಳಿಯಾಗಿದೆ ಎಂದು ಅತೀವ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಾಶ್ಮೀರ ಶಾರದಾ ದೇಶ, ಅದು ಅನಾದಿ ಕಾಲದ ದೇವಾಲಯಗಳನ್ನು ಮಡಿಲಲ್ಲಿ ಹೊತ್ತುಕೊಂಡ ಪವಿತ್ರ ಜ್ಞಾನದ ಭೂಮಿ. ಅಷ್ಟೇ ಅಲ್ಲ ಅದು ನಮ್ಮ ಭಾರತದ ಮುಕುಟ ಮಣಿ ಎಂಬುವುದನ್ನು ಬಹಳ ಸ್ಪಷ್ಟ ಹಾಗೂ ಗಟ್ಟಿ ಧ್ವನಿಯಿಂದ ಹೇಳಬೇಕು. ಆದರೆ ಈ ಸತ್ಯ ಶತ್ರುಗಳನ್ನು ಕಂಗೆಡಿಸುತ್ತಿದೆ. ಹೀಗಾಗಿ ಈ ಹೇಡಿ ಭಯೋತ್ಪಾದಕರು ನಿರಾಯುಧ ನಾಗರಿಕರನ್ನು ಕೊಂದು ಭಯ ಹುಟ್ಟಿಸುವ ಯತ್ನ ನಡೆಸುತ್ತಿದ್ದಾರೆ ಎಂದು ಹೇಳಿದರು. ಈ ಉಗ್ರರು ಹಾಗೂ ಅವರ ಹಿಂದಿನ ದುಷ್ಟರಿಗೆ ಮುಖ್ಯ ಆಯುಧ ಬಂದೂಕುಗಳಲ್ಲ, ಬದಲಿಗೆ ಜನರಲ್ಲಿ ಭಯ ಹುಟ್ಟಿಸುವುದೇ ಅವರ ಗುರಿ. ಕಾಶ್ಮೀರದ ಬೀದಿಗಳು ಬಿಕೋ ಎನ್ನಬೇಕು, ಅಲ್ಲಿ ವ್ಯಾಪಾರ ವಹಿವಾಟು- ಆರ್ಥಿಕತೆ ಹಾಳಾಗಬೇಕು,

ಪುಟ 2

## ಸಂಕ್ಷಿಪ್ತ ಸುದ್ದಿ

### ಓಂ ಪ್ರಕಾಶ್ ಕೊಲೆ ಪ್ರಕರಣದ ದಾಖಲೆ ಸಿಸಿಬಿಗೆ ಹಸ್ತಾಂತರ



**ಬೆಂಗಳೂರು:** ಕರ್ನಾಟಕದ ಮಾಜಿ ಡಿಜಿ ಹಾಗೂ ಐಜಿಪಿ ಓಂ ಪ್ರಕಾಶ್ ಕೊಲೆ ಪ್ರಕರಣ ಸಂಬಂಧ ಕೊಲೆ ನಡೆದ ದಿನವೇ ಅವರ ಪತ್ನಿ ಪಲ್ಲವಿ ಮತ್ತು ಮಗಳು ಕೃತಿಯನ್ನು ಹೆಚ್‌ಎಸ್‌ಆರ್ ಲೇಔಟ್ ಪೊಲೀಸರು ವಶಕ್ಕೆ ಪಡೆದಿದ್ದರು. ವಿಚಾರಣೆ ಬಳಿಕ ಪಲ್ಲವಿಯನ್ನು ಬಂಧಿಸಿ ಜೈಲಿಗೆ ಕಳುಹಿಸಲಾಗಿತ್ತು. ಇನ್ನು ಓಂ ಪ್ರಕಾಶ್ ಮಗಳು ಕೃತಿಯ ವಿಚಾರಣೆಯನ್ನು ಆಕೆಗೆ ಮಾನಸಿಕ ಆರೋಗ್ಯ ಸಮಸ್ಯೆ ಇದೆ ಎಂಬ ಕಾರಣಕ್ಕೆ ಮುಂದೂಡಲಾಗಿತ್ತು.

» **ಕೃತಿ ವಿಚಾರಣೆಗೆ ಒಳಪಡಿಸಲು ಫಿಟ್**

ಪುಟ 2

### ರಸ್ತೆ ಅಪಘಾತ ಒಂದೇ ಕುಟುಂಬದ 3 ಮಂದಿ ಸಾವು



**ಕಲಬುರಗಿ:** ಬೆಳ್ಳಂ ಬೆಳಿಗ್ಗೆ ಭೀಕರ ರಸ್ತೆ ಅಪಘಾತದಲ್ಲಿ ಒಂದೇ ಕುಟುಂಬದ 3 ಮಂದಿ ಸ್ಥಳದಲ್ಲೇ ಸಾವನ್ನಪ್ಪಿರೋ ಘಟನೆ ಅಫಜಲಪುರ ಮುಖ್ಯರಸ್ತೆ ಗೊಬ್ಬೂರ ಬಳಿ ನಡೆದಿದೆ. ಆಯೇಷಾ (70), ಅಜ್ಮೇರಾ (30) ಮತ್ತು ಅಜ್ಮೇರಾ ಮಗಳು ಜೈನಬ್ (2) ಮೃತ ದುರ್ದೈವಿಗಳು. ಮೃತ ಮೂವರು ಕಲಬುರಗಿ ನಗರದ ಮಿಲ್ಲತ್ ನಗರ ಬಡಾವಣೆ ನಿವಾಸಿಗಳು. ಇಂದು ಬೆಳಿಗ್ಗೆ ಕಾರಿನಲ್ಲಿ ಒಂದೇ ಕುಟುಂಬದ 8 ಜನ ಸೇರಿದಂತೆ 5 ಜನ ಮಕ್ಕಳು ಸಂಬಂಧಿಕರ ಮಗುವಿನ ಜವಳ ಕಾರ್ಯಕ್ರಮಕ್ಕೆ ಹೋಗುತ್ತಿದ್ದರು. ಅದೇ ವೇಳೆ ಗೊಬ್ಬೂರ ಗ್ರಾಮದ ಬಳಿ ಕಾರಿಗೆ ಅಡ್ಡ ಬಂದ ಶ್ವಾನವನ್ನು ಉಳಿಸಲು ಹೋಗಿ ರಸ್ತೆ ಬದಿಯ ತಡೆ ಕಂಬಗಳಿಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ರಭಸಕ್ಕೆ 6 ಕಂಬಗಳು ಹಾಗೂ ಕಾರು ಸಂಪೂರ್ಣ ನಜ್ಜು ಗುಜ್ಜಾಗಿ ಹೋಗಿದೆ. ಅಲ್ಲದೇ ಸ್ಥಳದಲ್ಲಿ 3 ಮಂದಿ ಸಾವನ್ನಪ್ಪಿದ್ದು, ಉಳಿದವರಿಗೆ ಗಂಭೀರ ಗಾಯಗಳಾಗಿವೆ. ದೇವಲ ಗಾನಗಾಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕೇಸ್ ದಾಖಲಾಗಿದೆ.

## ಉಗ್ರರ ಬಗ್ಗೆ ಸುಳಿವು ಕೊಟ್ಟವರಿಗೆ 20 ಲಕ್ಷ ರೂ. ಬಹುಮಾನ

**ಶ್ರೀನಗರ:** ಜಮ್ಮು ಕಾಶ್ಮೀರದ ಅನಂತ್ ನಾಗ್ ಜಿಲ್ಲೆಯ ಪಹಲ್ಗಾಮ್‌ನಲ್ಲಿ ಉಗ್ರರು ನಡೆಸಿದ ದಾಳಿಯಲ್ಲಿ 26 ಮಂದಿ ಪ್ರಾಣ ಕಳೆದುಕೊಂಡಿದ್ದು, 10ಕ್ಕೂ ಅಧಿಕ ಮಂದಿ ಗಾಯಗೊಂಡಿದ್ದಾರೆ. ಈ ದಾಳಿ ನಡೆಸಿದ ಶಂಕಿತ ಉಗ್ರರ ರೇಖಾಚಿತ್ರಗಳನ್ನು ಜಮ್ಮು ಕಾಶ್ಮೀರ ಪೊಲೀಸರು ಹಂಚಿಕೊಂಡಿದ್ದು, ಅವರ ಬಗ್ಗೆ ಸುಳಿವು ಕೊಟ್ಟವರಿಗೆ 20 ಲಕ್ಷ ರೂ. ಬಹುಮಾನ ನೀಡುವುದಾಗಿ ಪೊಲೀಸರು ಘೋಷಿಸಿದ್ದಾರೆ.

ಸಾರ್ವಜನಿಕರಿಗೆ ಮನವಿ ಮಾಡಿರುವ ಪೊಲೀಸರು, ಮಾಹಿತಿದಾರರ, ಗುರುತನ್ನು ಗೌಪ್ಯವಾಗಿಡಲಾಗುವುದು ಎಂದು ಭರವಸೆ ನೀಡಿದ್ದಾರೆ. ಯಾವುದೇ ಸಂಬಂಧಿತ ಮಾಹಿತಿಯನ್ನು ಹೊಂದಿರುವ ನಾಗರಿಕರು



ಅನಂತ್‌ನಾಗ್‌ನ ಹಿರಿಯ ಪೊಲೀಸ್ ವರಿಷ್ಠಾಧಿಕಾರಿ ಅಥವಾ ಪೊಲೀಸ್ ನಿಯಂತ್ರಣ ಕೊಠಡಿ ಅವರನ್ನು ನೇರವಾಗಿ ಈ ಕೆಳಗಿನ ಸಂಪರ್ಕ ಸಂಖ್ಯೆಗಳಲ್ಲಿ ಸಂಪರ್ಕಿಸಲು ಕೋರಲಾಗಿದೆ:

ಎಸ್‌ಎಸ್ಪಿ ಅನಂತನಾಗ್ : 9596777666, ಪಿಸಿಆರ್ ಅನಂತನಾಗ್ : 9596777669 ಇ-ಮೇಲ್ : dpoanantnag-jk@nic.in ಮಾಹಿತಿ ನೀಡಬಹುದು. ಕಾಶ್ಮೀರ ಕಣಿವೆಯಲ್ಲಿ ಸಾರ್ವಜನಿಕರ ಸುರಕ್ಷತೆಗೆ

ಪುಟ 2

## ಕಾಶ್ಮೀರದಲ್ಲಿ ನರಮೇಧ

### ಬೆಂಗಳೂರಿಗೆ ಆಗಮಿಸಿದ ಮೃತದೇಹ, ಕುಟುಂಬಸ್ಥರಿಗೆ ಹಸ್ತಾಂತರ



**ಬೆಂಗಳೂರು:** ಕಾಶ್ಮೀರದ ಪಹಲ್ಗಾವ್‌ನಲ್ಲಿ ಉಗ್ರರ ಗುಂಡೇಟಿಗೆ ಬಲಿಯಾದ ಇಬ್ಬರು ಕನ್ನಡಿಗರ ಮೃತದೇಹ ರಾಜ್ಯಕ್ಕೆ ಆಗಮಿಸಿದೆ.

ದೆಹಲಿಯಿಂದ ಇಂಡಿಗೋ ವಿಮಾನದಲ್ಲಿ ಬೆಳಗ್ಗೆ 3:30ಕ್ಕೆ ಬೆಂಗಳೂರಿನ ಕೆಂಪೇಗೌಡ ವಿಮಾನ ನಿಲ್ದಾಣಕ್ಕೆ ಶಿವಮೊಗ್ಗದ ಮಂಜುನಾಥ್, ಬೆಂಗಳೂರಿನ ಭರತ್ ಭೂಷಣ್ ಪಾರ್ಥಿವ ಶರೀರ ಆಗಮಿಸಿತು.

ಈ ವಿಮಾನದಲ್ಲಿ ಬೆಂಗಳೂರು ದಕ್ಷಿಣ ಕ್ಷೇತ್ರದ ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಮತ್ತು ಮೃತರ ಕುಟುಂಬಸ್ಥರು ಆಗಮಿಸಿದ್ದರು.

ಪುಟ 2

## ಮಲೆಮಹದೇಶ್ವರ ಬೆಟ್ಟದಲ್ಲಿ ಇಂದು ಸಚಿವ ಸಂಪುಟ ಸಭೆ

## 8 ಜಿಲ್ಲೆಗಳಿಗೆ ಬಂಪರ್?

**ಚಾಮರಾಜನಗರ:** ಮಲೆಮಹದೇಶ್ವರ ಬೆಟ್ಟದಲ್ಲಿ ಇಂದು ಸಚಿವ ಸಂಪುಟ ಸಭೆ ನಡೆಯಲಿದೆ. ಮಲೆಮಹದೇಶ್ವರದಲ್ಲಿ ಇದೇ ಮೊದಲ ಬಾರಿಗೆ ನಡೆಯಲಿರುವ ಸಚಿವ ಸಂಪುಟ ಸಭೆಗೆ ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಂಡಿದೆ. ಸಭೆ ನಡೆಸಲು ವಜ್ರಮಲೆ ವಸತಿ ಗೃಹದ ಎದುರಿನ ಆವರಣದಲ್ಲಿ ಜರ್ಮನ್ ಟೆಂಟ್ ಅಳವಡಿಸಲಾಗಿದೆ. ಇದರಿಂದ ಬಿಸಿಲು, ಮಳೆ ಬಂದರೂ ಸಭೆಗೆ ಯಾವುದೇ ಅಡ್ಡಿಯಾಗುವುದಿಲ್ಲ.



ಸಚಿವ ಸಂಪುಟ ಸಭೆಯಲ್ಲಿ ಮೈಸೂರು ವಿಭಾಗದ ಎಂಟು ಜಿಲ್ಲೆಗಳ ವಿವಿಧ ಯೋಜನೆಗಳ ಬಗ್ಗೆ ಚರ್ಚೆಯಾಗಲಿದ್ದು, ಅನುಮೋದನೆ ಸಾಧ್ಯತೆಯಿದೆ. ಇನ್ನೂ ಚಾಮರಾಜನಗರ ಜಿಲ್ಲೆಗೆ ವಿಶೇಷ ಪ್ಯಾಕೇಜ್ ಘೋಷಣೆಯಾಗುವ ಸಾಧ್ಯತೆ ಇದೆ. ಗಿರಿಜನರಿಗೆ ವಸತಿ, ಹಾಡಿಗಳಿಗೆ ವಿದ್ಯುತ್, ಪ್ರವಾಸೋದ್ಯಮ, ಕೆರೆ ನೀರು ತುಂಬಿಸುವ ಯೋಜನೆ ಸೇರಿದಂತೆ ಹಲವು ಪ್ರಸ್ತಾವನೆಗಳಿಗೆ ಅನುಮೋದನೆ ಸಿಗುವ ಸಾಧ್ಯತೆ ಇದೆ.

ಪುಟ 2

# ಆರ್ಟಿಕಲ್ 370 ತೆಗೆದಿದ್ದೇ ಪಹಲ್ಗಾಮ್ ನರಮೇಧಕ್ಕೆ ಕಾರಣ

**ಮಂಡ್ಯ:** ಜಮ್ಮು ಮತ್ತು ಕಾಶ್ಮೀರದಲ್ಲಿ ಆರ್ಟಿಕಲ್ 370 ತೆಗೆದಿರುವುದೇ ಪಹಲ್ಗಾಮ್ ಘಟನೆ ಕಾರಣ ಎಂದು ಶಾಸಕ ರಮೇಶ್ ಬಂಡಿಸಿದ್ದೇಗೌಡ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.



» ಬಂಡಿಸಿದ್ದೇಗೌಡ ವಿವಾದಾತ್ಮಕ ಹೇಳಿಕೆ

ಶ್ರೀರಂಗಪಟ್ಟಣದಲ್ಲಿ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯ ಕುರಿತು ಮಾತನಾಡಿದ ಅವರು, ಆರ್ಟಿಕಲ್ 370 ತೆಗೆಯೋದಕ್ಕೂ ಮೊದಲು ಯೋಚನೆ ಮಾಡಬೇಕಿತ್ತು. ಪ್ರಧಾನಿ ಮೋದಿ ಮತ್ತು ಕೇಂದ್ರ ಗೃಹಸಚಿವ ಅಮಿತ್ ಶಾ ಅವರ ಅತಿಯಾದ ಆತ್ಮವಿಶ್ವಾಸದಿಂದ ಘಟನೆ ನಡೆದಿದೆ ಎನ್ನುವ ಮೂಲಕ ಘಟನೆಗೆ ಪರೋಕ್ಷವಾಗಿ ಬಿಜೆಪಿ ಕಾರಣ ಎಂದಿದ್ದಾರೆ. ಆರ್ಟಿಕಲ್ 370 ತೆಗೆಯುವ ಮುನ್ನ ಕಾಶ್ಮೀರದಲ್ಲಿ ಮುನ್ನೆಚ್ಚರಿಕೆ ಕ್ರಮ ವಹಿಸಬೇಕಿತ್ತು. ಅವರ ದುಡುಕಿನ ನಿರ್ಧಾರದಿಂದ ಈ ಘಟನೆ ನಡೆದಿದೆ. ಜನರ ಭಾವನೆ ಅರ್ಥ ಮಾಡಿಕೊಂಡು ಆರ್ಟಿಕಲ್ 370 ತೆಗೆಯಬೇಕಿತ್ತು ಎಂದು ಕಿಡಿಕಾರಿದ್ದಾರೆ. ಮಂಗಳವಾರ ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು ಪ್ರವಾಸಿಗರ ಮೇಲೆ ಗುಂಡಿನ ದಾಳಿ ನಡೆಸಿದ್ದರು. ದಾಳಿಯಲ್ಲಿ 26 ಮಂದಿ ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದಾರೆ. ಮೃತರಲ್ಲಿ ಮೂವರು ಕನ್ನಡಿಗರಾಗಿದ್ದಾರೆ.

# ಹುಬ್ಬಳ್ಳಿ ಕಿಮ್ಸ್ ನಲ್ಲಿ ಸಕಾಲಕ್ಕೆ ವೇತನ ಸಿಗದೆ ಸಿಬ್ಬಂದಿ ಪರದಾಟ

**ಹುಬ್ಬಳ್ಳಿ:** ಹುಬ್ಬಳ್ಳಿ ನಗರದಲ್ಲಿರುವ ಕಿಮ್ಸ್ ಆಸ್ಪತ್ರೆ, ಉತ್ತರ ಕರ್ನಾಟಕ ಭಾಗದಲ್ಲಿ ರೋಗಿಗಳಿಗೆ ಸಂಜೀವಿನಿಯಾಗಿದೆ. ಪ್ರತಿನಿತ್ಯ ಸಾವಿರಾರು ರೋಗಿಗಳು ಚಿಕಿತ್ಸೆಗೆ ಈ ಆಸ್ಪತ್ರೆಗೆ ಬರುತ್ತಾರೆ. ಅವರ ಆರೋಗ್ಯ ಸುಧಾರಣೆಗಾಗಿ, ಕಿಮ್ಸ್‌ನಲ್ಲಿ ವೈದ್ಯರು ಸೇರಿದಂತೆ ಬರೋಬ್ಬರಿ 1300 ಸಿಬ್ಬಂದಿ ಕೆಲಸ ಮಾಡುತ್ತಿದ್ದಾರೆ. ರೋಗಿಗಳ ಆರೋಗ್ಯ ಸುಧಾರಣೆಗಾಗಿ, ರೋಗಿಗಳ ಜೀವ ಉಳಿಸಲು ಹಗಲಿರಳು ದುಡಿಯುವ ಸಿಬ್ಬಂದಿ, ಇದೀಗ ತಮ್ಮ ಕುಟುಂಬವನ್ನು ಉಳಿಸಲು ಪರದಾಡುವಂತಹ ಸ್ಥಿತಿ ನಿರ್ಮಾಣವಾಗಿದೆ. ಸಿಬ್ಬಂದಿಗೆ ಸಕಾಲದಲ್ಲಿ ವೇತನ ಸಿಗುತ್ತಿಲ್ಲ ಎಂಬ ಆರೋಪ ಕೇಳಿಬಂದಿದೆ.

ಗ್ರೂಪ್ ಎ ದಿಂದ ಗ್ರೂಪ್ ಡಿ ವರಗಿನ ಸಿಬ್ಬಂದಿಗೆ ಕಳೆದ ಒಂದೂವರೆ ವರ್ಷದಿಂದ ಸಕಾಲದಲ್ಲಿ ವೇತನ ಪಾವತಿ ಆಗುತ್ತಿಲ್ಲ ಎನ್ನಲಾಗಿದೆ. ಕೆಲವು ಸಲ, ತಿಂಗಳ ಮಧ್ಯದಲ್ಲಿ ವೇತನವಾದರೆ, ಹಲವು ಸಲ ತಿಂಗಳ ಕೊನೆಯಲ್ಲಿ ವೇತನ ಪಾವತಿಯಾಗುತ್ತಿದೆಯಂತೆ. ಹೀಗಾದರೆ ನಾವು ಕುಟುಂಬ ನಡೆಸುವುದು ಹೇಗೆ ಮನೆ ಬಾಡಿಗೆ, ಮಕ್ಕಳ ಫೀಸ್ ಸೇರಿದಂತೆ ದೈನಂದಿನ ಖರ್ಚು ವೆಚ್ಚವನ್ನು ನಿಬಾಯಿಸುವುದು ಹೇಗೆ ಎಂದು ಸಿಬ್ಬಂದಿ ಪ್ರಶ್ನಿಸುತ್ತಿದ್ದಾರೆ.

ವೇತನ ವಿಳಂಬ ಸಮಸ್ಯೆ ಬಗ್ಗೆ ಯಾರಾದರೂ ಬಹಿರಂಗವಾಗಿ ಮಾತನಾಡಿದರೆ ಅವರನ್ನು ಟಾರ್ಗೆಟ್ ಮಾಡಲಾಗುತ್ತಿದೆ ಎಂಬ ಆರೋಪಗಳೂ ಇವೆ.

**ಕಿಮ್ಸ್ ಆರ್ಥಿಕ ಸ್ಥಿತಿ ಹದಗೆಟ್ಟಿರವುದೇ ಕಾರಣ:** ಕಿಮ್ಸ್‌ನಲ್ಲಿ ಸಿಬ್ಬಂದಿಗೆ ಸಕಾಲದಲ್ಲಿ ವೇತನ ಸಿಗದೇ ಇರಲು ಮುಖ್ಯ ಕಾರಣ ಆರ್ಥಿಕ ಸ್ಥಿತಿ ಹದೆಗೆಟ್ಟಿರುವುದು. ಆದಾಯಕ್ಕಿಂತ ಖರ್ಚೇ ಹೆಚ್ಚಾಗಿರುವುದರಿಂದ, ವೇತನ ಹೊಂದಿಸಲಿಕ್ಕಾಗದೇ ಪರದಾಡುವಂತಾಗಿದೆ. ಹೀಗಾಗಿ ಕಿಮ್ಸ್, ವೈದ್ಯಕೀಯ ಶಿಕ್ಷಣ ಇಲಾಖೆಗೆ, ವೇತನ ಸೇರಿದಂತೆ ಖರ್ಚು ವೆಚ್ಚಕ್ಕೆ ಹೆಚ್ಚಿನ ಅನುದಾನ ನೀಡುವಂತೆ ಅನೇಕ ಬಾರಿ ಮನವಿ ಮಾಡಿದೆ. ಆದರೆ ಸರ್ಕಾರ ಈವರೆಗೆ ಅನುದಾನ ನೀಡ್ತಿಲ್ಲ ಎನ್ನಲಾಗಿದೆ. ಕಿಮ್ಸ್ ಆದಾಯದಲ್ಲಿಯೇ ವೇತನ ಪಾವತಿ ಮಾಡುವಂತೆ ಸೂಚಿಸಿದೆ. ಒಂದಡೆ ರೋಗಿಗಳ ಸಂಖ್ಯೆ ಹೆಚ್ಚಾಗ್ಗಿರುವುದರಿಂದ ಕೆಲಸದ ಒತ್ತಡ ಹೆಚ್ಚಾಗಿ ಸಿಬ್ಬಂದಿ ಪರದಾಡುವುದರ ಜೊತೆಗೆ ವೇತನಕ್ಕಾಗಿ ಪರದಾಡುವಂತಾಗಿದೆ. ಆದರೆ ಇನ್ನೊಂದೆಡೆ ಸರ್ಕಾರ ಕೂಡಾ ನೆರವಿಗೆ ಬಾರದೇ ಇರುವುದ ಅವರ ಸಂಕಷ್ಟವನ್ನು ಹೆಚ್ಚಿಸಿದೆ.

ಹಣಕಾಸಿನ ವರ್ಷದ ಕೊನೆಯ ತಿಂಗಳು ಆಗಿದ್ದರಿಂದ ಕಳೆದ ತಿಂಗಳು, ಈ ತಿಂಗಳ ವೇತನ ಸ್ವಲ್ಪ ಹೆಚ್ಚು ಕಡಿಮೆಯಾಗಿರಬಹುದು. ಆದರೆ ಸಕಾಲದಲ್ಲಿ ವೇತನ ನೀಡಲು ಕ್ರಮ ಕೈಗೊಳ್ಳುವುದಾಗಿ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಆಶ್ವಾಸನೆ ನೀಡಿದ್ದಾರೆ. ಆದರೆ ರೋಗಿಗಳಿಗಾಗಿ ಹಗಲಿರಳು ಕೆಲಸ ಮಾಡುವ ಸಿಬ್ಬಂದಿಗೆ ತಿಂಗಳ ಮೊದಲ ವಾರದಲ್ಲಿಯೇ ಪ್ರತಿ ತಿಂಗಳು ವೇತನ ಸಿಗುವಂತಹ ವ್ಯವಸ್ಥೆ ಮಾಡಬೇಕಿದೆ.

# ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರಲು ವಿಶೇಷ ವಿಮಾನ

**ಹುಬ್ಬಳ್ಳಿ:** ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿ ಹಿನ್ನೆಲೆ ಕಾಶ್ಮೀರ ಪ್ರವಾಸಕ್ಕೆ ತೆರಳಿರುವ ಕನ್ನಡಿಗರನ್ನು ಸುರಕ್ಷಿತವಾಗಿ ಅವರವರ ಊರುಗಳಿಗೆ ತಲುಪಿಸಲು ಸಕಲ ವ್ಯವಸ್ಥೆ ಕೈಗೊಳ್ಳಲಾಗಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದರು.



ದೆಹಲಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಂಗಳವಾರ ರಾತ್ರಿಯಿಂದಲೇ ಜಮ್ಮು-ಕಾಶ್ಮೀರ ಲೆಫ್ಟಿನೆಂಟ್ ಗವರ್ನರ್ ಮತ್ತು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದು, ಕನ್ನಡಿಗರೆಲ್ಲರನ್ನೂ ಅವರ ಊರುಗಳಿಗೆ ಸುರಕ್ಷಿತವಾಗಿ ತಲುಪಿಸಲು ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದು ಹೇಳಿದರು.

**ಕನ್ನಡಿಗರು ಸ್ವಸ್ಥಾನಕ್ಕೆ ಮರಳಲು ವ್ಯವಸ್ಥೆ:** ಮಂಗಳವಾರ ರಾತ್ರಿಯೇ ರಾಮ್ ಮೋಹನ್ ನಾಯ್ಡು ಅವರೊಂದಿಗೆ ಮಾತುಕತೆ ನಡೆಸಿದ್ದೇನೆ. ಕನ್ನಡಿಗರನ್ನು ಸುರಕ್ಷಿತವಾಗಿ ಮರಳಿ ಕರೆತರಲು ವ್ಯವಸ್ಥೆ ಕಲ್ಪಿಸಲಾಗಿದೆ. ವಿಶೇಷ ವಿಮಾನ ವ್ಯವಸ್ಥೆ ಸಹ ಮಾಡಲಾಗಿದೆ. ಸದ್ಯಕ್ಕೆ ಮುಂಬೈ ಮತ್ತು ದೆಹಲಿಗೆ ಪ್ರವಾಸಿಗರನ್ನು ರವಾನಿಸಲು ಸರ್ಕಾರ ವಿಮಾನ ವ್ಯವಸ್ಥೆ ಮಾಡಿದೆ. ಇನ್ನೆರಡು ದಿನಗಳಲ್ಲಿ ಎಲ್ಲ ಪ್ರವಾಸಿಗರನ್ನೂ ಅವರವರ ಸ್ವಸ್ಥಾನಗಳಿಗೆ ಸುರಕ್ಷಿತವಾಗಿ ಮರಳಿಸಲಾಗುತ್ತದೆ ಎಂದು ತಿಳಿಸಿದರು.

**ಮೂವರು ಕನ್ನಡಿಗರ ಪಾರ್ಥಿವ ಶರೀರ ಸಾಗಿಸಲು ಕ್ರಮ:** ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಕರ್ನಾಟಕದ ಮೂವರು ಮೃತಪಟ್ಟಿದ್ದು, ಇಬ್ಬರು ಗಾಯಗೊಂಡಿದ್ದಾರೆ ಎಂಬ ಮಾಹಿತಿಯಿದೆ. ಮೃತರ ಪಾರ್ಥಿವ ಶರೀರ, ಗಾಯಾಳುಗಳು, ಕುಟುಂಬಸ್ಥರು ಹಾಗೂ ಪ್ರವಾಸಿಗರನ್ನು ಸ್ವಂತ ಊರು-ಮನೆಗಳಿಗೆ ತಲುಪಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಇದಕ್ಕಾಗಿ ಹೆಚ್ಚಿನ ವಿಮಾನ ವ್ಯವಸ್ಥೆ ಸಹ ಮಾಡಲಾಗಿದೆ ಎಂದರು.

ಕರ್ನಾಟಕದ ಅನೇಕರು ಪಹಲ್ಗಾಮ್ ಪ್ರವಾಸಿ ತಾಣದಲ್ಲಿದ್ದು, ರಾಜ್ಯಕ್ಕೆ ಮರಳಲು ಬಯಸಿದ್ದರಿಂದ ಅವರೆಲ್ಲರನ್ನು ಕರೆತರಲು ವಿಶೇಷ ವಿಮಾನ ವ್ಯವಸ್ಥೆ ಮಾಡಲಾಗಿದೆ. ಅಲ್ಲದೇ, ಗ್ರಾಹಕ ವ್ಯವಹಾರಗಳ ಸಚಿವನಾಗಿ ವಿಮಾನಯಾನ ಕಂಪನಿಗಳು ಹೆಚ್ಚಿನ ಟಿಕೆಟ್ ದರ ಕಲ್ಪಿಸದಂತೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದೇನೆ ಎಂದು ತಿಳಿಸಿದರು.

**ಜಮ್ಮು-ಕಾಶ್ಮೀರದ ಶಾಂತಿ ಕೆಡಿಸಲು ಷಡ್ಯಂತ್ರ:** ಜಮ್ಮು-ಕಾಶ್ಮೀರ ಭಾರತದ ಮುಕುಟದಂತಿದ್ದು, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕೇಂದ್ರ ಸರ್ಕಾರ ಬಹು ದೊಡ್ಡ ಪ್ರವಾಸೋದ್ಯಮ ಕ್ಷೇತ್ರವನ್ನಾಗಿ ಅಭಿವೃದ್ಧಿಪಡಿಸಿದೆ. ಸ್ವಿಟ್ಜರ್‌ಲ್ಯಾಂಡ್‌ಗಿಂತಲೂ ಸುಂದರವಾಗಿದೆ ಎಂಬ ಭಾವನೆಯಿಂದ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಕಾಶ್ಮೀರಕ್ಕೆ ಭೇಟಿ ನೀಡುತ್ತಿದ್ದರು. ಇದನ್ನು ಸಹಿಸದೇ ಅಲ್ಲಿ ಅಶಾಂತಿ ಸೃಷ್ಟಿಸಿ, ಪ್ರವಾಸೋದ್ಯಕ್ಕೆ ಪೆಟ್ಟು ನೀಡಲು ಭಯೋತ್ಪಾದಕ ಚಟುವಟಿಕೆ ನಡೆಸಲಾಗಿದೆ ಎಂದು ಅಭಿಪ್ರಾಯಪಟ್ಟರು.

ಕಳೆದ ಐದಾರು ವರ್ಷಗಳಲ್ಲಿ ಜಮ್ಮು-ಕಾಶ್ಮೀರದ ಪ್ರವಾಸೋದ್ಯಮ ಅಭೂತಪೂರ್ವವಾಗಿ ಬೆಳೆದಿದೆ. ಇಲ್ಲಿನವರಿಗೆ ಪ್ರವಾಸೋದ್ಯಮದಿಂದ ಅತಿ ಹೆಚ್ಚು ಆದಾಯ ಬಂದಿದೆ. ಅಲ್ಲದೇ, ಲೋಕಸಭೆ, ವಿಧಾನಸಭೆ ಮತ್ತು ಸ್ಥಳೀಯ ಸಂಸ್ಥೆಗಳ ಚುನಾವಣೆ ಸಹ ಅತ್ಯಂತ ಶಾಂತಿಯುತವಾಗಿ ಯಶಸ್ವಿಯಾಗಿ ನಡೆದಿವೆ. ಜೊತೆಗೆ ಕೇಂದ್ರ ಸರ್ಕಾರದ ಅಭಿವೃದ್ಧಿ ಕಾರ್ಯಗಳು ಸೇರಿ ಎಲ್ಲವೂ ಭಯೋತ್ಪಾದಕರ ಕಣ್ಣು ಕುಕ್ಕಿವೆ. ಅದರ ಪರಿಣಾಮವೇ ಭಯೋತ್ಪಾದನಾ ಕೃತ್ಯ ಎಂದು ಹೇಳಿದರು.

**ಭಯೋತ್ಪಾದನೆ ನಿಗ್ರಹಕ್ಕೆ ಇನ್ನಷ್ಟು ಕಠಿಣ ಕ್ರಮ:** ಕಣಿವೆ ರಾಜ್ಯ ಸೇರಿದಂತೆ ದೇಶದ ಎಲ್ಲೆಡೆಯೂ ಭಯೋತ್ಪಾದನೆ ನಿಗ್ರಹಕ್ಕೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ ಕಟ್ಟುನಿಟ್ಟಿನ ಕ್ರಮ ಜರುಗಿಸಿದೆ. ಆದ್ದರಿಂದಲೇ ದೇಶದಲ್ಲಿ 2019ರಿಂದ ಈಚೆಗೆ ಭಯೋತ್ಪಾದಕ ಚಟುವಟಿಕೆ ಇಲ್ಲವಾಗಿತ್ತು. ಪಹಲ್ಗಾಮ್ ಭಯೋತ್ಪಾದಕರ ದಾಳಿಯನ್ನು ಕೇಂದ್ರ ಸರ್ಕಾರ ಗಂಭೀರವಾಗಿ ತೆಗೆದುಕೊಂಡಿದ್ದು, ಇದರ ವಿರುದ್ಧ ಹೋರಾಡಲಿದೆ. ಭಾರತವನ್ನು ಶೂನ್ಯ ಭಯೋತ್ಪಾದನೆಯತ್ತ ಕೊಂಡೊಯ್ಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

## ಉಗ್ರರ ದಾಳಿ ಪ್ರಪಂಚಕ್ಕೇ ದೊಡ್ಡ ಆಘಾತ

# ಇಂತಹ ಉಗ್ರ ಸಂಘಟನೆಗಳನ್ನು ಸದೆಬಡೆಯಬೇಕು: ಡಿಕೆಶಿ

**ಬೆಂಗಳೂರು:** ಪಹಲ್ಗಾಮ್ ಉಗ್ರರ ದಾಳಿ ವಿಚಾರದಲ್ಲಿ ಕೇಂದ್ರ ಸರ್ಕಾರದ ಜೊತೆಗೆ ನಿಲ್ಲುತ್ತೇವೆ, ರಾಜಕೀಯ ಮಾಡುವುದಿಲ್ಲ, ಕಾಶ್ಮೀರದಲ್ಲಿನ ಉಗ್ರರ ದಾಳಿ ಇಡೀ ಪ್ರಪಂಚಕ್ಕೆ ದೊಡ್ಡ ಆಘಾತ. ಈ ಭಯೋತ್ಪಾದಕ ದಾಳಿಯನ್ನು ನಾವು ಖಂಡಿಸುತ್ತೇವೆ. ಈ ಉಗ್ರರು ಹಾಗೂ ಭಯೋತ್ಪಾದಕ ಸಂಘಟನೆಗಳನ್ನು ಸದೆಬಡಿಯಬೇಕು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.



ಕ್ವೀನ್ಸ್ ರಸ್ತೆಯ ಕೆಪಿಸಿಸಿ ಕಚೇರಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನಾವು ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಬೇಕು. ಕೇಂದ್ರ ಸರ್ಕಾರ ಈ ವಿಚಾರದಲ್ಲಿ ಜಾಗೃತವಾಗಿ ಕೆಲಸ ಮಾಡಬೇಕಿದೆ. ಮುಖ್ಯಮಂತ್ರಿಗಳು ಈ ವಿಚಾರ ತಿಳಿದ ಕೂಡಲೇ ತಕ್ಷಣವೇ ರಾಜ್ಯ ಸರ್ಕಾರದ ಪರವಾಗಿ ಸಚಿವ ಸಂತೋಷ ಲಾಡ್ ಅವರ ಮುಖಂಡತ್ವದಲ್ಲಿ ಒಂದು ತಂಡವನ್ನು ಕಳುಹಿಸಿದ್ದಾರೆ ಎಂದು ತಿಳಿಸಿದರು.

ಧರ್ಮದ ಹೆಸರಿನಲ್ಲಿ ಭಯೋತ್ಪಾದಕ ದಾಳಿ ನಡೆದಿರುವುದು ನಿಜಕ್ಕೂ ಕೆಟ್ಟ ಬೆಳವಣಿಗೆ. ಕಾಂಗ್ರೆಸ್ ಪಕ್ಷ ಇದನ್ನು ಖಂಡಿಸುತ್ತದೆ. ಈ ವಿಚಾರದಲ್ಲಿ ನಮ್ಮ ಪಕ್ಷ ಕೇಂದ್ರ ಸರ್ಕಾರದ ಪರ ನಿಲ್ಲುವುದಾಗಿ ತಿಳಿಸಿದೆ. ಕೇಂದ್ರ ಸರ್ಕಾರ ಈ ಭಯೋತ್ಪಾದಕರನ್ನು ಸದೆಬಡಿಯಬೇಕು. ಇಂತಹ ಭಯೋತ್ಪಾದಕ ಸಂಘಟನೆಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು. ಇಂತಹ ಸಂಘಟನೆಗಳು ಯಾವುದೇ ದೇಶಕ್ಕೆ ಸಂಬಂಧಿಸಿದರೂ ಇವುಗಳನ್ನು ಬುಡಸಮೇತ ಕಿತ್ತೊಗೆಯಬೇಕು. ಕಾಶ್ಮೀರದಲ್ಲಿ ಶಾಂತಿ ನೆಲೆಸುವಂತೆ ಮಾಡಬೇಕು ಎಂದು ಹೇಳಿದರು.

ಈ ಘಟನೆ ವಿದೇಶಾಂಗ ನೀತಿ, ಪ್ರವಾಸಿಗರು ಹಾಗೂ ದೇಶದ ಜನರ ಮೇಲೆ ಪ್ರಭಾವ ಬೀರುವುದರಿಂದ ಕೇಂದ್ರ ಸರ್ಕಾರ ಈ ವಿಚಾರವಾಗಿ ಸರ್ವಪಕ್ಷ ಸಭೆ ಕರೆಯಬೇಕು. ನಾನು ಈಗಷ್ಟೇ ದಾಳಿಯಲ್ಲಿ ಮೃತರ ಕುಟುಂಬದವರ ಜೊತೆ ಚರ್ಚೆ ಮಾಡಿದೆ. ಶಿವಮೊಗ್ಗ ಜಿಲ್ಲಾ ಸಚಿವರು ಹಾಗೂ ಪೊಲೀಸ್ ಅಧಿಕಾರಿಗಳ ಜೊತೆ ಮಾತನಾಡಿದ್ದು, ಮೃತರ ಕುಟುಂಬಸ್ಥರನ್ನು ಭೇಟಿ ಮಾಡುವಂತೆ ತಿಳಿಸಿದ್ದೇನೆ ಎಂದರು.

ಧರ್ಮದ ಆಧಾರದ ಮೇಲೆ ಹತ್ಯೆ ನಡೆಸಿರುವ ದಾಳಿಯನ್ನು ಇದೇ ಮೊದಲ ಬಾರಿಗೆ ನೋಡಿದ್ದೇನೆ. ನಮ್ಮ ಸಮಾಜ ಎತ್ತ ಸಾಗುತ್ತಿದೆ ಎಂದು ಆಘಾತವಾಗಿದೆ. ಇದನ್ನು ಸಹಿಸಲು ಸಾಧ್ಯವಿಲ್ಲ. ಈ ಸಂದರ್ಭದಲ್ಲಿ ಮೃತರ ಆತ್ಮಕ್ಕೆ ಶಾಂತಿ ಸಿಗಲಿ ಹಾಗೂ ಈ ದುಃಖವನ್ನು ಭರಿಸುವ ಶಕ್ತಿ ಅವರ ಕುಟುಂಬದವರಿಗೆ ಸಿಗಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ ಎಂದು ಹೇಳಿದರು.

ಗುಪ್ತಚರ ಇಲಾಖೆ ವೈಫಲ್ಯ ಇದೆ ಎಂದು ಭಾವಿಸುತ್ತೀರಾ ಎಂದು ಕೇಳಿದಾಗ, ಈ ಬಗ್ಗೆ ನಾನು ಪ್ರತಿಕ್ರಿಯೆ ನೀಡುವುದಿಲ್ಲ. ಈ ವಿಚಾರದಲ್ಲಿ ನಾವು ರಾಜಕೀಯ ಮಾಡುವುದಿಲ್ಲ. ಕೇಂದ್ರ ಸರ್ಕಾರ ಸರ್ವಪಕ್ಷ ಸಭೆ ಕರೆದು ಈ ವಿಚಾರವನ್ನು ಚರ್ಚಿಸಬೇಕು. ದೇಶವನ್ನು ರಕ್ಷಣೆ ಮಾಡುವುದು ನಮ್ಮ ಮೊದಲ ಆದ್ಯತೆ ಎಂದು ತಿಳಿಸಿದರು.

# 'ದಿ ಕಾಶ್ಮೀರ್ ಫೈಲ್ಸ್' ಚಿತ್ರಕ್ಕೂ ಪಹಲ್ಗಾಮ್ ಘಟನೆಗೂ ವ್ಯತ್ಯಾಸವಿಲ್ಲ

**ಉಡುಪಿ:** ಪಹಲ್ಗಾಮ್ ದುರ್ಘಟನೆಯಿಂದ ಬಹಳ ಆಘಾತವಾಗಿದೆ. 'ದಿ ಕಾಶ್ಮೀರ್ ಫೈಲ್ಸ್' ಚಿತ್ರಕ್ಕೂ ಈ ಘಟನೆಗೂ ವ್ಯತ್ಯಾಸವಿಲ್ಲ ಎಂದು ಉಡುಪಿ ಪೇಜಾವರ ಮಠಾಧೀಶರಾದ ಶ್ರೀ ವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ ಹೇಳಿದ್ದಾರೆ.

ಪಹಲ್ಗಾಮ್‌ನಲ್ಲಿ ಹಿಂದೂಗಳ ಮೇಲೆ ಉಗ್ರರು ದಾಳಿ ನಡೆಸಿದ ವಿಚಾರವಾಗಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಆ ಕಡೆ ಪಶ್ಚಿಮ ಬಂಗಾಳ, ಈ ಕಡೆ ಕಾಶ್ಮೀರದಲ್ಲಿ ಹಿಂದೂಗಳ ಮೇಲೆ ದೌರ್ಜನ್ಯ ನಡೆಯುತ್ತಿದೆ. ದಿ ಕಾಶ್ಮೀರ್ ಫೈಲ್ಸ್ ಚಿತ್ರಕ್ಕೆ ವ್ಯತಿರಿಕ್ತ ಇಲ್ಲದೇ ಈ ಘಟನೆ ನಡೆದಿದೆ. ಈ ಘಟನೆ ಬಹಳ ಆಘಾತಕಾರಿ, ಸರ್ಕಾರ ಇದಕ್ಕೆ ಬಲವಾದ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಇಂತಹ ಘಟನೆ ದೇಶದಲ್ಲೆಲ್ಲೂ ಮರುಕಳಿಸಬಾರದು. ದೇಶದೊಳಗೆ ಸೂಕ್ತ ಭದ್ರತೆ ಕೈಗೊಳ್ಳುವಂತೆ ಕೇಂದ್ರ ಸರ್ಕಾರವನ್ನು ಮನವಿ ಮಾಡುತ್ತೇನೆ ಎಂದು ಹೇಳಿದರು.



**ಜಾಗತಿಕ ಷಡ್ಯಂತ್ರ: ಪುತ್ತಿಗೆ ಶ್ರೀ:** ಕಾಶ್ಮೀರದಲ್ಲಿ ಹಿಂದೂಗಳ ಮೇಲಿನ ದಾಳಿಯಿಂದ ವ್ಯಾಕುಲರಾಗಿದ್ದೇವೆ. ಇದು ಭಯೋತ್ಪಾದನೆ ಅಲ್ಲ ಜಾಗತಿಕ ಷಡ್ಯಂತ್ರ ಎಂದು ಉಡುಪಿ ಪರ್ಯಾಯ ಪುತ್ತಿಗೆ ಶ್ರೀಸುಗುಣೇಂದ್ರ ತೀರ್ಥ ಸ್ವಾಮೀಜಿ ಕಳವಳ ವ್ಯಕ್ತಪಡಿಸಿದರು.

ಹಿಂದೂಗಳ ಮೇಲೆ ಉಗ್ರರ ಆಕ್ರಮಣ ಆತಂಕಕಾರಿ. ಸನಾತನ ಧರ್ಮದ ಅಸ್ತಿತ್ವ ಭಾರತದಲ್ಲಿ ನಾಶವಾಗುವ ಆತಂಕ ಶುರುವಾಗಿದೆ. ಈ ಘಟನೆಯನ್ನು ಖಂಡಿಸುತ್ತೇವೆ ಸರ್ಕಾರ ಎಚ್ಚೆತ್ತು ಶಾಶ್ವತ ಪರಿಹಾರ ಮಾಡಬೇಕು. ಕೇರಳ, ಪಶ್ಚಿಮ ಬಂಗಾಳ ಕಾಶ್ಮೀರದ ಘಟನೆಯಲ್ಲಿ ಮಾಸ್ಟರ್ ಪ್ಲಾನ್ ವರ್ಕ್ ಮಾಡುತ್ತಿದೆ ದೇಶದಲ್ಲಿ ಕಾಣದ ಕೈಗಳು ಸಕ್ರಿಯವಾಗಿ ಕೆಲಸ ಮಾಡುತ್ತಿವೆ ಎಂದರು.

ಹಿಂದುಗಳನ್ನು ನಾಶ ಮಾಡುವ ಹುನ್ನಾರ

ಸರ್ಕಾರ ವಿಮರ್ಶೆ ಮಾಡಿ ದುಷ್ಕೃತ್ಯಗಳ ಮೂಲಬೇರು ಕಿತ್ತೆಸೆಯಬೇಕು. ಉಗ್ರವಾದಿ ಸಮಸ್ಯೆಯನ್ನು ಪೂರ್ಣ ನಿರ್ಮೂಲನೆ ಮಾಡಲು ಒತ್ತಾಯಿಸುತ್ತೇನೆ. ಉಗ್ರರು, ನಿರಪರಾಧಿಗಳನ್ನು ಸಾರ್ವಜನಿಕರನ್ನು ಕೊಲ್ಲುತ್ತಾರೆ ಎಂಬ ಭಾವನೆ ಇತ್ತು. ಹಿಂದೂಗಳನ್ನು ನಾಶ ಮಾಡುವುದೇ ಇವರ ಹೊನ್ನಾರ ಎಂಬುದು ಸ್ಪಷ್ಟವಾಗಿದೆ. ಕೇಂದ್ರ ಸರ್ಕಾರ ಸೂಕ್ತ ಕ್ರಮವನ್ನು ಕೈಗೊಳ್ಳಬೇಕು ಎಂದು ಹೇಳಿದರು.

# ನ್ಯಾ.ಡಾ.ಶಿವರಾಜ್ ಪಾಟೀಲರಿಗೆ ಅಭಿನಂದನಾ ಸಮಾರಂಭ



**ಬೆಂಗಳೂರು:** ಕಳೆದ ಒಂದು ಸಾವಿರ ವರ್ಷಗಳಲ್ಲಿ ಆಗದ ಆಕ್ರಮಗಳು, ಆಕ್ರಮಣಗಳು ಕೇವಲ ಒಂದೇ ವರ್ಷದಲ್ಲಿ ನಡೆದಿದೆ. ದೊಡ್ಡ ದೊಡ್ಡ ವ್ಯಕ್ತಿಗಳ ಅಕ್ರಮಗಳು, ಅನಾಚಾರ, ದೌರ್ಜನ್ಯಗಳಿಗೆ ಕಠಿಣ ಶಿಕ್ಷೆ ಕೊಡಿಸುವ ಬಗ್ಗೆ ವಿಶೇಷ ಕಾನೂನು ರೂಪಿಸಬೇಕಾಗಿದೆ ಎಂದು ಕಾನೂನು ಮತ್ತು ಸಂಸದೀಯ ಸಚಿವ ಹೆಚ್.ಕೆ. ಪಾಟೀಲ ಹೇಳಿದ್ದಾರೆ.

ಭಾರತೀಯ ವಿದ್ಯಾ ಭವನದಲ್ಲಿ. ಶ್ರೀ ಶ್ರೀ ಡಾ. ಶಿವಕುಮಾರ್ ಸ್ವಾಮೀಜಿಗಳ ಜಯಂತೋತ್ಸವ ಹಾಗೂ ಗೌ. ನ್ಯಾ. ಶಿವರಾಜ್ ಎಸ್ ಪಾಟೀಲ್ ಅಭಿನಂದನಾ ಸಮಿತಿಯಿಂದ ಆಯೋಜಿಸಿದ್ದ ಕರ್ನಾಟಕ ರತ್ನ, ಡಾ. ಶಿವಕುಮಾರ ಸ್ವಾಮಿಗಳ 118ನೇ ಜಯಂತೋತ್ಸವ ಹಾಗೂ ಜಸ್ಟೀಸ್ ಡಾ. ಶಿವರಾಜ್ ಪಾಟೀಲರಿಗೆ ಅಭಿನಂದನಾ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಸಾವಿರ ವರ್ಷಗಳಲ್ಲಿ ಆದ ಆಕ್ರಮಗಳು ಕೇವಲ ಒಂದೇ ವರ್ಷದಲ್ಲಿ ಎಲ್ಲರೂ ಘಟಿಸಿವೆ. ಮಾನವೀಯತೆ ಮರೆತಂತೆ ವರ್ತಿಸುತ್ತಿದ್ದಾರೆ. ಸಮಾಜಕ್ಕೆ ನೈತಿಕತೆ ಬೋಧಿಸುವವರು, ಕಾನೂನು, ನ್ಯಾಯಾಂಗ ವ್ಯವಸ್ಥೆಯನ್ನು ಎತ್ತಿ ಹಿಡಿಯುವರು, ರಾಜಕೀಯ ಕ್ಷೇತ್ರ, ಆಡಳಿತ ವ್ಯವಸ್ಥೆಯ ಮೊದಲ ಆರೇಳು ಅಗ್ರಪಂಕ್ತಿಯ ವ್ಯಕ್ತಿಗಳು ಇಂತಹ ಹೇಯ ಕೃತ್ಯಗಳಲ್ಲಿ ತೊಡಗಿದ್ದಾರೆ. ಈಗಿರುವುದು ಸಣ್ಣ ಸಣ್ಣ ಅಪರಾಧಗಳಿಗೆ ಶಿಕ್ಷಿಸುವ ಕಾನೂನುಗಳಾಗಿವೆ. ಹೀಗಾಗಿ ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗ ಒಳಗೊಂಡಂತೆ ದೊಡ್ಡ ವ್ಯಕ್ತಿಗಳಿಗೆ ಕಾನೂನಿನ ಮೂಲಕ ಬಿಸಿ ಮುಟ್ಟಿಸಿ ಸರ್ಕಾರ, ಸಮಾಜಕ್ಕೆ ವಿಶೇಷ ಸಂದೇಶ ರವಾನಿಸಬೇಕಾಗಿದೆ. ಇದಕ್ಕಾಗಿ ನ್ಯಾಯಾಂಗ ಕ್ಷೇತ್ರದ ಗಣ್ಯರು ಸೂಕ್ತ ಮಾರ್ಗದರ್ಶನ ಮಾಡಬೇಕು ಎಂದು ಮನವಿ ಮಾಡಿದರು.

# ಪಾಕಿಸ್ತಾನ ಅವನತಿ ಆರಂಭವಾಗಿದೆ ಜಗದೀಶ್ ಶೆಟ್ಟರ್ ಎಚ್ಚರಿಕೆ

**ಹುಬ್ಬಳ್ಳಿ:** ಪಾಕಿಸ್ತಾನ ಪ್ರೋತ್ಸಾಹಿತ ಉಗ್ರಗಾಮಿಗಳು ಕಾಶ್ಮೀರದಲ್ಲಿನ ಪ್ರವಾಸಿಗರ ಮೇಲೆ ದಾಳಿ ಮಾಡಿದ್ದಾರೆ. ಈ ಮೂಲಕ ದೇಶದಲ್ಲಿ ಭಯದ ವಾತಾವರಣ ನಿರ್ಮಾಣ ಮಾಡುತ್ತಿದ್ದಾರೆ ಎಂದು ಮಾಜಿ ಸಿಎಂ, ಸಂಸದ ಜಗದೀಶ್ ಶೆಟ್ಟರ್ ಆಕ್ರೋಶ ಹೊರಹಾಕಿದ್ದಾರೆ.



ಪಹಲ್ಗಾಮ್ ದಾಳಿಯ ಕುರಿತು ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಜಮ್ಮು ಮತ್ತು ಕಾಶ್ಮೀರದಲ್ಲಿ ಇತ್ತೀಚಿನ ದಿನದಲ್ಲಿ ಶಾಂತಿ ನೆಲೆಸಿತ್ತು. ಪ್ರಧಾನಿ ಮೋದಿ, ಅಮಿತ್ ಶಾ ಅವರು ಕೈಗೊಂಡ ಕ್ರಮಗಳಿಂದ ಶಾಂತಿ ನೆಲೆಸಿತ್ತು. ಹೀಗಾಗಿ ಹೆಚ್ಚಿನ ಪ್ರವಾಸಿಗರು ಜಮ್ಮು ಮತ್ತು ಕಾಶ್ಮೀರಕ್ಕೆ ಹೋಗಲು ಆರಂಭ ಮಾಡಿದ್ದರು ಎಂದಿದ್ದಾರೆ.

ದೇಶದ ಜನತೆ ಕಾಶ್ಮೀರದಲ್ಲಿ ಶಾಂತಿ ನೆಲೆಸಬೇಕು ಅನ್ನೋ ಇಚ್ಛೆ ಹೊಂದಿದ್ದಾರೆ. ಮೃತ ಕುಟುಂಬದ ಜೊತೆಗೆ ದೇಶ, ಭಾರತ ಸರ್ಕಾರವಿದೆ. ಉಗ್ರಗಾಮಿಗಳ ಹತ್ಯೆಯಾಗುತ್ತದೆ. ಭಾರತ ದೇಶ ಜಗತ್ತಿನಲ್ಲಿ ಪ್ರಬಲವಾಗಿ ಬೆಳೆಯುತ್ತಿದೆ. ಅದನ್ನು ಸಹಿಸಲು ಪಾಕಿಸ್ತಾನಕ್ಕೆ ಆಗುತ್ತಿಲ್ಲ. ಪಾಕಿಸ್ತಾನ ಅವನತಿ ಆರಂಭವಾಗಿದೆ. ಹಿಂದೂಗಳನ್ನೇ ಟಾರ್ಗೆಟ್ ಮಾಡಿ ದಾಳಿ ಮಾಡಿದ್ದಾರೆ. ಮೋದಿ ಅವರು ಬಲಾಢ್ಯ ರಾಷ್ಟ್ರ ಕಟ್ಟುತ್ತಿದ್ದಾರೆ. ಮೋದಿ ಅವರು ಆದಷ್ಟು ಬೇಗ ಇದಕ್ಕೆ ತಕ್ಕ ಉತ್ತರ ಕೊಡುತ್ತಾರೆ ಎಂದು ಹೇಳಿದ್ದಾರೆ.

ಭದ್ರತಾ ವ್ಯವಸ್ಥೆ ಸರಿಯಿದೆ ಎಂದು ಪ್ರವಾಸಿಗರೇ ಹೇಳಿದ್ದಾರೆ. ಆದರೂ ಈ ಘಟನೆ ನಡೆದಿದೆ. ಯಾವ ಸರ್ಕಾರ ಬಂದಾಗ ಕೂಡಾ ಜಮ್ಮು ಮತ್ತು ಕಾಶ್ಮೀರದಲ್ಲಿ ಶಾಂತಿ ಇರಲಿಲ್ಲ. ಮೋದಿ ಅವರು ಅಧಿಕಾರಕ್ಕೆ ಬಂದ ಮೇಲೆ ಅಲ್ಲಿ ಶಾಂತಿ ನೆಲೆಸಿತ್ತು. ಉಗ್ರಗಾಮಿಗಳನ್ನು ನಾಶ ಮಾಡಬೇಕು. ಪಾಕಿಸ್ತಾನದಲ್ಲಿರುವ ಉಗ್ರರ ನೆಲೆಯನ್ನು ನಾಶ ಮಾಡಬೇಕು ಎಂದು ಕಿಡಿಕಾರಿದ್ದಾರೆ.

## ಮೊದಲನೇ ಪುಟದಿಂದ...

### ಸಭೆ ಕರೆದ ಮೋದಿ

2019ರ ಪುಲ್ವಾಮಾ ಭಯೋತ್ಪಾದಕ ದಾಳಿಯ ನಂತರ ಅಥವಾ 2020 ರ ಭಾರತ-ಚೀನಾ ಬಿಕ್ಕಟ್ಟಿನ ಸಮಯದಲ್ಲಿ ಕಂಡುಬಂದಂತೆ, ರಾಷ್ಟ್ರೀಯ ಭದ್ರತೆಗೆ ಸಂಬಂಧಿಸಿದ ಸಮಸ್ಯೆ ಎದುರಾಗಿದೆ, ಹೀಗಾಗಿ ಸರ್ವಪಕ್ಷ ಸಭೆ ಕರೆಯಲಾಗಿದೆ.

1960ರ ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸುವುದು ಮತ್ತು ಅಟ್ಟಾರಿ ಭೂ-ಸಾರಿಗೆ ಪೋಸ್ಟ್ ಅನ್ನು ತಕ್ಷಣವೇ ಮುಚ್ಚುವುದು ಸೇರಿದಂತೆ ಹಲವಾರು ಕ್ರಮಗಳನ್ನು ಘೋಷಿಸಿದೆ. ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಭದ್ರತೆ ಕುರಿತ ಸಂಪುಟ ಸಮಿತಿ ಸಭೆಯಲ್ಲಿ ಈ ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ.

### ಮುಚ್ಚಿಹಾಕಲು ಸಾಧ್ಯವಿಲ್ಲ

ಜನರು ನಿರಾಶರಾಗಬೇಕು ಎಂಬುವುದೇ ಅವರ ಮುಖ್ಯ ಉದ್ದೇಶ. ಭಾರತ ವಿರೋಧಿ ಶಕ್ತಿಗಳು ದೇಶದ ಒಳಗೆ ಮತ್ತು ಹೊರಗಿದ್ದುಕೊಂಡು ಒಂದು ಪ್ರದೇಶದಲ್ಲಿ ಅಭಾವವನ್ನು ಸೃಷ್ಟಿಸಿ, ಆರ್ಥಿಕತೆಯನ್ನು ಹಾಳುಗೆಡವಿ, ಜನರಲ್ಲಿ ಹತಾಶೆಯನ್ನು ತುಂಬುತ್ತಾರೆ. ಆ ನಿರ್ಜನತೆ ಮತ್ತು ಹತಾಶೆಯ ವಾತಾವರಣವನ್ನು ಬಳಸಿಕೊಂಡು ಇಡೀ ಪ್ರದೇಶವನ್ನು ತಮ್ಮ ನಿಯಂತ್ರಣಕ್ಕೆ ತೆಗೆದುಕೊಳ್ಳಲು ಪ್ರಯತ್ನಿಸುತ್ತಾರೆ. ಇದು ಅವರ ಕಾರ್ಯತಂತ್ರ ಹಾಗೂ ಒಳಸಂಚಿನ ಒಂದು ಮುಖ್ಯ ಭಾಗವಾಗಿದೆ ಎಂದು ಗುಡುಗಿದರು.

ಭಾರತ ಬದಲಾಗಿದ್ದು, ಜಗತ್ತು ಕೂಡ ಬದಲಾಗಿದೆ. ಇಂದು, ವಾಷಿಂಗ್ಟನ್‌ನಿಂದ ಪಶ್ಚಿಮ ಏಷ್ಯಾದವರೆಗೆ ಜಾಗತಿಕ ಸಮುದಾಯ ಭಾರತದೊಂದಿಗೆ ಹೆಗಲಿಗೆ ಹೆಗಲು ಕೊಟ್ಟು ನಿಂತಿದೆ. ಪ್ರಪಂಚದಾದ್ಯಂತ ಬಲಿಷ್ಠ ರಾಷ್ಟ್ರಗಳು ಈ ಭಯೋತ್ಪಾದಕ ಕೃತ್ಯವನ್ನು ಸ್ಪಷ್ಟವಾಗಿ ಖಂಡಿಸಿ ಭಾರತಕ್ಕೆ ತಮ್ಮ ಬೆಂಬಲವನ್ನು ವ್ಯಕ್ತಪಡಿಸಿವೆ. ಆಧುನಿಕ ಜಗತ್ತಿನಲ್ಲಿ ಭಯೋತ್ಪಾದನೆಗೆ ಯಾವುದೇ ಸ್ಥಾನವಿಲ್ಲ. ಭಾರತದಲ್ಲೂ ಇದಕ್ಕೆ ಕಿಂಚಿತ್ತೂ ಅವಕಾಶವಿಲ್ಲ ಎಂದು ಅಭಿಪ್ರಾಯಪಟ್ಟರು.

ಮೋಸ್ಟ್ ವಾಂಟೆಡ್ ಉಗ್ರ ತಹಾವ್ವೂರ್ ರಾಣಾ ಭಾರತದಲ್ಲಿ ಕಾನೂನಿನಡಿ ಕ್ರಮ ಎದುರಿಸಬೇಕಾಗಿರುವುದು, ದಶಕಗಳ ಕಾಲದ ಅನಿಯಂತ್ರಿತ ದುರ್ಬಳಕೆಯನ್ನು ಕೊನೆಗೊಳಿಸುವ ವಕ್ಫ್ ಕಾಯ್ದೆಗೆ ತಿದ್ದುಪಡಿ ತಂದಿರುವುದು, ಕಾಶ್ಮೀರದಲ್ಲಿ ಜನರನ್ನು ಭಯದ ವಾತಾವರಣದಲ್ಲಿಡುವ 370ನೇ ವಿಧಿಯನ್ನು ರದ್ದುಗೊಳಿಸಿರುವುದು, ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರ ನೇತೃತ್ವದಲ್ಲಿ ಹೆಮ್ಮೆಯ ನವ ಭಾರತದ ಉದಯ ಮತ್ತು ಹಿಂಸೆಯನ್ನು ಸೃಷ್ಟಿಸುವ ಹೇಡಿಗಳಿಗೆ ದೊರಕುತ್ತಿರುವ ಮರೆಯಲಾಗದ ತಕ್ಕ ಉತ್ತರ. ಆದರೆ, ಇಂಥಹ ದಾಳಿಯನ್ನು ಎಂದಿಗೂ ಕ್ಷಮಿಸಲಾಗದು ಮತ್ತು ಮರೆಯಲಾಗದು. ಇದಕ್ಕೆ ಪ್ರತಿಕಾರವನ್ನು ತೀರಿಸಲೇಬೇಕು ಎಂದು ಕಿಡಿಕಾರಿದರು.

ಈ ಹಿಂದೆ ದೇಶ ಸೇವೆಗೈದ ಓರ್ವ ಯೋಧನಾಗಿ ಹಾಗೂ ಇಂದು ನಿಮ್ಮ ಜನಪ್ರತಿನಿಧಿಯಾಗಿ ನಾನು ಹೇಳುವುದೇನೆಂದರೆ, ಪ್ರತಿಯೊಬ್ಬ ಭಾರತೀಯನೂ ಮಾನಸಿಕವಾಗಿ ಸೈನಿಕನಾಗಬೇಕಾದ ಸಮಯವಿದು. ನಮ್ಮ ದೇಶದ ಪ್ರತಿಯೊಂದು ಮನೆಯಿಂದಲೂ ಒಗ್ಗಟ್ಟಿನ ಶಕ್ತಿ ಹೊರಹೊಮ್ಮಲಿ. ಏಕೆಂದರೆ ಈ ಹೋರಾಟ ಕೇವಲ ಕಾಶ್ಮೀರಕ್ಕೆ ಸೀಮಿತವಾಗಿಲ್ಲ. ಪೌರತ್ವ ತಿದ್ದುಪಡಿ ಕಾಯ್ದೆಯನ್ನು ವಿರೋಧಿಸಿದವರ ವಿಕೃತ ಮನಸ್ಥಿತಿಗಳು, ವಕ್ಫ್ ಸುಧಾರಣೆಯನ್ನು ವಿರೋಧಿಸಿದ ಅದೇ ಗುಂಪು ಈ ಕೃತ್ಯಗಳ ಹಿಂದೆಯೂ ಇದೆ. ನಮ್ಮ ಬಲಿಷ್ಠ, ಸ್ವತಂತ್ರ ಮತ್ತು ಸಂಸ್ಕೃತಿಯನ್ನು ಗೌರವಿಸುವ ಭಾರತವನ್ನು ಕಂಡು ಭಯಪಡುವ ಶಕ್ತಿಗಳೇ ಇವೆಲ್ಲವನ್ನೂ ಮಾಡುತ್ತಿವೆ ಎಂದರು.

ಪಹಲ್ಗಾಮ್‌ನಲ್ಲಿ ಹತ್ಯೆಯಾದ ಶಿವಮೊಗ್ಗದ ಮಂಜುನಾಥ್ ಇರಬಹುದು, ದಾಂಪತ್ಯ ಜೀವನಕ್ಕೆ ಕಾಲಿಟ್ಟು ಹೊಸ ಜೀವನವನ್ನು ಆರಂಭಿಸುತ್ತಿದ್ದ ನವ ದಂಪತಿಗಳಿರಬಹುದು ಮತ್ತು ರಜೆಯ ಖುಷಿ ಅನುಭವಿಸಬೇಕಾದ ಮುದ್ದು ಮಗು ಇರಬಹುದು, ಅವರೆಲ್ಲರೂ ನಮ್ಮಂತೆಯೇ ಇದ್ದರು. ಅವರಿಗೂ ಕನಸುಗಳಿದ್ದವು, ಭವಿಷ್ಯವಿತ್ತು. ಈ ದಾಳಿ ಕೇವಲ ಒಂದು ಪ್ರದೇಶಕ್ಕೆ ಆದ ಗಾಯವಲ್ಲ. ಇದು ಇಡೀ ದೇಶಕ್ಕೆ ಆದ ನೋವು. ಈ ದುರಂತ ನಮ್ಮೆಲ್ಲರ ಹೃದಯವನ್ನು ತಟ್ಟಿದೆ. ಭಾರತವು ಈ ನೋವಿಗೆ ಒಗ್ಗಟ್ಟಿನಿಂದ, ತನ್ನೆಲ್ಲಾ ಶಕ್ತಿಯಿಂದ ಮತ್ತು ದೃಢವಾದ ನಿರ್ಧಾರದಿಂದ ಉತ್ತರಿಸುತ್ತದೆ. ನಾವು ಈ ದಾಳಿಯನ್ನು ಎಂದಿಗೂ ಮರೆಯುವುದಿಲ್ಲ ಮತ್ತು ನಮ್ಮೆಲ್ಲರ ಏಕತೆಯೇ ಇದಕ್ಕೆ ಪ್ರಬಲವಾದ ಉತ್ತರವಾಗಲಿದೆ ಎಂದು ಹರಿಹಾಯ್ದರು.

### ಕೇಂದ್ರದ ಜತೆ ನಾವಿದ್ದೇವೆ

ಭಯೋತ್ಪಾದಕರ ದಾಳಿಯಲ್ಲಿ ಭರತ್ ಭೂಷಣ್, ಮಂಜುನಾಥ್ ಮೃತಪಟ್ಟಿದ್ದಾರೆ. ಅವರ ಕುಟುಂಬದವರಿಗೆ ತಲಾ 10 ಲಕ್ಷ ರೂ. ಪರಿಹಾರ ನೀಡುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು. ಅಲ್ಲದೆ, ಭರತ್ ಭೂಷಣ್ , ಮಂಜುನಾಥ್ ಅಂತ್ಯಕ್ರಿಯೆಗೆ ಸರ್ಕಾರದಿಂದ ವ್ಯವಸ್ಥೆ ಮಾಡಲಾಗುತ್ತದೆ. ಭರತ್ ಅಂತಿಮ ಸಂಸ್ಕಾರದಲ್ಲಿ ರಾಮಲಿಂಗಾರೆಡ್ಡಿ ಭಾಗಿಯಾಗುತ್ತಾರೆ. ಮಂಜುನಾಥ್ ಅಂತ್ಯಕ್ರಿಯೆಯಲ್ಲಿ ಮಧು ಬಂಗಾರಪ್ಪ ಭಾಗಿಯಾಗುತ್ತಾರೆ ಎಂದು ಅವರು ಹೇಳಿದರು.

ಬಹುಶಃ ಇದು ಕೇಂದ್ರ ಸರ್ಕಾರ ಗುಪ್ತಚರ ಇಲಾಖೆಯ ವೈಫಲ್ಯ ಆಗಿರಬಹುದು. ಹಾಗೆಂದು, ಮೃತರ ಕುಟುಂಬದದ ಜೊತೆ ಯಾವಾಗಲೂ ರಾಜ್ಯ ಸರ್ಕಾರ ಇರುತ್ತದೆ. ಕಾಶ್ಮೀರದಲ್ಲಿ ಸಿಲುಕಿದ ಇನ್ನುಳಿದವರನ್ನು ಕರೆತರಲು ಸಚಿವ ಸಂತೋಷ್ ಲಾಡ್ ರನ್ನು ಕಳುಹಿಸಿದ್ದೇನೆ. 170ಕ್ಕೂ ಹೆಚ್ಚು ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರುತ್ತಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಮುಖ್ಯಮಂತ್ರಿಗಳು ಬಂದ ಕೂಡಲೇ, 'ತಾತಾ' ಎಂದ ಭರತ್ ಭೂಷಣ್ ಮಗುವಿನ ಕೈಹಿಡಿದು ಸಿದ್ದರಾಮಯ್ಯ ಸಾಂತ್ವನ ಹೇಳಿದರು. ಕುಟುಂಬಸ್ಥರ ಬಳಿ ಸಿದ್ದರಾಮಯ್ಯ ಮಾಹಿತಿ ಪಡೆದರು. ಇದೇ ವೇಳೆ, ಮಗು ಇದೆ ಎಂದರೂ ಕೇಳಲಿಲ್ಲ ಸರ್ ಎಂದು ಭರತ್ ಪತ್ನಿ ಕಣ್ಣೀರು ಹಾಕಿದರು. ಅವರಿಗೆ ಸಾಂತ್ವನ ಹೇಳಿದ ಸಿದ್ದರಾಮಯ್ಯ, ನಿಮ್ಮ ಜತೆ ಸರ್ಕಾರ ಇದೆ ಎಂದು ಧೈರ್ಯದ ಮಾತುಗಳನ್ನಾಡಿದರು.

ಸಿಎಂ ಭೇಟಿಯ ವೇಳೆ, ಮಗುವನ್ನು ತೋರಿಸಿ ಘಟನೆಯ ಭೀಕರತೆಯನ್ನು ಹೇಳಿ ಭರತ್ ಪತ್ನಿ ಸುಜಾತ ಅವರು ಕಣ್ಣೀರಿಟ್ಟರು. ಸಿಎಂ ಮುಂದೆ ಕುಟುಂಬಸ್ಥರು ಬಿಕ್ಕಿ ಬಿಕ್ಕಿ ಅತ್ತಿದ್ದು, ಮಗುವಿನ ಮುಖ ನೋಡಿ ಸಿಎಂ ಸಹ ಭಾವುಕರಾದರು. ಭರತ್ ಪತ್ನಿ, ಸೋದರಮಾವ ಸೀತಾರಾಮ್ ಹಾಗೂ ಭರತ್ ತಂದೆಯವರಿಗೆ ಸಿಎಂ ಸಾಂತ್ವನ ಹೇಳಿದರು.

ಬೆಳಗ್ಗೆ 5:30ರ ವೇಳೆಗೆ ಭರತ್ ಭೂಷಣ್ ಮೃತದೇಹ ಸುಂದರ ನಗರಕ್ಕೆ ಆಗಮಿಸಿತು. ಅಂತಿಮ ದರ್ಶನಕ್ಕೆ ಸಾರ್ವಜನಿಕರಿಗೆ, ಗಣ್ಯರಿಗೆ ಪ್ರತ್ಯೇಕ ವ್ಯವಸ್ಥೆ ಮಾಡಲಾಗಿದೆ. ಭರತ್ ಭೂಷಣ್ ನಿವಾಸದ ಸುತ್ತ ಬಿಗಿಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ. ಭರತ್ ಸ್ಮರಣೆಗಾಗಿ ಪಾರ್ಕ್‌ಗೆ ಭರತ್ ಭೂಷಣ್ ಪಾರ್ಕ್ ಎಂದು ನಾಮಕರಣ ಮಾಡಲಾಗಿದೆ. ರಾಜರಾಜೇಶ್ವರಿ ವಿಧಾನಸಭಾ ಕ್ಷೇತ್ರದಲ್ಲಿ ಬರುವ ವಾರ್ಡ್‌ನ ಪಾರ್ಕ್ ಇದಾಗಿದ್ದು, ಭರತ್ ಭೂಷಣ್ ನಿವಾಸದ ಬಳಿ ಇದೆ. ಅಲ್ಲದೇ ಭರತ್ ಭೂಷಣ್ ಇದೇ ಪಾರ್ಕ್‌ನಲ್ಲಿ ಪ್ರತಿದಿನ ವಾಕಿಂಗ್ ಮಾಡುತ್ತಿದ್ದರು. ಪಾರ್ಕ್ ಒಳಗಿನ ಸಭಾಂಗಣದಲ್ಲಿ ಯಾವುದೇ ಕಾರ್ಯಕ್ರಮ ನಡೆದರೂ ಭರತ್ ಅದರಲ್ಲಿ ಸಕ್ರಿಯರಾಗಿ ಪಾಲ್ಗೊಳ್ಳುತ್ತಿದ್ದರು. ಈಗ ಭರತ್ ಸ್ಮರಣೆಗಾಗಿ ಶಾಸಕ ಮುನಿರತ್ನ ಅವರು ಭರತ್ ಹೆಸರನ್ನೇ ಪಾರ್ಕ್‌ಗೆ ನಾಮಕರಣ ಮಾಡಿದ್ದಾರೆ.

### ಮಂಜುನಾಥ್ ಮೃತದೇಹ

ಮಂಜುನಾಥ್ ರಾವ್ ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ಶಿವಮೊಗ್ಗದಲ್ಲಿ ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಂಡಿದೆ. ಮನೆ ಮುಂಭಾಗದಲ್ಲಿ ಅಂತಿಮ ದರ್ಶನಕ್ಕೆ ಅವಕಾಶ ಮಾಡಲಾಗಿದೆ. ಶಿವಮೊಗ್ಗನಗರ ಸೇರಿದಂತೆ ಗ್ರಾಮಾಂತರ ಪ್ರದೇಶದಿಂದ ಹೆಚ್ಚಿನ ಜನ ಬರುವ ನಿರೀಕ್ಷೆ ಇದ್ದು, ಮನೆಯ ಮುಂದೆ ಬ್ಯಾರಿಕೇಡ್‌ಗಳನ್ನು ಹಾಕಿ ಹೆಚ್ಚಿನ ಸಂಖ್ಯೆಯಲ್ಲಿ ಪೊಲೀಸರನ್ನು ನಿಯೋಜಿಸಲಾಗಿದೆ.

ಬ್ರಾಹ್ಮಣ ಸಂಪ್ರದಾಯದಂತೆ ಅಂತಿಮ ವಿಧಿವಿಧಾನ ನೆರವೇರಲಿದೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

### 20 ಲಕ್ಷ ರೂ. ಬಹುಮಾನ

ಯಾವುದೇ ಅಡಚಣೆ ಉಂಟಾಗದಂತೆ ತಡೆಯಲು ಕಾನೂನು ಜಾರಿ ಸಂಸ್ಥೆಗಳು ಪ್ರಯತ್ನಗಳನ್ನು ತೀವ್ರಗೊಳಿಸಿವೆ.

ಪಹಲ್ಗಾಮ್ ಉಗ್ರರ ದಾಳಿ, ಕನ್ನಡಿಗರ ನೆರವಿಗೆ ಅಧಿಕಾರಿಗಳನ್ನ ಕಳುಹಿಸಿದ ಸಿಎಂ

ಪಹಲ್ಗಾಮ್ ಭಯೋತ್ಪಾದಕ ದಾಳಿಯ ಹೊಣೆಯನ್ನು ಲಷ್ಕರ್-ಎ-ತೊಯ್ಬಾ ಸಂಘಟನೆ 'ದಿ ರೆಸಿಸ್ಟೆನ್ಸ್ ಫ್ರಂಟ್' (ಟಿಆರ್ ಎಫ್) ಹೊತ್ತುಕೊಂಡಿದೆ. ಈ ದಾಳಿಯ ಮಾಸ್ಟರ್ ಮೈಂಡ್ ಭಯೋತ್ಪಾದಕ ಸೈಫುಲ್ಲಾ ಖಾಲಿದ್. ಜಮ್ಮು ಮತ್ತು ಕಾಶ್ಮೀರದಲ್ಲಿ ಲಷ್ಕರ್ ಮತ್ತು ಟಿಆರ್‌ಎಫ್‌ನ ಭಯೋತ್ಪಾದಕ ಚಟುವಟಿಕೆಗಳ ಪ್ರಮುಖ ನಿರ್ವಾಹಕ ಸೈಫುಲ್ಲಾ.

ಸೈಫುಲ್ಲಾ ಖಾಲಿದ್‌ನನ್ನು ಸೈಫುಲ್ಲಾ ಕಸೂರಿ ಎಂದೂ ಕರೆಯುತ್ತಾರೆ. ಆತ ಲಷ್ಕರ್ ಎ ತೊಯ್ಬಾ ಉಪ ಮುಖ್ಯಸ್ಥನಾಗಿದ್ದಾನೆ, ಅಂತಾರಾಷ್ಟ್ರೀಯ ಭಯೋತ್ಪಾದಕ ಹಫೀಜ್ ಸಯೀದ್‌ಗೆ ಆಪ್ತ ಎಂದು ಪರಿಗಣಿಸಲಾಗಿದೆ. ಸೈಫುಲ್ಲಾಗೆ ಐಷಾರಾಮಿ ಕಾರುಗಳೆಂದರೆ ಇಷ್ಟ, ಆತನಿಗೆ ಭಾರತದ ಪ್ರಧಾನಿಗಿಂತ ಹೆಚ್ಚಿನ ಭದ್ರತೆ ಇದೆಯಂತೆ.

ಸೈಫುಲ್ಲಾ ಖಾಲಿದ್ ಪಾಕಿಸ್ತಾನದಲ್ಲಿ ಎಷ್ಟು ಪ್ರಭಾವ ಹೊಂದಿದ್ದಾನೆಂದರೆ ಪಾಕಿಸ್ತಾನಿ ಸೇನಾ ಅಧಿಕಾರಿಗಳು ಆತನ ಮೇಲೆ ಹೂಮಳೆ ಸುರಿಸಿ ಬರಮಾಡಿಕೊಳ್ಳುತ್ತಾರೆ. ಆತ ಪಾಕಿಸ್ತಾನದಲ್ಲಿ ವಿಐಪಿಯಂತೆ ಓಡಾಡುತ್ತಾನೆ. ಸೈಫುಲ್ಲಾ ಎರಡು ತಿಂಗಳ ಹಿಂದೆ ಪಾಕಿಸ್ತಾನ ಆಕ್ರಮಿತ ಪಂಜಾಬ್‌ನ ಕಂಗನ್‌ಪುರ ಪ್ರದೇಶಕ್ಕೆ ಬಂದಿದ್ದ, ಅಲ್ಲಿ ಒಂದು ಕಾರ್ಯಕ್ರಮವನ್ನು ಪಾಕಿಸ್ತಾನಿ ಸೇನೆಯ ಕರ್ನಲ್ ಜಾಹಿದ್ ಜರೀನ್ ಖಟ್ಟಕ್ ಆಯೋಜಿಸಿದ್ದರು.

### ಕಾಶ್ಮೀರದಲ್ಲಿ ನರಮೇಧ

ಕೇಂದ್ರ ರೈಲ್ವೆ ಖಾತೆಯ ರಾಜ್ಯ ಸಚಿವ ಸೋಮಣ್ಣ ಅವರು ಮೃತದೇಹವನ್ನು ಬರಮಾಡಿಕೊಂಡು ಅಂತಿಮ ನಮನ ಸಲ್ಲಿಸಿದರು. ವಿಮಾನ ನಿಲ್ದಾಣದ ಒಳಗಡೆ ಸಚಿವ ಸೋಮಣ್ಣ ಮತ್ತು ಅಧಿಕಾರಿಗಳು ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ಪಹಲ್ಗಾಮ್'ನ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟಿರುವ ಕನ್ನಡಿಗರಾದ ಮಂಜುನಾಥ್ ರಾವ್ ಹಾಗೂ ಭರತ್ ಭೂಷಣ್ ಅವರ ಪಾರ್ಥಿವ ಶರೀರಗಳನ್ನು ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಸ್ವೀಕರಿಸಲಾಯಿತು.

ಇದೇ ವೇಳೆ ಪಾರ್ಥಿವ ಶರೀರಕ್ಕೆ ಗೌರವ ನಮನ ಸಲ್ಲಿಸಿ, ದುಃಖ ತಪ್ತ ಕುಟುಂಬಸ್ಥರಿಗೆ ಸಾಂತ್ವನ ಹೇಳಿದೆನು.

ವಿಮಾನ ನಿಲ್ದಾಣದಲ್ಲಿ ಗೌರವ ಸಲ್ಲಿಸಿದ ಬಳಿಕ ಸರ್ಕಾರ ಕುಟುಂಬಸ್ಥರಿಗೆ ಎರಡು ಮೃತ ದೇಹಗಳ ಹಸ್ತಾಂತರ ಮಾಡಿತು. ಒಂದು ಅಂಬುಲೆನ್ಸ್‌ನಲ್ಲಿ ಬೆಂಗಳೂರಿನ ಮತ್ತಿಕೇರೆಯಲ್ಲಿರುವ ಸುಂದರನಗರಕ್ಕೆ ಭರತ್ ಭೂಷಣ್ ಶವ ಮತ್ತೊಂದು ಅಂಬುಲೆನ್ಸ್‌ನಲ್ಲಿ ಶಿವಮೊಗ್ಗದ ಮಂಜುನಾಥ್ ರಾವ್ ಅವರ ಪಾರ್ಥಿವ ಶವವನ್ನು ಕಳುಹಿಸಲಾಯಿತು.

ಬೆಳಗ್ಗೆ 5:30ರ ವೇಳೆಗೆ ಭರತ್ ಭೂಷಣ್ ಶವ ಸುಂದರ ನಗರಕ್ಕೆ ಆಗಮಿಸಿತು. ಅಂತಿಮ ದರ್ಶನಕ್ಕೆ ಸಾರ್ವಜನಿಕರಿಗೆ, ಗಣ್ಯರಿಗೆ ಪ್ರತ್ಯೇಕ ವ್ಯವಸ್ಥೆ ಮಾಡಲಾಗಿದೆ.

### 8 ಜಿಲ್ಲೆಗಳಿಗೆ ಬಂಪರ್?

ಈಗಾಗಲೇ ಡಿಸಿಎಂ ಡಿ.ಕೆ ಶಿವಕುಮಾರ್, ಸಚಿವ ಹೆಚ್.ಸಿ ಮಹದೇವಪ್ಪ, ಕೆ ವೆಂಕಟೇಶ್, ಲಕ್ಷ್ಮಿ ಹೆಬ್ಬಾಳ್ಕರ್ ಬೆಟ್ಟದಲ್ಲಿ ವಾಸ್ತವ್ಯ ಹೂಡಿದ್ದಾರೆ. ಬೆಳಗ್ಗೆ 11:30 ಕ್ಕೆ ಹೆಲಿಕಾಪ್ಟರ್ ಮೂಲಕ ಮಹದೇಶ್ವರ ಬೆಟ್ಟಕ್ಕೆ ಸಿಎಂ ಸಿದ್ದರಾಮಯ್ಯ ಆಗಮಿಸಲಿದ್ದಾರೆ. ಬಳಿಕ ಮಹದೇಶ್ವರರ ಇತಿಹಾಸ ಸಾರುವ ಮ್ಯೂಸಿಯಂ, 376 ಕೊಠಡಿಗಳ ವಸತಿ ಗೃಹ, 1 ಮೆಗಾ ವ್ಯಾಟ್ ಸೋಲಾರ್ ಪ್ಲಾಂಟ್ ಸೇರಿದಂತೆ ವಿವಿಧ ಅಭಿವೃದ್ಧಿ ಕಾರ್ಯಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಲಿದೆ.

ಮಧ್ಯಾಹ್ನ 12:00 ಗಂಟೆಗೆ ಸಚಿವ ಸಂಪುಟ ಸಭೆ ಆರಂಭಗೊಳ್ಳಲಿದ್ದು, ಬಳಿಕ ಪತ್ರಿಕಾಗೋಷ್ಠಿ ನಡೆಯಲಿದೆ. ಸಂಜೆ 4:00 ಗಂಟೆಗೆ ಸಿಎಂ ಅಧ್ಯಕ್ಷತೆಯಲ್ಲಿ ಮಲೆಮಹದೇಶ್ವರ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಸಭೆ ನಡೆಯಲಿದೆ. ಬಳಿಕ ಮಹದೇಶ್ವರ ಬೆಟ್ಟದಲ್ಲಿ ಸಿಎಂ ವಾಸ್ತವ್ಯ ಹೂಡಲಿದ್ದಾರೆ.

### ಹಸ್ತಾಂತರ

ಹೀಗಾಗಿ ಆಕೆಯನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಲು ನಿಮ್ಹಾನ್ಸ್ ಆಸ್ಪತ್ರೆಗೆ ಕಳುಹಿಸಿದ್ದ ಪೊಲೀಸರು, ವೈದ್ಯಕೀಯ ವರದಿ ಕೇಳಿದ್ದರು. ಇದೀಗ, ತನಿಖೆಗೆ ಒಳಪಡಿಸಲು ಕೃತಿ ಮಾನಸಿಕವಾಗಿ ಫಿಟ್ ಇದ್ದಾರೆ ಎಂದು ವೈದ್ಯಕೀಯ ವರದಿ ತಿಳಿಸಿದೆ. ಹೀಗಾಗಿ ಹೆಚ್‌ಎಸ್‌ಆರ್ ಲೇಔಟ್ ಪೊಲೀಸರು ವಿಚಾರಣೆಗೆ ಒಳಪಡಿಸಿದ್ದಾರೆ.

ಎರಡು ದಿನದ ಹಿಂದೆಯೇ, ಅಂದರೆ ಕೊಲೆ ನಡೆದ ಮರುದಿನವೇ ಪ್ರಕರಣವನ್ನು ಸಿಸಿಬಿಗೆ ವರ್ಗಾವಣೆ ಮಾಡಿ ಪೊಲೀಸ್ ಕಮಿಷನರ್ ಆದೇಶ ಹೊರಡಿಸಿದ್ದರು. ಆದರೆ, ಬುಧವಾರ ಕೇಸ್ ಫೈಲ್ ಅನ್ನು ಅಧಿಕೃತವಾಗಿ ಹಸ್ತಾಂತರ ಮಾಡಲಾಗಿದೆ. ಕೇಸ್ ಫೈಲ್ ಅನ್ನು ಹೊಸದಾಗಿ ಪ್ರಕರಣದ ತನಿಖಾಧಿಕಾರಿಯಾಗಿ ನೇಮಕಗೊಂಡಿರುವ ಸಿಸಿಬಿಯ ಎಸಿಪಿ ಧರ್ಮೇಂದ್ರ ಪಡೆದುಕೊಂಡಿದ್ದಾರೆ.

### ವಿಚಾರಣೆಗೆ ಸಹಕರಿಸದ ಕೃತಿ

ಓಂ ಪ್ರಕಾಶ್ ಮಗಳು ಕೃತಿಯನ್ನು ಬುಧವಾರ ಬೆಳಗ್ಗೆಯಿಂದಲೂ ಪೊಲೀಸರು ವಿಚಾರಣೆಗೆ ಒಳಪಡಿಸಿದ್ದು, ಆಕೆ ಸರಿಯಾಗಿ ಸ್ಪಂದಿಸುತ್ತಿಲ್ಲ ಎಂದಿದ್ದಾರೆ. ಕೃತಿಯೇ ಕೊಲೆ ಮಾಡಿದ್ದಾಳೆ ಎಂದು ಬಂಧಿಸಲು ಸಾಕ್ಷಿಗಳು ಸಿಕ್ಕಿಲ್ಲ. ಸಂಜೆಯವರೆಗೂ ವಿಚಾರಣೆ ನಡೆಸಿ ಕೇಸ್ ಫೈಲ್ ಹಸ್ತಾಂತರ ಮಾಡುವ ಮೊದಲು ಆಕೆಯನ್ನು ಮನೆಗೆ ಕಳುಹಿಸಲಾಗಿದೆ. ಜೊತೆಗೆ ಸಿಸಿಬಿ ಅಧಿಕಾರಿಗಳು ಅವಶ್ಯಕತೆ ಇದ್ದಾಗ ನೋಟಿಸ್ ನೀಡಿ ಕೃತಿಯ ವಿಚಾರಣೆ ನಡೆಸಲು ತೀರ್ಮಾನ ಮಾಡಿದ್ದಾರೆ.

ಈ ಎಲ್ಲ ಬೆಳವಣಿಗೆಗಳ ನಡುವೆ ಕೇಸ್ ಫೈಲ್ ಪಡೆದಿರುವ ಸಿಸಿಬಿ ಅಧಿಕಾರಿಗಳು ಇಂದು, ಜೈಲಿನಲ್ಲಿ ಇರುವ ಪಲ್ಲವಿಯನ್ನು ತಮ್ಮ ವಶಕ್ಕೆ ನೀಡುವಂತೆ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಲು ತಯಾರಿ ನಡೆಸಿದ್ದಾರೆ. ಇಂದು ಮುಕ್ತ ನ್ಯಾಯಾಲಯದಲ್ಲಿಯೇ ಪಲ್ಲವಿಯನ್ನು ಸಿಸಿಬಿ ವಶಕ್ಕೆ ಪಡೆಯುವ ಸಾಧ್ಯತೆ ಇದ್ದು, ವಿಚಾರಣೆ ನಂತರ ಯಾವ ಯಾವ ಅಂಶಗಳು ಹೊರಬರುತ್ತವೆ ಎಂಬುದನ್ನು ಕಾದುನೋಡಬೇಕಿದೆ.

ಸಂಜೆ ಮುಗಿಲು
ಗುರುವಾರ
24.4.2025



### ಸತ್ಯಾಂಶಗಳ ಆಧಾರದ ಮೇಲೆ

# ಚುನಾವಣಾ ಆಯೋಗದಿಂದ ಅಂಕಿ ಅಂಶಗಳ ಬಿಡುಗಡೆ

**ಬೆಂಗಳೂರು:** ಮಹಾರಾಷ್ಟ್ರದಲ್ಲಿ ನಡೆದ ವಿಧಾನಸಭಾ ಚುನಾವಣೆಯ ಸಮಯದಲ್ಲಿ ಬೆಳಿಗ್ಗೆ 7 ರಿಂದ ಸಂಜೆ 6 ರವರೆಗೆ ಮತದಾನ ಕೇಂದ್ರಕ್ಕೆ ತಲುಪಿದ 6,40,87,588 ಮತದಾರರು ಮತ ಚಲಾಯಿಸಿದ್ದಾರೆ. ಗಂಟೆಗೆ ಸರಾಸರಿ 58 ಲಕ್ಷ ಮತಗಳು ಚಲಾವಣೆಯಾಗಿವೆ. ಈ ಸರಾಸರಿ ಪ್ರವೃತ್ತಿಗಳನ್ನು ಗಮನಿಸಿದರೆ, ಕಳೆದ ಎರಡು ಗಂಟೆಗಳಲ್ಲಿ ಸುಮಾರು 116 ಲಕ್ಷ ಮತದಾರರು ಮತ ಚಲಾಯಿಸಿರಬಹುದು. ಆದ್ದರಿಂದ, ಎರಡು ಗಂಟೆಗಳಲ್ಲಿ ಮತದಾರರು 65 ಲಕ್ಷ ಮತಗಳನ್ನು ಚಲಾಯಿಸಿದ್ದು ಸರಾಸರಿ ಗಂಟೆಯ ಮತದಾನದ ಪ್ರವೃತ್ತಿಗಿಂತ ಬಹಳ ಕಡಿಮೆಯಾಗಿದೆ. ಇದಲ್ಲದೆ, ಪ್ರತಿ ಮತಗಟ್ಟೆಯಲ್ಲಿ, ಅಭ್ಯರ್ಥಿಗಳು/ರಾಜಕೀಯ ಪಕ್ಷಗಳು ಔಪಚಾರಿಕವಾಗಿ ನೇಮಿಸಿದ ಮತಗಟ್ಟೆ ಏಜೆಂಟ್‌ಗಳ ಮುಂದೆ ಮತದಾನ ನಡೆಯಿತು. ಮರುದಿನ ಚುನಾವಣಾ ಅಧಿಕಾರಿ (ಆರ್.ಒ) ಮತ್ತು ಚುನಾವಣಾ ವೀಕ್ಷಕರ ಮುಂದೆ ಪರಿಶೀಲನೆಯ ಸಮಯದಲ್ಲಿ ಯಾವುದೇ ರೀತಿಯ ಅಸಹಜ ಮತದಾನದ ಬಗ್ಗೆ ಐ.ಎನ್.ಸಿ ಯ ನಾಮನಿರ್ದೇಶಿತ ಅಭ್ಯರ್ಥಿಗಳು ಅಥವಾ ಅವರ ಅಧಿಕೃತ ಏಜೆಂಟ್‌ಗಳು ಯಾವುದೇ ಆಧಾರರಹಿತ ಆರೋಪಗಳನ್ನು ಮಾಡಿಲ್ಲ. ಮಹಾರಾಷ್ಟ್ರ ಸೇರಿದಂತೆ ಭಾರತದಲ್ಲಿ ಮತದಾರರ ಪಟ್ಟಿಯನ್ನು 1950 ರ ಜನತಾ ಪ್ರಾತಿನಿಧ್ಯ ಕಾಯ್ದೆ ಮತ್ತು 1960 ರ ಮತದಾರರ ನೋಂದಣಿ ನಿಯಮಗಳ ಪ್ರಕಾರ ತಯಾರಿಸಲಾಗುತ್ತದೆ. ಕಾನೂನಿನ ಪ್ರಕಾರ, ಚುನಾವಣೆಗಳಿಗೆ ಮುಂಚಿತವಾಗಿ ಅಥವಾ ಪ್ರತಿ ವರ್ಷಕ್ಕೊಮ್ಮೆ, ಮತದಾರರ ಪಟ್ಟಿಯ ವಿಶೇಷ ಸಾರಾಂಶ ಪರಿಷ್ಕರಣೆಯನ್ನು ನಡೆಸಲಾಗುತ್ತದೆ ಮತ್ತು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ (ಐ.ಎನ್.ಸಿ) ಸೇರಿದಂತೆ ಎಲ್ಲಾ ರಾಷ್ಟ್ರೀಯ/ರಾಜ್ಯ ರಾಜಕೀಯ ಪಕ್ಷಗಳಿಗೆ ಮತದಾರರ ಪಟ್ಟಿಯ ಅಂತಿಮ ಪ್ರತಿಯನ್ನು ಹಸ್ತಾಂತರಿಸಲಾಗುತ್ತದೆ.

ಮಹಾರಾಷ್ಟ್ರ ಚುನಾವಣೆಯ ಸಂದರ್ಭದಲ್ಲಿ ಮತದಾರರ ಪಟ್ಟಿಯನ್ನು ಅಂತಿಮಗೊಳಿಸಿದ ನಂತರ, 9,77,90,752 ಮತದಾರರಿಗೆ ವಿರುದ್ಧವಾಗಿ, 1 ನೇ ಮೇಲ್ಮನವಿ ಪ್ರಾಧಿಕಾರ (ಡಿಎಂ) ಮುಂದೆ ಒಟ್ಟು 89 ಮೇಲ್ಮನವಿಗಳನ್ನು ಮಾತ್ರ ಸಲ್ಲಿಸಲಾಗಿದೆ. 2 ನೇ ಮೇಲ್ಮನವಿ ಪ್ರಾಧಿಕಾರ (ಸಿಇಒ) ಮುಂದೆ ಕೇವಲ 1 ಮೇಲ್ಮನವಿಯನ್ನು ಸಲ್ಲಿಸಲಾಗಿದೆ. ಆದ್ದರಿಂದ, 2024 ರಲ್ಲಿ ಮಹಾರಾಷ್ಟ್ರ ವಿಧಾನಸಭಾ ಚುನಾವಣೆಗಳನ್ನು ನಡೆಸುವ ಮೊದಲು ಐ.ಎನ್.ಸಿ ಅಥವಾ ಯಾವುದೇ ಇತರ ರಾಜಕೀಯ ಪಕ್ಷಗಳ ಬಗ್ಗೆ ಯಾವುದೇ ದೂರು ಇರಲಿಲ್ಲ ಎಂಬುದು ಸ್ಪಷ್ಟವಾಗಿದೆ.

ಮತದಾರರ ಪಟ್ಟಿಯ ಪರಿಷ್ಕರಣೆಯ ಸಮಯದಲ್ಲಿ, 1,00,427 ಮತಗಟ್ಟೆಗಳಿಗೆ, ಇ.ಆರ್.ಒ ಗಳಿಂದ ನೇಮಿಸಲ್ಪಟ್ಟ 97,325 ಬೂತ್ ಮಟ್ಟದ ಅಧಿಕಾರಿಗಳೊಂದಿಗೆ, ಐ.ಎನ್.ಸಿ ಯಿಂದ 27,099 ಸೇರಿದಂತೆ ಎಲ್ಲಾ ರಾಜಕೀಯ ಪಕ್ಷಗಳಿಂದ 1,03,727 ಬೂತ್ ಮಟ್ಟದ ಏಜೆಂಟ್‌ಗಳನ್ನು ಸಹ ನೇಮಿಸಲಾಯಿತು. ಆದ್ದರಿಂದ, ಮಹಾರಾಷ್ಟ್ರದ ಮತದಾರರ ಪಟ್ಟಿಯ ವಿರುದ್ಧ ಎತ್ತಲಾದ ಈ ಆಧಾರರಹಿತ ಆರೋಪಗಳು ಕಾನೂನಿನ ನಿಯಮಕ್ಕೆ ವಿರುದ್ಧವಾಗಿವೆ. ಚುನಾವಣಾ ಆಯೋಗವು 2024 ನೇ ಡಿಸೆಂಬರ್ 24 ರಂದು ಐ.ಎನ್.ಸಿ ಗೆ ನೀಡಿದ ಉತ್ತರದಲ್ಲಿ ಈ ಎಲ್ಲಾ ಸಂಗತಿಗಳನ್ನು ಹೊರತಂದಿದೆ. ಅದು ಭಾರತ ಚುನಾವಣಾ ಆಯೋಗದ ವೆಬ್‌ಸೈಟ್‌ನಲ್ಲಿ ಲಭ್ಯವಿದೆ. ಇಂತಹ ವಿಷಯಗಳನ್ನು ಮತ್ತೆ ಮತ್ತೆ ಎತ್ತುವಾಗ ಈ ಎಲ್ಲಾ ಸಂಗತಿಗಳನ್ನು ಸಂಪೂರ್ಣವಾಗಿ ನಿರ್ಲಕ್ಷಿಸಲಾಗುತ್ತಿದೆ ಎಂದು ತೋರುತ್ತದೆ. ಸಾರಾಂಶ: ಭಾರತದ ಎಲ್ಲಾ ಚುನಾವಣೆಗಳು ಕಾನೂನಿನ ಪ್ರಕಾರ ನಡೆಯುತ್ತವೆ. ಭಾರತದಲ್ಲಿ ಚುನಾವಣೆಗಳು ನಡೆಯುವ ಪ್ರಮಾಣ ಮತ್ತು ನಿಖರತೆಯನ್ನು ಪ್ರಪಂಚದಾದ್ಯಂತ ವ್ಯಾಪಕವಾಗಿ ಪ್ರಶಂಸಿಸಲಾಗುತ್ತದೆ. ಮತದಾರರ ಪಟ್ಟಿ ತಯಾರಿಕೆ, ಮತದಾನ ಮತ್ತು ಎಣಿಕೆ ಇತ್ಯಾದಿಗಳನ್ನು ಒಳಗೊಂಡಂತೆ ಪ್ರತಿಯೊಂದು ಚುನಾವಣಾ ಪ್ರಕ್ರಿಯೆಯನ್ನು ಸರ್ಕಾರಿ ಸಿಬ್ಬಂದಿಯೇ ನಡೆಸುತ್ತಾರೆ ಮತ್ತು ಅದು ಕೂಡ ರಾಜಕೀಯ ಪಕ್ಷಗಳು / ಅಭ್ಯರ್ಥಿಗಳಿಂದ ಮತಗಟ್ಟೆಯಿಂದ ಕ್ಷೇತ್ರ ಮಟ್ಟದವರೆಗೆ ಔಪಚಾರಿಕವಾಗಿ ನೇಮಕಗೊಂಡ ಅಧಿಕೃತ ಪ್ರತಿನಿಧಿಗಳ ಸಮ್ಮುಖದಲ್ಲಿ ನಡೆಯುತ್ತದೆ ಎಂಬುದು ಇಡೀ ರಾಷ್ಟ್ರಕ್ಕೆ ತಿಳಿದಿದೆ. ಯಾರಾದರೂ ತಪ್ಪು ಮಾಹಿತಿಯನ್ನು ಹರಡಿದರೆ, ಅದು ಕಾನೂನಿಗೆ ಅಗೌರವ ತೋರುವುದಲ್ಲದೆ, ಅವರ ಸ್ವಂತ ರಾಜಕೀಯ ಪಕ್ಷದಿಂದ ನೇಮಕಗೊಂಡ ಸಾವಿರಾರು ಪ್ರತಿನಿಧಿಗಳಿಗೆ ಅಪಖ್ಯಾತಿ ತರುತ್ತದೆ ಮತ್ತು ಚುನಾವಣೆಯ ಸಮಯದಲ್ಲಿ ದಣಿವರಿಯಿಲ್ಲದೆ ಮತ್ತು ಪಾರದರ್ಶಕವಾಗಿ ಕೆಲಸ ಮಾಡುವ ಲಕ್ಷಾಂತರ ಚುನಾವಣಾ ಸಿಬ್ಬಂದಿಯನ್ನು ನಿರುತ್ಸಾಹಗೊಳಿಸುತ್ತದೆ. ಮತದಾರರ ಯಾವುದೇ ಪ್ರತಿಕೂಲ ತೀರ್ಪಿನ ನಂತರ, ಚುನಾವಣಾ ಆಯೋಗವು ರಾಜಿಯಾಗಿದೆ ಎಂದು ಹೇಳುವ ಮೂಲಕ ಅದನ್ನು ಕೆಣಕಲು ಪ್ರಯತ್ನಿಸುವುದು ಸಂಪೂರ್ಣವಾಗಿ ಅಸಂಬದ್ಧವಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಬೆಂಗಳೂರು ಗ್ರಾಮಾಂತರ ಜಿಲ್ಲಾ ಪ್ರತಿನಿಧಿಯಾಗಿ ಮದೀಶ್ ಆಯ್ಕೆ

**ವಿಜಯಪುರ:** ಬೆಂಗಳೂರು ಗ್ರಾಮಾಂತರ ಜಿಲ್ಲಾ ಸರ್ವೋದಯ ಮಂಡಳಿಗೆ ಜಿಲ್ಲಾ ಪ್ರತಿನಿಧಿಯಾಗಿ ದೇವನಹಳ್ಳಿ ತಾಲ್ಲೂಕಿನ ಬಿಜ್ಜವಾದ ಗ್ರಾಮದ ಬಿ.ಕೆ ಮದೀಶ್ (ಬಿ.ಕೆ ಮಧು) ಇವರನ್ನು ಬೆಂಗಳೂರು ಗ್ರಾಮಾಂತರ ಜಿಲ್ಲಾ ಸರ್ವೋದಯ ಮಂಡಳಿ ಸರ್ವಾನು ಮತದಿಂದ ಆಯ್ಕೆ ಮಾಡಲಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಸರ್ವೋದಯ



ಮಂಡಳಿಯ ಅಧ್ಯಕ್ಷ ಡಾ.ವಿ.ಪ್ರಶಾಂತ ತಿಳಿಸಿದರು. ಇಂದು ಪಟ್ಟಣದ ಜಿಲ್ಲಾ ಸರ್ವೋದಯ ಮಂಡಳಿಯ ಕಚೇರಿ ಆವರಣದಲ್ಲಿ ಮಹಾರಾಷ್ಟ್ರರಾಜ್ಯದ ಸೇವಾ ಗ್ರಾಮದ ಅಖಿಲ ಭಾರತ ಸರ್ವೋದಯ ಮಂಡಳಿಯ ಸರ್ವ ಸೇವಾ ಸಂಘದ ಮ್ಯಾನೇಜಿಂಗ್ ಟ್ರಸ್ಟಿ ಶೇಕ್ ಹುಸೇನ್ ಇವರ ನೇತೃತ್ವದಲ್ಲಿ ನಡೆದ ಮಂಡಳಿಯ ವಾರ್ಷಿಕ ಸಭೆಯಲ್ಲಿ ಇವರನ್ನು ಸರ್ವಾನು ಮತದಿಂದ ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದರು. ಬಿ.ಕೆ ಮದೀಶ್ ಇವರು ಕಳೆದ ಮೂರು ವರ್ಷಗಳಿಂದ ಬೆಂಗಳೂರು ಗ್ರಾಮಾಂತರ ಜಿಲ್ಲಾ ಸರ್ವೋದಯ ಮಂಡಳಿಯ ಸದಸ್ಯರಾಗಿ ಮಹಾತ್ಮ ಗಾಂಧಿ, ವಿನೋಬಾ ಭಾವೆ ಹಾಗೂ ಜಯಪ್ರಕಾಶ್ ನಾರಾಯಣ್ ರವರ ಆದರ್ಶ ತತ್ವಗಳನ್ನು ಮೈಗೂಡಿಸಿ ಕೊಂಡು ಅನೇಕ ಸೇವಾ ಶಿಬಿರಗಳಲ್ಲಿ ರಾಜ್ಯ,ರಾಷ್ಟ್ರ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿರುತ್ತಾರೆ. ಮತ್ತು ಪ್ರಸ್ತುತ ಇವರು ಬೆಂಗಳೂರಿನ ಕರ್ನಾಟಕ ರಾಜ್ಯ ಮಡಿವಾಳ ಸಂಘದ ರಾಜ್ಯ ನಿರ್ದೇಶಕರಾಗಿಯೂ ಸಹ ಸೇವೆ ಸಲ್ಲಿಸುತ್ತಿರುವರು. ಜಿಲ್ಲಾ ಪ್ರತಿನಿಧಿಯಾಗಿ ಆಯ್ಕೆಗೊಂಡ ಬಿ.ಕೆ ಮದೀಶ್ ರವರನ್ನು ಕರ್ನಾಟಕ ರಾಜ್ಯ ಸರ್ವೋದಯ ಮಂಡಳಿಯ ಅಧ್ಯಕ್ಷ ಡಾ.ಹೆಚ್.ಎಸ್ ಸುರೇಶ್, ಕಾರ್ಯದರ್ಶಿ ಡಾ.ಯಾ.ಚಿ ದೊಡ್ಡಯ್ಯ,ಬೆಂಗಳೂರಿನ ಕರ್ನಾಟಕ ಗಾಂಧಿ ಸ್ಮಾರಕ ನಿಧಿಯ ಅಧ್ಯಕ್ಷ ನಾಡೋಜ ಡಾ.ವೂಡೇ ಪಿ. ಕೃಷ್ಣ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಸರ್ವೋದಯ ಮಂಡಳಿಯ ಕಾರ್ಯದರ್ಶಿ, ವಿ.ಎನ್ ಸೂರ್ಯಪ್ರಕಾಶ್ ಅಭಿನಂದಿಸಿದರು.

## ಡಾ.ಬಿ. ಆರ್. ಅಂಬೇಡ್ಕರ್ ಅವರ 134 ನೇ ಜನ್ಮ ಜಯಂತಿ

**ಶಿರಾ:** ಸರ್ವರಿಗೂ ಸಮಾನತೆ ಕಲ್ಪಿಸಿ ಸಂವಿಧಾನ ರಚಿಸಿದ ಬಾಬಾ ಸಾಹೇಬ್ ಅಂಬೇಡ್ಕರ್ ರವರ ಸಂವಿಧಾನ ವಿಶ್ವದಲ್ಲಿಯೇ ಶ್ರೇಷ್ಠ ಎಂದು ಚಿತ್ರನಟ ಹಾಗೂ ಸಮಾಜಿಕ ಹೋರಾಟಗಾರ ಚೇತನ್ ಹೇಳಿದರು. ಶಿರಾ ತಾಲೂಕಿನ ಯಂಜಲಗೆರೆ ಗ್ರಾಮದಲ್ಲಿ ಜೈ ಭೀಮ್ ಯುವಕರ ಸಂಘ ಆಯೋಜಿಸಿದ್ದ ಸಂವಿಧಾನ ಶಿಲ್ಪಿ ಡಾ.ಬಿ. ಆರ್. ಅಂಬೇಡ್ಕರ್ ಅವರ 134 ನೇ ಜನ್ಮ ಜಯಂತಿಯಲ್ಲಿ ಪಾಲ್ಗೊಂಡು ಮಾತನಾಡಿದರು. ದಿವ್ಯ ಸಾನಿದ್ಯ ವಹಿಸಿ ಮಾತನಾಡಿದ ಶ್ರೀ ಷಡಕ್ಷರಿ ಮುನಿ ಸ್ವಾಮೀಜಿ ರಾಜ್ಯದಲ್ಲಿ ಜನಗಣತಿ ಪರಿಶೀಲನೆ ಸಂದರ್ಭದಲ್ಲಿ ದಲಿತರು ತಮ್ಮ ಜಾತಿ ಕಾಲಂ ನಲ್ಲಿ ಮಾದಿಗ ಎಂದು ನಮೂದಿಸಿ ಬೇಕು. ಇದರಿಂದ ಒಳ ಮೀಸಲಾತಿ ಪಡೆಯಲು ಸಹಕಾರಿ ಯಾಗುತ್ತದೆ. ಶಿಕ್ಷಣ ಮತ್ತು ಸಂಘಟನೆಯಿಂದ ಮಾತ್ರ ಎಲ್ಲವನ್ನು ಪಡೆಯಲು ಸಾಧ್ಯ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಿವೃತ್ತ ಶಿಕ್ಷಕರು ಬಿ. ಗುಂಡಪ್ಪ ವಹಿಸಿದ್ದರು. ನಿವೃತ್ತ ಐಎಎಸ್ ಅಧಿಕಾರಿ ಬಿ. ಎಚ್. ಅನಿಲಕುಮಾರ್, ಪ್ರಾಸ್ತಾವಿಕ ನುಡಿ ನಿವೃತ್ತ ಉಪ ನಿರ್ದೇಶಕ ವೈ. ಕೆ. ಬಾಲಕೃಷ್ಣ, ಪ್ರೊಫೆಸರ್ ಬಗ್ಗನಡು ನಾಗಭೂಷಣ್, ಡಾ.ಓ.ನಾಗರಾಜ್, ನಟರಾಜ್, ಜಿಲ್ಲಾ ಪಂಚಾಯತಿ ಮಾಜಿ ಸದಸ್ಯ ಕೆಂಚಮಾರಯ್ಯ, ಮುಖಂಡರಾದ ನರಸೀಯಪ್ಪ, ಮದಲೂರು ನರಸಿಂಹಮೂರ್ತಿ , ಯಂಜಲಗೆರೆ ಮೂರ್ತಿ, ರಾಕೇಶ್ ಬಾಬು, ಶ್ರೀನಾಥ್, ವೈ.ಕೆ. ತಿಪ್ಪೇಸ್ವಾಮಿ, ದಲಿತ ಸಂಘರ್ಷ ಸಮಿತಿಯ ಟೈರ್ ರಂಗನಾಥ ,ತಿಪ್ಪೇಸ್ವಾಮಿ, ನವೀನ್, ಕಾಂತರಾಜು, ತಿಮ್ಮರಾಜು, ಗೋವಿಂದರಾಜು, ಸುಧಾಕರ್, ಡಾ.ಅರುಂಧತಿ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಈರಸಿದ್ದಮ್ಮ, ದ್ವಾರನಕುಂಟೆ ಲಕ್ಷ್ಮಣ್ ನರಸಿಂಹ ಮೂರ್ತಿ, ಜೈ ಭೀಮ್ ಯುವಕ ಸಂಘದವರು ಗ್ರಾಮಸ್ಥರು ಇದ್ದರು.



## ಪ್ರಾಧಿಕಾರದ ಅಧ್ಯಕ್ಷರ ಪ್ರವಾಸ

**ಬೆಂಗಳೂರು:** ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಪುರುಷೋತ್ತಮ ಬಿಳಿಮಲೆ ಅವರು ಏಪ್ರಿಲ್ 24 ರಂದು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು, ಅಂದು ಸಂಜೆ 4.30 ಗಂಟೆಗೆ ಚಿಕ್ಕಬಳ್ಳಾಪುರ ಕನ್ನಡ ಸಾಹಿತ್ಯ ಪರಿಷತ್, ಚಿಕ್ಕಬಳ್ಳಾಪುರ ಜಿಲ್ಲಾಡಳಿತ, ಜಿಲ್ಲಾ ಪಂಚಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿರುವ ಜಿಲ್ಲಾ ಕನ್ನಡ ಭವನ ಲೋಕಾರ್ಪಣೆ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸಮಾರೋಪ ಸಮಾರಂಭ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಅಂದೇ ಸಂಜೆ ಕೇಂದ್ರಸ್ಥಾನಕ್ಕೆ ವಾಪಾಸ್ಸಾಗಲಿರುವರು.

## ವರನಟ ಡಾ. ರಾಜ್ ಕುಮಾರ್ ಅವರ 97ನೇ ಜನ್ಮ ದಿನಾಚರಣೆ

**ಬೆಂಗಳೂರು:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಡಾ.ರಾಜ್‌ಕುಮಾರ್ ಪ್ರತಿಷ್ಠಾನದ ಸಹಕಾರದೊಂದಿಗೆ ಏಪ್ರಿಲ್ 24 ರಂದು ಮಧ್ಯಾಹ್ನ 3.00 ಗಂಟೆಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುಲೋಚನಾ ಸಭಾಂಗಣದಲ್ಲಿ ವರನಟ ಡಾ. ರಾಜ್‌ಕುಮಾರ್ ಅವರ 97ನೇ ಜನ್ಮ ದಿನಾಚಾರಣೆ ಸಮಾರಂಭವನ್ನು ಆಯೋಜಿಸಿದೆ.

ಸಮಾರಂಭದ ಉದ್ಘಾಟನೆಯನ್ನು ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ನೆರವೇರಿಸಲಿದ್ದು, ಮಾನ್ಯ ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಘನ ಉಪಸ್ಥಿತರಿರುವರು. ಶಿವಾಜಿನಗರ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರಾದ ರಿಜ್ವಾನ್ ಅರ್ಷದ್ ಅವರು ಸಮಾರಂಭದ ಅಧ್ಯಕ್ಷತೆಯನ್ನು ವಹಿಸಲಿರುವರು.

ಸಮಾರಂಭದಲ್ಲಿ ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಮಾನ್ಯ ಲೋಕಸಭಾ ಸದಸ್ಯರಾದ ಪಿ.ಸಿ.ಮೋಹನ್, ಮಾನ್ಯ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್, ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷರಾದ ಸಾಧು ಕೋಕಿಲ, ಶ್ರೀಕಂಠೀರವ ಸ್ಟುಡಿಯೋಸ್ ನಿಯಮಿತದ ಅಧ್ಯಕ್ಷರಾದ ಮಹಬೂಬ್ ಪಾಷ, ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷರಾದ ಶ್ರೀಮತಿ ಆಯೇಷಾ ಖಾನಂ, ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಡಾ. ಶಾಲಿನಿ ರಜನೀಶ್, ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳಾದ ಎಲ್.ಕೆ.ಅತೀಕ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದು, ಹಿರಿಯ ಕಲಾವಿದರು ಚಲನಚಿತ್ರ ನಿರ್ದೇಶಕರಾದ ಎಸ್. ನಾರಾಯಣ, ಹಿರಿಯ ಚಲನಚಿತ್ರ ನಟರಾದ ಡಾ. ಶಿವರಾಜ್‌ಕುಮಾರ್, ಹಿರಿಯ ಚಲನಚಿತ್ರ ನಟರಾದ ರಾಘವೇಂದ್ರ ರಾಜ್‌ಕುಮಾರ್ ಹಾಗೂ ಚಲನಚಿತ್ರ ನಿರ್ಮಾಕರಾದ ಶ್ರೀಮತಿ ಅಶ್ವಿನಿ ಪುನೀತ್ ರಾಜ್‌ಕುಮಾರ್ ಅವರು ಸಮಾರಂಭದಲ್ಲಿ ಉಪಸ್ಥಿತರಿರುವರು.

ಮಾನ್ಯ ಮುಖ್ಯಮಂತ್ರಿಗಳ ಕಾರ್ಯದರ್ಶಿಗಳು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿಗಳಾದ ಶ್ರೀಮತಿ ಬಿ.ಬಿ. ಕಾವೇರಿ ಅವರು ಸಮಾರಂಭದಲ್ಲಿ ಭಾಗವಹಿಸುವ ಎಲ್ಲರನ್ನು ಸ್ವಾಗತಿಸಲಿರುವರು. ಸಮಾರಂಭಕ್ಕೂ ಮುನ್ನ ರಾಮಚಂದ್ರ ಹಡಪದ ಮತ್ತು ತಂಡದವರಿಂದ ಡಾ. ರಾಜ್‌ಕುಮಾರ್ ಅವರ ಚಿತ್ರಗೀತೆಗಳ ಗಾಯನ ಮಾಡಲಿದ್ದಾರೆ. ಸಮಾರಂಭದಲ್ಲಿ ಡಾ. ರಾಜ್‌ಕುಮಾರ್ ಅಭಿಮಾನಿಗಳು, ಸಾರ್ವಜನಿಕರು ಭಾಗವಹಿಸುವುದರೊಂದಿಗೆ ಸಮಾರಂಭವನ್ನು ಯಶಸ್ವಿಗೊಳಿಸುವಂತೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ಎಂ. ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪೊಲೀಸ್ ಇಲಾಖೆಯಿಂದ ಸಹಾಯವಾಣಿ-1930, ವೆಬ್ ಬಾಟ್ ಉನ್ನತೀಕರಣ

# ಸೈಬರ್ ಅಪರಾಧಗಳ ತಡೆಗೆ ಕ್ರಮ

**ಬೆಂಗಳೂರು:** ಪ್ರಸ್ತುತ ದೇಶದಲ್ಲಿ ಹೆಚ್ಚುತ್ತಿರುವ ಆನ್‌ಲೈನ್ ಹಣಕಾಸು ವಂಚನೆಗಳನ್ನು ತಡೆಯಲು ರಾಜ್ಯದಲ್ಲಿ ಸೈಬರ್ ಅಪರಾಧ ಸಹಾಯವಾಣಿ-1930 ಜೊತೆಗೆ ವೆಬ್ ಬಾಟ್ ಉನ್ನತೀಕರಣ ಮಾಡಲಾಗಿದೆ ಎಂದು ರಾಜ್ಯ ಪೊಲೀಸ್ ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನೀರಿಕ್ಷಕರಾದ ಅಲೋಕ್ ಮೋಹನ್ ತಿಳಿಸಿದರು.



ನಗರದ ಮಹಾತ್ಮಗಾಂಧಿ ರಸ್ತೆಯಲ್ಲಿರುವ ಎಡಿಜಿಪಿ ಸಿಎಲ್ ಎಮ್ ಕಾರ್ನರ್ ಹೌಸ್ ಕಚೇರಿಯಲ್ಲಿ ಉನ್ನತೀಕರಿಸಲಾದ ಸೈಬರ್ ಅಪರಾಧ ಸಹಾಯವಾಣಿ-1930 ವೆಬ್ ಬಾಟ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಕರ್ನಾಟಕ ರಾಜ್ಯದಲ್ಲಿ 1930 ಸಹಾಯವಾಣಿಯಲ್ಲಿ ಸ್ವೀಕರಿಸಿದ ಕರೆಗಳ ಸಂಖ್ಯೆ 2022 ರಲ್ಲಿ 1.30 ಲಕ್ಷ ಇದ್ದು, ನಂತರ 2024 ರಲ್ಲಿ 8.26 ಲಕ್ಷಕ್ಕೆ ಮತ್ತು 2025 ರ ಮೊದಲ ತ್ರೈಮಾಸಿಕದಲ್ಲಿ (ಜನವರಿ-ಮಾರ್ಚ್) 4.34 ಲಕ್ಷಕ್ಕೆ ಏರಿಕೆಯಾಗಿದೆ ಎಂದು ಹೇಳಿದರು.

ಪ್ರಸ್ತುತ ರಾಜ್ಯದಲ್ಲಿ ಸಾರ್ವಜನಿಕರು ಪ್ರತಿನಿತ್ಯ ಆನ್‌ಲೈನ್ ಹಣಕಾಸು ವಂಚನೆಗಳಿಗೆ ಒಳಗಾಗುತ್ತಿರುವ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನಲೆಯಲ್ಲಿ ತಕ್ಷಣ ಸಾರ್ವಜನಿಕರು ದೂರು ದಾಖಲಿಸಲು ಅನುವಾಗುವಂತೆ ಸೈಬರ್ ಅಪರಾಧ ಸಹಾಯವಾಣಿ-1930 ಹಾಗೂ ವೆಬ್ ಬಾಟ್‌ನ್ನು ಉನ್ನತೀಕರಿಸಲಾಗಿದೆ. ಕರ್ನಾಟಕ ರಾಜ್ಯದಲ್ಲಿ ತುರ್ತು ಸ್ಪಂದನಾ ವ್ಯವಸ್ಥೆಯ ಸಾರ್ವಜನಿಕ ಸುರಕ್ಷತಾ ಪ್ರತ್ಯುತ್ತರ ಕೇಂದ್ರವನ್ನು ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ಸಂಪರ್ಕ, ಸಾರಿಗೆ ಮತ್ತು ಆಧುನೀಕರಣರವರ ಕಛೇರಿ ಆವರಣದಲ್ಲಿ ಸ್ಥಾಪಿಸಲಾಗಿದ್ದು, ಸದರಿ 1930 ಸಹಾಯವಾಣಿ ಕೇಂದ್ರದಲ್ಲಿ ಆನ್‌ಲೈನ್ ಹಣಕಾಸು ವಂಚನೆ ಅಪರಾಧಗಳಿಗೆ ಸಂಬಂಧಿಸಿದ ದೂರುಗಳನ್ನು ದಾಖಲಿಸಲಾಗುತ್ತಿದೆ.

ಈ ರೀತಿಯಲ್ಲಿ ದೂರುದಾರರ ಕರೆಗಳ ಸಂಖ್ಯೆಯು ಏರಿಕೆಯಾಗುತ್ತಿರುವುದರಿಂದ, ಹೆಚ್ಚು ಸಂಖ್ಯೆಯ ಕರೆಗಳು ಕಡಿತಗೊಂಡಿರುವುದು (ಅಚಿಟಟ ಆಡಿಠಠಿ) ಕಂಡುಬಂದಿರುತ್ತದೆ. ಇದರಲ್ಲಿ ಹೆಚ್ಚಿನ ಪ್ರಮಾಣದ ಕರೆಗಳು ತಮ್ಮ ದೂರಿನ ಸ್ಥಿತಿ ವಿಚಾರಣೆ (ಖಣಚಿಣಣ ಜಟಿಡಣಡಿಥಿ) ಮತ್ತು ಸೈಬರ್ ಅಪರಾಧದ ಕುಂದುಕೊರತೆಗಳಿಗೆ ಸಂಬಂಧಿಸಿದ ಕರೆಗಳಾಗಿದ್ದು, ಎಲ್ಲಾ ಕರೆ ಸ್ವೀಕರಿಸುವ ಸಿಬ್ಬಂದಿಗಳು ಕಾರ್ಯನಿರತರಾಗಿರುತ್ತಿದ್ದ ಕಾರಣ 1930-ಸಹಾಯವಾಣಿಗೆ ಹೊಸ ದೂರುಗಳನ್ನು ದಾಖಲಿಸುವವರು ಶೀಘ್ರವಾಗಿ ಸಂಪರ್ಕಿಸಲು ಸಾಧ್ಯವಾಗುತ್ತಿರಲಿಲ್ಲ. ಇದರಿಂದಾಗಿ ದೂರುದಾರರಿಗೆ 1930-ಸಹಾಯವಾಣಿಯ ಸಂಪರ್ಕ ಸಿಗದೆ ಗೋಲ್ಡನ್ ಅವರ್‌ನಲ್ಲಿ ದೂರು ದಾಖಲಿಸಲು ಕ?ಟಕರವಾಗುತ್ತಿತ್ತು. ಈ ದೂರುದಾರರಲ್ಲಿ ಹಿರಿಯ ನಾಗರೀಕರು ಸಹ ಕರೆ ಮಾಡುತ್ತಿದ್ದು 1930 ಸಹಾಯವಾಣಿಗೆ ಕರೆ ಮಾಡಿದ ಸಮಯದಲ್ಲಿ ಸಂಪರ್ಕ ಸಿಗದೇ ಆಸಹಾಯಕರಾಗಿದ್ದರು.

ಈ ಸಮಸ್ಯೆಯಿಂದ ಹಣಕಾಸು ವಂಚನೆಗೊಳಗಾದ ದೂರುದಾರರ ಹಣವನ್ನು ಗೋಲ್ಡನ್ ಅವರ್‌ನಲ್ಲಿ ಸಂಬಂಧಿಸಿದ ಬ್ಯಾಂಕ್‌ಗಳಲ್ಲಿ ತಡೆಹಿಡಿಯುವ ಪ್ರಕ್ರಿಯೆಯಲ್ಲಿ ವಿಳಂಬವಾಗುತ್ತಿತ್ತು. ಇದರಿಂದಾಗಿ ಸದರಿ ಹಣ ವಂಚಕರ ಖಾತೆಗೆ ವರ್ಗಾವಣೆಯಾಗಲು ಸುಲಭವಾಗುತ್ತಿತ್ತು.

ಈ ಎಲ್ಲಾ ಸಮಸ್ಯೆಗಳನ್ನು ಮನಗಂಡ ಇಲಾಖೆಯು, ಸಮಸ್ಯೆಯನ್ನು ಪರಿಹರಿಸಲು ದೂರುದಾರರ ಕರೆಗಳನ್ನು ಹಣಕಾಸು ಸಂಬಂಧಿತ ದೂರುಗಳು, ಹಣಕಾಸೇತರ ಸಂಬಂಧಿತ ದೂರುಗಳು ಖಾತೆಯ ಹ್ಯಾಕ್‌ಗಳು ಅಥವಾ , ದೂರಿನ ಸ್ಥಿತಿ ವಿಚಾರಣೆಗಳು ಮತ್ತು ಸೈಬರ್ ಅಪರಾಧ ಸಂಬಂಧಿತ ಕುಂದುಕೊರತೆ ಕರೆಗಳಾಗಿ ಐವಿಆರ್ ವ್ಯವಸ್ಥೆಯ ಮೂಲಕ ವರ್ಗೀಕರಿಸಲಾಗಿದೆ. ಇದರಿಂದಾಗಿ ಹೊಸ ದೂರನ್ನು ಸಕಾಲದಲ್ಲಿ ದಾಖಲಿಸುವವರಿಗೆ ಆದ್ಯತೆ ನೀಡಲಾಗಿದೆ ಮತ್ತು ಗಿಠಭಿಜ ಉಣಜಜಜ ಘಾಜಟಃಔಖ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದ್ದು, ದೂರುದಾರರು ವೆಬ್‌ಬಾಟ್ ಮೂಲಕ ಮಾಹಿತಿ ಸಲ್ಲಿಸಲು ಇಚ್ಚಿಸಿದ್ದಲ್ಲಿ ಎಸ್‌ಎಂಎಸ್ ಮೂಲಕ ವೆಬ್‌ಬಾಟ್ ಲಿಂಕ್ ಅನ್ನು ಕಳುಹಿಸಲಾಗುವುದು.

ನಂತರ ಈ ಸಹಾಯವಾಣಿಯ ಸಿಬ್ಬಂದಿಯ ಮೂಲಕ ಸದರಿ ಮಾಹಿತಿಯನ್ನು ಎನ್‌ಸಿಆರ್‌ಪಿ ಯಲ್ಲಿ ದಾಖಲಿಸಲಾಗುವುದು. ಇದು ಸಾರ್ವಜನಿಕರಿಗೆ 1930 ಸಹಾಯವಾಣಿಯಲ್ಲಿ ದೂರು ಸಲ್ಲಿಸಲು ಹಾಗೂ ಕಾಲ್ ಡ್ರಾಪ್‌ಗಳನ್ನು ಸಹ ತಡೆಯಲು ಸಹಾಯವಾಗುತ್ತದೆ.

1930 ಸಹಾಯವಾಣಿಯ ಎಲ್ಲಾ ಸಿಬ್ಬಂದಿಗಳು ಕಾರ್ಯನಿರತವಾಗಿದ್ದ ಸಮಯದಲ್ಲಿ ದೂರುದಾರರು ಸ್ವಯಿಚ್ಚೆಯಿಂದ ಕರೆ ಕಡಿತಗೊಳಿಸಿದ ಸಮಯದಲ್ಲೂ ಸಹ ಎಸ್‌ಎಂಎಸ್ ಮುಖಾಂತರ ಈ ವೆಬ್‌ಬಾಟ್ ಲಿಂಕ್ ಅನ್ನು ಸದರಿ ದೂರುದಾರರಿಗೆ ಕಳುಹಿಸಲಾಗುವುದು. ಈ ಹೊಸ ವ್ಯವಸ್ಥೆಯ ಪರಿಣಾಮದಿಂದಾಗಿ 2025 ರ ಮೊದಲ ತ್ರೈಮಾಸಿಕದಲ್ಲಿ 38,000 ಪ್ರಕರಣಗಳನ್ನು ಸೈಬರ್ ಕ್ರೈಂ ಸಹಾಯವಾಣಿ-1930 ಮೂಲಕ ದಾಖಲಿಸಲಾಗಿರುತ್ತದೆ. ಪ್ರಸ್ತುತ ವರ್ಷದಲ್ಲಿ ಮಾರ್ಚ್ 2025ರ ಅಂತ್ಯಕ್ಕೆ ವಂಚನೆ ಹಣದ ಶೇಕಡಾ 16 ರ?ಟು ಮೊತ್ತವನ್ನು ಬ್ಯಾಂಕ್‌ಗಳಲ್ಲಿಯೇ ತಡೆಯುವಲ್ಲಿ ಶ್ರಮವಹಿಸಿರುತ್ತೇವೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯ ಎಡಿಜಿಪಿ ಹಿತೇಂದ್ರ, ಆಡಳಿತ ವಿಭಾಗದ ಎಡಿಜಿಪಿ ಸೌಮೆಂದು ಮುಖರ್ಜಿ, ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು ಹಾಗೂ ಹೆಚ್ಚುವರಿ ಮಹಾ ನಿರ್ದೇಶಕರಾದ ನಂಜುಂಡಸ್ವಾಮಿ ಹಾಗೂ ಡಿಜಿಪಿ ಶ್ರೀಮತಿ ಮಾಲಿನಿ ಕೃಷ್ಣಮೂರ್ತಿ ಸೇರಿದಂತೆ ಅನೇಕ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಅಗ್ನಿವೀರ್ ವಾಯು(ಮ್ಯೂಸಿಶಿಯನ್) ಪ್ರವೇಶ

**ಮೈಸೂರು:** ಭಾರತೀಯ ವಾಯುದಳದಲ್ಲಿ ''ಅಗ್ನಿಪತ್'' ಯೋಜನೆಯಡಿ ಅಗ್ನಿವೀರ್ ವಾಯು (ಮ್ಯೂಸಿಶಿಯನ್) ಪ್ರವೇಶಕ್ಕೆ ಭಾರತೀಯ ಅರ್ಹ ಅವಿವಾಹಿತ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಂದ ಆಯ್ಕೆ ಪರೀಕ್ಷೆಗಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಹ ಜಿಲ್ಲೆಯ ಪುರುಷ ಮತ್ತು ಮಹಿಳಾ ಆಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ವಯೋಮಿತಿ ಜನವರಿ 1.2005 ರಿಂದ ಜುಲೈ 1.2008 ರ ಒಳಗೆ ಜನಿಸಿದವರಾಗಿರಬೇಕು (ಎರಡು ದಿನಗಳನ್ನು ಒಳಗೊಂಡಂತೆ) ಪುರುಷ ಅಭ್ಯರ್ಥಿಗಳಿಗೆ 162 ಸೆಂ.ಮಿ ಎತ್ತರ, 77 ಸೆ.ಮಿ ಎದೆಯ ಸುತ್ತಳತೆ ಹೊಂದಿರಬೇಕು. ಮಹಿಳಾ ಅಭ್ಯರ್ಥಿಗಳಿಗೆ 152 ಸೆಂ.ಮಿ ಎತ್ತರ ತೂಕ ಎತ್ತರಕ್ಕೆ ಅನುಗುಣವಾಗಿರಬೇಕು. ನೋಂದಣಿ ಶುಲ್ಕ 100/- ರೂ ಗಳು ಇರುತ್ತದೆ. ಆನ್ ಲೈನ್‌ನಲ್ಲಿ ಅರ್ಜಿಯನ್ನು ಏಪ್ರಿಲ್ 21 ರಿಂದ ಮೇ 11 ರೊಳಗೆ https://agnipathvayu.cdac.in ವೆಬ್ ಸೈಟ್ ಮೂಲಕ ಸಲ್ಲಿಸಬಹುದಾಗಿದೆ.

ಯಾವುದೇ ವಿಚಾರಣೆಗಾಗಿ: CASB, Brar Square, Delhi Cantt, New dekhi ದೂ.ಸಂ:011-25694209/25699606 ಹಾಗೂ E-mail: royal-hunter@gov.in/ casbiaf@cdac.in ಅಥವಾ Commanding officer, 2ASC, C/O Race Course Camp.Air Force New Delhi zÀÆ.¸ÀA:011-23010231 ಮತ್ತು e-mail royal-poineers@gov.in Commanding Officer, 7 ASC, No.1, Cubbon Road, Bengaluru(Karnataka) ದೂ.ಸಂ:080-29512199 ಮತ್ತು e-mail fortune-panther@gov.in ಮೂಲಕ ಸಂಪರ್ಕಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಆವರಣ, ಎನ್.ಆರ್.ಮೊಹಲ್ಲಾ ಮೈಸೂರು ಅವರನ್ನು ಸಂಪರ್ಕಿಸಬಹುದಾಗಿದೆ ಹಾಗೂ ಕಚೇರಿ ದೂ.ಸಂ:0821-2489972 ನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದ ಸರಸ್‌ಮೇಳ

**ರಾಮನಗರ:** ಜಿಲ್ಲಾ ಪಂಚಾಯತ್, ಕೌಶಲ್ಯಾಭಿವೃದ್ಧಿ, ಉದ್ಯಮ ಶೀಲತಾ ಮತ್ತು ಜೀವನೋಪಾಯ ಇಲಾಖೆ ಮತ್ತು ಸಂಜೀವಿನಿ-ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಸಂಸ್ಥೆಯ ಸಹಯೋಗದಲ್ಲಿ ಏ. 24ರಂದು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಮತ್ತು ಏ. 24 ರಿಂದ 27ರ ವರೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಸ್ವ ಸಹಾಯ ಗುಂಪಿನ ಮಹಿಳೆಯರು ಉತ್ಪಾದಿಸಿರುವ ಉತ್ಪನ್ನಗಳಿಗೆ ಮಾರುಕಟ್ಟೆ ಒದಗಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದ ಸರಸ್‌ಮೇಳ (ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ) ವನ್ನು ಆಯೋಜಿಸಲಾಗಿದೆ.

ಮೇಳದಲ್ಲಿ ರಾಮನಗರ ಜಿಲ್ಲೆಯ ಮತ್ತು ರಾಜ್ಯದ ಇತರೆ ಜಿಲ್ಲೆಗಳ ಸ್ವ-ಸಹಾಯ ಗುಂಪಿನ ಮಹಿಳೆಯರು ಉತ್ಪಾದಿಸುವ ವಿಭಿನ್ನ ಉತ್ಪನ್ನಗಳನ್ನು ಸಾರ್ವಜನಿಕರಿಗೆ ನೇರವಾಗಿ ತಲುಪಿಸುವ ಉದ್ದೇಶದಿಂದ ಸುಮಾರು 100ಕ್ಕೂ ಹೆಚ್ಚು ಮಳಿಗೆಗಳನ್ನು ತೆರೆಯಲಾಗಿದ್ದು, ರಾಮನಗರ ಜಿಲ್ಲೆಯ ನಗರ ಮತ್ತು ಗ್ರಾಮೀಣ ಪ್ರದೇಶದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸದುಪಯೋಗಪಡಿಸಿಕೊಳ್ಳುವಂತೆ ಜಿಲ್ಲಾ ಪಂಚಾಯತ್‌ನ ಮುಖ್ಯ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ಮೋಟಾರ್ ರೀವೈಂಡಿಂಗ್ ತರಬೇತಿಗೆ ಅರ್ಜಿ ಆಹ್ವಾನ

**ರಾಮನಗರ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ 30 ದಿನಗಳ ಉಚಿತ ವಿದ್ಯುತ್ ಮೋಟಾರ್ ರಿವೈಂಡಿಂಗ್ ತರಬೇತಿಯು ಬರುವ ಮೇ 19 ರಿಂದ ಆಯೋಜಿಸಲಾಗಿದ್ದು, ಕರ್ನಾಟಕ ರಾಜ್ಯದಲ್ಲಿನ ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕರು ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತ 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾ? ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಗ್ರಾಮೀಣ ಪ್ರದೇಶದ ಆಧಾರ್ ಕಾರ್ಡ್ ಹಾಗೂ ಬಿಪಿಎಲ್ ಕಾರ್ಡ್ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು.

ತರಬೇತಿಯು ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ 9380162042, 9380220884, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಕ್ಷಾತೀತವಾಗಿ ಪುರಸಭೆ ಅಧ್ಯಕ್ಷರನ್ನು ಆಯ್ಕೆ ಮಾಡಿದುದಕ್ಕೆ ಅಭಿನಂದನೆ



**ವಿಜಯಪುರ;** ಪಟ್ಟಣದ ಪುರಸಭೆಗೆ ಇತ್ತೀಚಿಗೆ ನಡೆದ ಅಧ್ಯಕ್ಷ ಉಪಾಧ್ಯಕ್ಷರ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ, ಜೆಡಿಎಸ್ ಪಕ್ಷ ಹಾಗೂ ಬಿಜೆಪಿ ಪಕ್ಷದವರು ಪಕ್ಷ ಬೇಧ ಮರೆತು ಕಾಂಗ್ರೆಸ್ ಪಕ್ಷದ ಭವ್ಯ ಮಧುರವರನ್ನು ಆಯ್ಕೆ ಮಾಡಿದುದಕ್ಕೆ ಪುರಸಭೆ ಮಾಜಿ ಅಧ್ಯಕ್ಷ, ಹಾಲಿ ಸದಸ್ಯ, ಟೌನ್ ಕಾಂಗ್ರೆಸ್ ಮಾಜಿ ಅಧ್ಯಕ್ಷರಾದ ಎಮ್ ಸತೀಶ್ ಕುಮಾರ್ ರವರು ಎಲ್ಲಾ ಪಕ್ಷದ ಮುಖಂಡರುಗಳಿಗೆ ಕೃತಜ್ಞತೆ ತಿಳಿಸಿದರು. ಅವರು ಇಲ್ಲಿನ ಪರಿವೀಕ್ಷಣ ಮಂದಿರದಲ್ಲಿ ಅಧ್ಯಕ್ಷರು- ಉಪಾಧ್ಯಕ್ಷರ ಆಯ್ಕೆಯ ನೇತೃತ್ವ ವಹಿಸಿದ್ದ ತಮ್ಮನ್ನು ಪಕ್ಷಾತೀತವಾಗಿ ಅಭಿನಂದನೆ ಮಾಡಿದ ಎಲ್ಲಾ ಮುಖಂಡರನ್ನುದ್ದೇಷಿಸಿ ಮಾತನಾಡುತ್ತಿದ್ದರು. ಪುರಸಭೆಯನ್ನು ಅಭಿವೃದ್ಧಿ ಪಥದತ್ತ ನಡೆಸಲು ಎಲ್ಲಾ ಪಕ್ಷಗಳವರು, ಅಧ್ಯಕ್ಷರಾಗಿ ಕಾಂಗ್ರೆಸ್ ಪಕ್ಷದ ಭವ್ಯ ಮಧುರವರನ್ನು, ಉಪಾಧ್ಯಕ್ಷರನ್ನಾಗಿ ಜೆಡಿಎಸ್ ಪಕ್ಷದ ತಾಜುನ್ನಿಸ ಮಹಬೂಬ್ ಪಾಷಾ ರವರನ್ನು ಆಯ್ಕೆ ಮಾಡಲು ಸಹಕರಿಸಿದ್ದು, ಮುಂದಿನ ಪುರಸಭೆಯ ಸಾಮಾನ್ಯ ಸಭೆಗಳಲ್ಲಿಯೂ ಎಲ್ಲಾ ಸದಸ್ಯರು ಒಮ್ಮತದಿಂದ ತೀರ್ಮಾನಗಳನ್ನು ಕೈಗೊಂಡು, ಪುರಸಭೆಯನ್ನು ಅಭಿವೃದ್ಧಿ ಪಥದತ್ತ ನಡೆಸಬೇಕೆಂದು ತಿಳಿಸಿದರು. ಈ ಸಂದರ್ಭದಲ್ಲಿ ಪುರಸಭಾ ಸದಸ್ಯರಾದ ನಂದಕುಮಾರ್, ಮಾಜಿ ಸದಸ್ಯರುಗಳಾದ ಸಂಪತ್ ಕುಮಾರ್, ಮುನಿ ಚಿನ್ನಪ್ಪ, ಆರ್ ಮುನಿರಾಜು, ಹರೀಶ್, ವರದರಾಜು, ವೀರಣ್ಣ, ಮುಖಂಡರುಗಳಾದ ಕೆಎಂ ಮಧು, ಸೈಫುಲ್ಲಾ, ಆರ್ ಎಂ ಸಿ ಟಿ ಮಂಜುನಾಥ್, ಮುನ್ನಾ, ಪ್ರಶಾಂತ್, ರಾಜಣ್ಣ, ಕೇಬಲ್ ಸುರೇಶ್, ಅಣ್ಣಮ್ಮತಾಯಿ ಸುರೇಶ್, ವಿನಯ್, ವೀರಭದ್ರ, ಪ್ರಕಾಶ್, ಮತ್ತಿತರರು ಉಪಸ್ಥಿತರಿದ್ದರು.

# ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿಗೊಳಿಸಿ

**ವಿಜಯಪುರ:** ನಗರ್ತ ಜನಾಂಗದ ಯುವಕರುಗಳು ಸರ್ಕಾರಿ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಬೇಕೆಂದರೆ, ಮಾತೃ ಸಂಸ್ಥೆಯ ವತಿಯಿಂದ ಬೆಂಗಳೂರಿನಲ್ಲಿ ಜನಾಂಗದ ಯುವಕರಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಭಾಗವಹಿಸುವ ಬಗ್ಗೆ ತರಬೇತಿಗಳನ್ನು ಕೊಡಿಸುವಂತಹ ಕೆಲಸ ಆಗಬೇಕೆಂದು ನಗರ್ತ ಯುವಕ ಸಂಘದ ನೂತನ ಅಧ್ಯಕ್ಷ ವಿ ಬಸವರಾಜು ತಿಳಿಸಿದರು.



ಇಲ್ಲಿನ ಶ್ರೀನಗರೇಶ್ವರ ಸ್ವಾಮಿ ಪ್ರಾರ್ಥನಾ ಮಂದಿರದಲ್ಲಿ ಅಯೋಧ್ಯಾನಗರ ಶಿವಾಚಾರ್ಯ ನಗರ್ತ ಯುವಕ ಸಂಘದ ನೂತನ ಪದಾಧಿಕಾರಿಗಳ ಪದವಿ ಸ್ವೀಕಾರ ಸಮಾರಂಭ ಹಾಗೂ ಜನಾಂಗದ ಹಿರಿಯರಿಗೆ ಹಾಗೂ ಪ್ರತಿಭಾವಂತ ಯುವಜನತೆಗೆ ಗೌರವ ಸಮರ್ಪಣೆ ನೀಡುವ ಕಾರ್ಯಕ್ರಮದಲ್ಲಿ, ಯುವಕ ಸಂಘದ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿ ಮಾತನಾಡುತ್ತಿದ್ದರು.

ಕಾರ್ಯಕ್ರಮ ಉದ್ಘಾಟಿಸಿದ ಪುರಸಭಾ ಮಾಜಿ ಅಧ್ಯಕ್ಷರಾದ ಎಂ ಸತೀಶ್ ಕುಮಾರ್ ಅವರು ಮಾತನಾಡಿ ಮಹಿಳಾ ಸಂಘ, ಯುವಕ ಸಂಘ, ಮಹಂತಿನ ಮಠ, ಶ್ರೀ ನಗರೇಶ್ವರ ಸ್ವಾಮಿ ದೇವಾಲಯ ಅಭಿವೃದ್ಧಿ ಸಮಿತಿ, ಹೀಗೆ ಜನಾಂಗದ ಎಲ್ಲಾ ಸಂಘ ಸಂಸ್ಥೆಗಳವರು ನಮ್ಮ ಸಂಸ್ಕೃತಿ ಕಾಪಾಡುವುದರೊಂದಿಗೆ ಯುವಜನತೆಯ ಶೈಕ್ಷಣಿಕ ಅಭಿವೃದ್ಧಿ ಕಡೆಗೂ ಹೆಚ್ಚಿನ ಗಮನ ಹರಿಸಬೇಕಿದೆ ಎಂದು ತಿಳಿಸಿದರು. ಬೆಂಗಳೂರಿನ ಜನಾಂಗದ ಮಾತೃ ಸಂಸ್ಥೆಯಾದ ಅಯೋಧ್ಯಾನಗರ ಶಿವಾಚಾರ ವೈಶ್ಯ ನಗರ್ತ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಎಸ್ ಪ್ರಕಾಶ್ ರವರು ಮಾತನಾಡುತ್ತ, ಆಸ್ತಿ ಅಂತಸ್ತು ಯಾವುದು ಶಾಶ್ವತವಲ್ಲ, ಮಕ್ಕಳಿಗೆ ಇಂದು ನಾವು ನೀಡಿದ ವಿದ್ಯೆ ಮಾತ್ರ ಶಾಶ್ವತವಾಗಿದ್ದು, ಜೀವನಪರ್ಯಂತ ಅದು ಅವರನ್ನು ಕಾಪಾಡುತ್ತದೆ ಎಂದು ಅದಕ್ಕಾಗಿ ಪ್ರತಿಯೊಂದು ಕುಟುಂಬದಲ್ಲಿಯೂ ಮಕ್ಕಳಿಗೆ ಆಸ್ತಿ ಮಾಡುವ ಬದಲು ಎಷ್ಟೇ ಕಷ್ಟವಾದರೂ, ಎಲ್ಲಾ ಸಂಘ ಸಂಸ್ಥೆಗಳ ಸಹಕಾರ ಪಡೆದು ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ಕೊಡಿಸುವಂತಾಗಬೇಕೆಂದು ತಿಳಿಸಿದರು.

ಕರ್ನಾಟಕ ವಿಧಾನಸಭೆಯ ಸಚಿವಾಲಯದ ಅಭಿಲೇಖನಾಧಿಕಾರಿಗಳಾದ ಯುವ ಪ್ರತಿಭೆ ಬಿ ರೂಪದವರು ಅಭಿನಂದನೆ ಸ್ವೀಕರಿಸಿ ಮಾತನಾಡುತ್ತ, ತಾವು ಈ ಹಿಂದೆ ರಾಜ್ಯಪಾಲರ ಕಚೇರಿಯಲ್ಲಿ ಕಾರ್ಯನಿರ್ವಹಿಸುವುದರೊಂದಿಗೆ, ಇದೀಗ ಕರ್ನಾಟಕ ವಿಧಾನಸಭೆಯಲ್ಲಿಯೂ ಕಾರ್ಯನಿರ್ವಹಿಸುತ್ತಿದ್ದು, ಇದಕ್ಕೆ ಕಾರಣ ನಿರಂತರ ಅಧ್ಯಯನ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಪಾಲ್ಗೊಳ್ಳುವಿಕೆಯೇ ಕಾರಣವಾಗಿದೆ ಎಂದು ತಿಳಿಸುತ್ತಾ ವಿಧಾನಸಭೆಯಲ್ಲಿ ನಡೆದ ಹಲವಾರು ಹಾಸ್ಯ ಪ್ರಸಂಗಗಳನ್ನು ಉದಾಹರಿಸಿದರು. ಇದೇ ಸಂದರ್ಭದಲ್ಲಿ ಜನಾಂಗದ ಹಿರಿಯ ದಂಪತಿಗಳಾದ ವಿ ಸಿ ಗಿರಿಜಾ ಸಿದ್ದರಾಜು ದಂಪತಿಗಳನ್ನು, ಪುರಸಭಾ ಮಾಜಿ ಅಧ್ಯಕ್ಷರಾದ ಎಂ ಸತೀಶ್ ಕುಮಾರ್‌ರವರನ್ನು ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಬೆಂಗಳೂರಿನ ಮಾತೃ ಸಂಸ್ಥೆಯ ಕಾರ್ಯದರ್ಶಿ ಎಂ ಎಸ್ ಕೃಷ್ಣಮೂರ್ತಿ, ಖಜಾಂಚಿ ಎಂ ಶಂಕರ್, ನಿರ್ದೇಶಕರುಗಳಾದ ಕುಮಾರ್, ಗಿರೀಶ್, ಪುರಸಭಾ ಸದಸ್ಯೆ ಶಿಲ್ಪ ಅಜಿತ್, ಮಾಜಿ ಸದಸ್ಯರಾದ ಎಸ್ ಭಾಸ್ಕರ್, ಸಂಘದ ಗೌರವಾಧ್ಯಕ್ಷ ಪಿ ಮುರಳಿಧರ್, ಅಧ್ಯಕ್ಷ ಎ ಮಂಜುನಾಥ್, ಖಜಾಂಚಿ ಪಿ ಸುನಿಲ್, ಸಹಕಾರ್ಯದರ್ಶಿ ಸಿ ಮನೋಹರ್,ಕೋರಮಂಗಲ ರುದ್ರಪ್ಪ ಟ್ರಸ್ಟ್ ಅಧ್ಯಕ್ಷ ಸಿ ಭಾಸ್ಕರ್,ರಾಷ್ಟ್ರೀಯ ಬಸವದಳದ ಖಜಾಂಚಿ ವಿ.ಶಿವಣ್ಣ ಉಪಸ್ಥಿತರಿದ್ದರು.

ನೂತನ ಪದಾಧಿಕಾರಿಗಳು;2025 ಹಾಗೂ 2026 ನೇ ಎರಡು ವರ್ಷಗಳ ಸಾಲಿನ ನೂತನ ಪದಾಧಿಕಾರಿಗಳಾಗಿ- ಗೌರವಾಧ್ಯಕ್ಷರಾಗಿ ಮ ಸುರೇಶ್ ಬಾಬು, ಅಧ್ಯಕ್ಷರಾಗಿ ವಿ ಬಸವರಾಜು, ಕಾರ್ಯದರ್ಶಿಯಾಗಿ ಆರ್ ವಿಶ್ವಾಸ್, ಖಜಾಂಚಿಯಾಗಿ ಎನ್ ಅಭಿಲಾಶ್, ಸಹ ಕಾರ್ಯದರ್ಶಿಯಾಗಿ ಎನ್ ಸುಮನ್‌ರವರುಗಳು ಅಧಿಕಾರ ಸ್ವೀಕರಿಸಿದರು.

## ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

**ಬೆಂಗಳೂರು:** ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಲ್ಲಿ ನೇರ ನೇಮಕಾತಿಯಡಿ ಖಾಲಿ ಇರುವ 50 ಸಹಾಯಕ ಅಭಿಯಂತರರ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ದಿನಾಂಕ:18-07-2024, 20-07-2024 ಮತ್ತು 11-08-2024 ರಂದು ನಡೆದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿರುವ ಅಂಕಗಳ ಜೇ?ತೆ ಮತ್ತು ಮೀಸಲಾತಿಗಳ ಆಧಾರದ ಮೇಲೆ 1:3 ಅನುಪಾತದಲ್ಲಿ ಮೂಲ ದಾಖಲೆಗಳ ಪರಿಶೀಲನೆ ನಂತರ, ಸಹಾಯಕ ಅಭಿಯಂತರರ ಹುದ್ದೆಗಳಿಗೆ ಆಯ್ಕೆಯಾಗಿರುವ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಮಂಡಳಿಯ ಜಾಲತಾಣ https://kuwsdb.karnataka.gov.in ನಲ್ಲಿ ಪ್ರಕಟಿಸಲಾಗಿದೆ. ಈ ತಾತ್ಕಲಿಕ ಆಯ್ಕೆ ಪಟ್ಟಿಗೆ ಸಮಂಜಸವಾದ ಆಕ್ಷೇಪಣೆಗಳಿದ್ದಲ್ಲಿ, ಸಂಬಂಧಪಟ್ಟ ಅರ್ಹ ಅಭ್ಯರ್ಥಿಗಳು ಸೂಕ್ತ ವಿವರ ಹಾಗೂ ದಾಖಲೆಗಳೊಂದಿಗೆ, ವಿಷಯಸೂಚಿಯಲ್ಲಿ (ಸಹಾಯಕ ಅಭಿಯಂತರರು – ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ) ಎಂದು ನಮೂದಿಸಿ ತಮ್ಮ ಹೆಸರು ಹಾಗೂ ಅರ್ಜಿ ಸಂಖ್ಯೆಯೊಂದಿಗೆ ಖುದ್ದಾಗಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಜಲಭವನ, ನಂ.5 6, ಬನ್ನೇರುಘಟ್ಟ ರಸ್ತೆ, ಬಿ.ಟಿ.ಎಂ ಮೊದಲನೇ ಹಂತ, ಬೆಂಗಳೂರು–560029 ಇಲ್ಲಿಗೆ 2025 ನೇ ಮೇ 02 ರೊಳಗಾಗಿ ಸಲ್ಲಿಸುವುದು. ನಿಗದಿತ ದಿನಾಂಕದ ನಂತರ ಸಲ್ಲಿಸಲಾಗುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವ್ಯವಸ್ಥಾಪಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿ.ವಿ.ಎ ಪದವಿಗೆ ಅರ್ಜಿ ಆಹ್ವಾನ

**ಮೈಸೂರು:** ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜನೆಗೊಂಡಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ), ಸಿದ್ದಾರ್ಥನಗರ, ಮೈಸೂರು ಸಂಸ್ಥೆಯಲ್ಲಿ ಬ್ಯಾಚುಲರ್ ಆಫ್ ವಿಜ್ಯುಯಲ್ ಆರ್ಟ್ಸ್ (ಬಿ.ವಿ.ಎ) (ನಾಲ್ಕು ವರ್ಷದ ಎಂಟು ಸೆಮಿಸ್ಟರ್ ಎನ್.ಇ.ಪಿ ಪದ್ಧತಿ) ದೃಶ್ಯ ಕಲೆಯಲ್ಲಿ 2025–26 ನೇ ಶೈಕ್ಷಣಿಕ ಶಾಲೆಗೆ ಪ್ರಥಮ ಬಿ ಬಿ ಎ ಪದವಿ ಪ್ರವೇಶಾತಿಗೆ ಆನ್ಲೈನ್ (ಗಗಅಒಖ) ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಸದರಿ ಪದವಿಯಲ್ಲಿ 3 ನೇ ಸೆಮಿಸ್ಟರ್ ನಿಂದ ಚಿತ್ರಕಲೆ, ಶಿಲ್ಪ ಕಲೆ, ಗ್ರಾಫಿಕ್ಸ್ ಕಲೆ (ಅಚ್ಚು ಕಲೆ), ಅನ್ವಯಕಲೆ, ಕಲಾ ಇತಿಹಾಸ ಹಾಗೂ ಛಾಯಾಚಿತ್ರ ಮತ್ತು ಛಾಯಾಚಿತ್ರ ಪತ್ರಿಕೋದ್ಯಮ ವಿಭಾಗಗಳಲ್ಲಿ ವಿಶೇಷ ಅಧ್ಯಯನದ ಸ್ನಾತಕ ಪದವಿಯಾಗಿರುತ್ತದೆ. ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸರ್ಕಾರದ ಅಂತರ್ಜಾಲ ವಿಳಾಸ htts;//uucms.karanataka.gov.in ಅಥವಾ https;// www.cavamysore.karntaka.gov.in ಅಂತರ್ಜಾಲದ ಮೂಲಕವೇ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಪ್ರವೇಶಾತಿಗಾಗಿ ಅರ್ಹತಾ ಪರೀಕ್ಷೆಯ ದಿನಾಂಕ ಮತ್ತು ಇತರೆ ಮಾಹಿತಿಯನ್ನು ಪ್ರತ್ಯೇಕವಾಗಿ ತಿಳಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಈ ಕಾರ್ಯಾಲಯದ ಸಹಾಯವಾಣಿಗೆ ಕಚೇರಿ ಸಮಯದಲ್ಲಿ 0821–2438931 ಅನ್ನು ಚಾಮರಾಜೇಂದ್ರ ದೃಶ್ಯ ಕಲಾ ಕಾಲೇಜಿನ ಡೀನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹುಳಿಯಾರಿನಲ್ಲಿ ಇಂದಿನಿಂದ ಯೋಗ ಪ್ರಶಿಕ್ಷಣ ಶಿಬಿರ

**ಹುಳಿಯಾರು:** ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ ಹುಳಿಯಾರು–ಕೆಂಕೆರೆ ಶಾಖೆ ಹಾಗೂ ಶ್ರೀ ಪತಂಜಲಿ ಯೋಗ ಅಧ್ಯಯನ ಮತ್ತು ಸಂಶೋಧನಾ ಕೇಂದ್ರ, ತುಮಕೂರು ಮತ್ತು ಮೈಸೂರು ಇವರ ಸಂಯುಕ್ತ ಆಶ್ರಯದಲ್ಲಿ ಏ.24 ರ ಗುರುವಾರದಿಂದ ಏ.27 ರ ಭಾನುವಾರದವರೆವಿಗೆ ಮಕ್ಕಳ ಪ್ರಾಥಮಿಕ ವಸಂತ ಯೋಗ ಪ್ರಶಿಕ್ಷಣ ಶಿಬಿರ–2025 ಏರ್ಪಡಿಸಲಾಗಿದೆ. ಏ.24 ರ ಗುರುವಾರ ಸಂಜೆ 6 ಕ್ಕೆ ಉದ್ಘಾಟನಾ ಕಾರ್ಯಕ್ರಮ ನಡೆಯಲಿದ್ದು ಹಂದನಕೆರೆ ಶ್ರೀ ಗುರುಗಿರಿಸಿದ್ದೇಶಸ್ವಾಮಿ ಮಠದ ಶ್ರೀ ರುದ್ರಾರಾಧ್ಯರು ದಿವ್ಯಸಾನಿಧ್ಯ ವಹಿಸಲಿದ್ದಾರೆ. ಯೋಗ ಶಿಕ್ಷಕ ರವೀಂದ್ರ ಅಧ್ಯಕ್ಷತೆ ವಹಿಸಲಿದ್ದಾರೆ. ಎಸ್‌ಪಿವೈಎಸ್‌ಎಸ್‌ನ ಜಿಲ್ಲಾ ಸಂಚಾಲಕ ಸಿ.ಎನ್.ಗಿರೀಶ್ ಪ್ರಾಸ್ತಾವಿಕ ನುಡಿ ನುಡಿಯಲಿದ್ದಾರೆ. ಶ್ರೀ ಮಾತಾ ಟ್ರಸ್ಟ್‌ನ ಅಧ್ಯಕ್ಷರಾದ ಗಂಗಾಧರ್ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಎಸ್‌ಪಿವೈಎಸ್‌ಎಸ್‌ನ ಕೇಂದ್ರ ಸಮಿತಿ ಉಪಾಧ್ಯಕ್ಷ ಚನ್ನಬಸಪ್ಪ, ಪಿಎಸ್‌ಐ ಧರ್ಮಾಂಜಿ, ವಾಸವಿ ವಿದ್ಯಾ ಸಂಸ್ಥೆ ಕಾರ್ಯದರ್ಶಿ ಎಲ್.ಆರ್.ಬಾಲಾಜಿ ಆಗಮಿಸಲಿದ್ದಾರೆ. ಏ.25 ರ ಶುಕ್ರವಾರ ಸಂಜೆ 6 ಕ್ಕೆ ನಡೆಯುವ ಮಾತಾಪಿತೃ ಪೂಜನ ಮತ್ತು ಮಾತೃ ಭೋಜನ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್‌ಪಿವೈಎಸ್‌ಎಸ್‌ನ ನಗರ ಸಂಚಾಲಕರಾದ ಬಕುಳಾದೇವಿ ವಹಿಸುವರು. ಎಸ್‌ಪಿವೈಎಸ್‌ಎಸ್‌ನ ಜಿಲ್ಲಾ ಮಹಿಳಾ ಸಂಚಾಲಕರಾದ ಸುಜಾತ, ಅಂಗನವಾಡಿ ನೌಕರರ ಸಂಘದ ಅಧ್ಯಕ್ಷರಾದ ಪೂರ್ಣಮ್ಮ, ಎಸ್‌ಪಿವೈಎಸ್‌ಎಸ್‌ನ ತಿಪಟೂರು ನಗರ ಸಂಚಾಲಕರಾದ ಚನ್ನಾಂಬಿಕ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಇದೇ ಸಂದರ್ಭದಲ್ಲಿ ಎಸ್‌ಪಿವೈಎಸ್‌ಎಸ್‌ನ ಹಿರಿಯ ಮಾರ್ಗದರ್ಶಕರಾದ ಆನಂದರಾಜು ಅವರು ಆಕಾಶ ವೀಕ್ಷಣೆ ಕಾರ್ಯಕ್ರಮ ನಡೆಸಿಕೊಡಲಿದ್ದಾರೆ.

ಏ.26 ರ ಶನಿವಾರ ಸಂಜೆ 5 ಕ್ಕೆ ನಡೆಯುವ ಯೋಗನಡಿಗೆ ಆರೋಗ್ಯದೆಡೆಗೆ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಯೋಜಶಿಕ್ಷಕರಾದ ದುರ್ಗರಾಜು ವಹಿಸುವರು. ಬನಶಂಕರಿ ಕಲ್ಯಾಣ ಮಂಟಪದ ಅಧ್ಯಕ್ಷರಾದ ಅನಂತರಾಮಯ್ಯ ಉದ್ಘಾಟಿಸುವರು. ಪತ್ರಕರ್ತ ನರೇಂದ್ರಬಾಬು, ಆರ್ಯವೈಶ್ಯ ಮಂಡಳಿ ಅಧ್ಯಕ್ಷ ಟಿ.ಆರ್.ನಾಗೇಶ್, ಎಸ್‌ಪಿವೈಎಸ್‌ಎಸ್‌ನ ಜಿಲ್ಲಾ ಸಂಚಾಲಕ ಸುನಿಲ್ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಏ.27 ರ ಭಾನುವಾರ ಮಧ್ಯಹ್ನಾ 12–30 ಕ್ಕೆ ನಡೆಯಲಿರುವ ಸಮಾರೋಪ ಸಮಾರಂಭದ ಅಧ್ಯಕ್ಷತೆಯನ್ನು ಯೋಗಶಿಕ್ಷಕರಾಚ ಬಸವರಾಜು ವಹಿಸುವರು. ಎಸ್‌ಪಿವೈಎಸ್‌ಎಸ್‌ನ ಜಿಲ್ಲಾ ಸಂಚಾಲಕರಾದ ಗೋಪಿನಾಥ್ ಸಮಾರೋಪ ಭಾಷಣ ಮಾಡುವರು. ಎಸ್‌ಪಿವೈಎಸ್‌ಎಸ್‌ನ ತುಮಕೂರು ನಗರ ಜಿಲ್ಲಾ ಸಂಚಾಲಕ ಚಂದ್ರಯ್ಯ, ಯೋಗಬಂಧು ಶಿವಕುಮಾರ್, ಬೆಸ್ಕಾಂನ ಉಮೇಶ್‌ನಾಯ್ಕ, ಡಾ.ಸಿದ್ಧರಾಮಯ್ಯ ಆಗಮಿಸುವರು.

# ಅಂಬೇಡ್ಕರ್ ಜಯಂತಿ ಯಶಸ್ವಿ: ಕೊತ್ತೂರು ಮಂಜುನಾಥ್‌ಗೆ ಸನ್ಮಾನ

**ಕೋಲಾರ:** ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯನ್ನು ಜಿಲ್ಲಾ ಕೇಂದ್ರದಲ್ಲಿ ಅದ್ದೂರಿಯಾಗಿ ಆಚರಣೆ ಮಾಡುವ ಮೂಲಕ ಸಾರ್ಥಕತೆ ಮೆರೆದ ಶಾಸಕ ಕೊತ್ತೂರು ಮಂಜುನಾಥ್ ಅವರ ಸೇವೆ ಶ್ಲಾಘನೀಯ ಎಂದು ಕೋಲಾರ ಜಿಲ್ಲಾ ದಲಿತ ಸಂಘಟನೆಗಳ ಸಂಯುಕ್ತರಂಗದ ಅಧ್ಯಕ್ಷ ಡಾ. ಡಿಪಿಎಸ್ ಮುನಿರಾಜು ಹೇಳಿದರು.

ಬಾಬಾ ಸಾಹೇಬರ ಜಯಂತಿಯನ್ನು ಯಶಸ್ವಿಯಾಗಿ ಮಾಡಲು ಸಹಕರಿಸಿದ ಶಾಸಕ ಕೊತ್ತೂರು ಮಂಜುನಾಥ್ ಅವರನ್ನು ಜಿಲ್ಲಾ ದಲಿತ ಸಂಘಟನೆಗಳ ಸಂಯುಕ್ತರಂಗದಿಂದ ಸನ್ಮಾನಿಸಿ ಮಾತನಾಡಿ, ಶಾಸಕರ ಸಹಕಾರದಿಂದಾಗಿ ಅಂಬೇಡ್ಕರ್ ಜಯಂತಿ ಅದ್ದೂರಿಯಾಗಿ ನಡೆದಿದ್ದು ಇನ್ನೂರಕ್ಕೂ ಹೆಚ್ಚಿನ ಪಲ್ಲಕ್ಕಿಗಳು ಮೆರವಣಿಗೆಯಲ್ಲಿ ಭಾಗವಹಿಸಿದ್ದವು. ಪ್ರಥಮ ಬಹುಮಾನವಾಗಿ ಒಂದು ಲಕ್ಷ ರೂ, ಎರಡನೇ ಬಹುಮಾನವಾಗಿ 75 ಸಾವಿರ ರೂ ಮತ್ತು ಮೂರನೇ ಬಹುಮಾನವಾಗಿ 50 ಸಾವಿರ ರೂ. ಬಹುಮಾನ ವಿತರಣೆ ಮಾಡಿದ್ದೇ ಅಲ್ಲದೆ ಭಾಗವಹಿಸಿದ್ದ ಎಲ್ಲ ಸ್ಥಬ್ದ ಚಿತ್ರಗಳಿಗೆ ತಲಾ 10 ಸಾವಿರ ರೂ. ಗೌರವಧನ ನೀಡಿದ್ದು ಕೋಲಾರ ಜಿಲ್ಲೆಯ ಇತಿಹಾಸದಲ್ಲೇ ದಾಖಲೆ ಎಂದು ಶ್ಲಾಘಿಸಿದರು. ದಲಿತ ಮುಖಂಡ ನರಸಾಪುರ ಎಸ್.ನಾರಾಯಣಸ್ವಾಮಿ ಮಾತನಾಡಿ, ಪ್ರತಿ ವರ್ಷ ಅಂಬೇಡ್ಕರ್ ಜಯಂತಿ ಮಾಡುವಾಗ ನಮ್ಮ ನಮಲ್ಲೇ ಸ್ವಲ್ಪ ಮಟ್ಟಿನ ಅಸಮಾಧಾನ ಇರುತ್ತಿತ್ತು. ಆದರೆ ಈ ವರ್ಷ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ದಲಿತರಲ್ಲಿ ಎಳ್ಳಷ್ಟೂ ಅಸಮಾಧಾನ ಉಂಟಾಗದಂತೆ ಇಡೀ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರ್ವಹಿಸಿದ ಶಾಸಕ ಕೊತ್ತೂರು ಮಂಜುನಾಥ್ ಅವರ ನಾಯಕತ್ವ ಮುಂದಿನ 10 ವರ್ಷ ಕೋಲಾರಕ್ಕೆ ಬೇಕಾಗಿದೆ ಎಂದು ನುಡಿದರು.



ಶಾಸಕ ಕೊತ್ತೂರು ಮಂಜುನಾಥ್ ಮಾತನಾಡಿ, ಕಳೆದ 20 ವರ್ಷದಲ್ಲಿ 4 ವರ್ಷ ಮಾತ್ರ ಅಂಬೇಡ್ಕರ್ ಜಯಂತಿ ಆಚರಣೆಗೆ ಅವಕಾಶ ಸಿಕ್ಕಿದ್ದು ಉಳಿದೆಲ್ಲಾ ವರ್ಷಗಳನ್ನು ಚುನಾವಣಾ ನೀತಿಸಂಹಿತೆ ಮತ್ತು ಕೋವಿಡ್ ನುಂಗಿಹಾಕಿತ್ತು. ಈ ವರ್ಷ ಬಾಬಾ ಸಾಹೇಬರ ಜಯಂತಿ ಆಚರಣೆಗೆ ಯಾವುದೇ ತೊಡಕು ಉಂಟಾಗದ ಕಾರಣ ಅದ್ದೂರಿಯಾಗಿ ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಗಿದ್ದು ಜಿಲ್ಲಾ ದಲಿತ ಸಂಘಟನೆಗಳ ಸಂಯುಕ್ತರಂಗದ ಅಧ್ಯಕ್ಷ ಡಾ. ಡಿಪಿಎಸ್ ಮುನಿರಾಜು ಅವರು ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಕಾರ್ಯಕ್ರಮವನ್ನು ಯಶಸ್ವಿಯಾಗಿ ನಿರ್ವಹಣೆ ಮಾಡಿದ್ದಾರೆಂದು ಸಂತಸ ವ್ಯಕ್ತಪಡಿಸಿದರು. ಕಾಂಗ್ರೆಸ್ ಮುಖಂಡ ಮೈಲಾಂಡಹಳ್ಳಿ ಮುರಳಿ, ದಲಿತ ಮುಖಂಡರಾದ ಮೇಡಿಹಾಳ ಡಾ.ಮುನಿಆಂಜನಪ್ಪ, ಡಿಎಸ್‌ಎಸ್ ಮಂಜುಳಾ, ಖಾದ್ರಿಪುರ ಬಾಬು, ನಾರಾಯಣಸ್ವಾಮಿ, ಗಾಂಧಿನಗರ ಶ್ರೀರಂಗ, ಆರ್.ನಾರಾಯಣಪ್ಪ, ಬಿ.ಗೋವಿಂದಪ್ಪ, ಆರ್.ಮುನಿಯಪ್ಪ, ಮಂಜುನಾಥ, ವಿನೋದ್, ಮೆಕಾನಿಕ್ ಸುಬ್ರಮಣಿ, ನಾರಾಯಣಪ್ಪ ನಿಯೋಗದಲ್ಲಿದ್ದರು.

### ದಾರಿ ಬಿಡುವ ವಿಚಾರಕ್ಕೆ ಗಲಾಟೆ

# ರೈತನ ಮೇಲೆ ಗುಂಡಿನ ದಾಳಿ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ಜಿಲ್ಲೆ ಮಂಚೇನಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ರವಿ ಎಂಬ ವ್ಯಕ್ತಿ ಒರ್ವನ ಮೇಲೆ ಕ್ರಷರ್ ಮಾಲೀಕನಿಂದ ಗುಂಡಿನ ದಾಳಿ ನಡೆದಿದೆ ಎಂದು ವರದಿಯಾಗಿದೆ.

ಸ್ಟೋನ್ ಕ್ರಷರ್ ಗೆ ರಸ್ತೆ ಮಾಡುವ ವಿಚಾರದಲ್ಲಿ ನಡೆದ ಜಗಳದಲ್ಲಿ ಕ್ರಷರ್ ಮಾಲೀಕ ಗುಂಡಿನ ದಾಳಿ ಮಾಡಿದ್ದು ಗುಂಡಿಗೆ ಬಲಿಯಾದ ವ್ಯಕ್ತಿಯ ಕಾಲಿಗೆ ತೀವ್ರ ಪೆಟ್ಟು ಬಿದ್ದಿದೆ,ಇನ್ನು ಗುಂಡು ಹಾರಿಸಿದ ವ್ಯಕ್ತಿಯನ್ನ ಬಂಧಿಸಿ ಕಠಿಣ ಕ್ರಮ ಜರುಗಿಸಬೇಕು ಎಂದು ರೈತರು ಪ್ರತಿಭಟನೆ ನಡೆಸಿದ್ದು ಗುಂಡು ಹಾರಿಸಿದ ವ್ಯಕ್ತಿಯನ್ನ ಪೊಲೀಸರು ಬಂಧಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಗನ್ ಸಂಸ್ಕೃತಿ ಪ್ರದರ್ಶನವಾಗುತ್ತಿದೆಯೇ ಎಂಬ ಮಾತುಗಳು ಸಾರ್ವಜನಿಕರಲ್ಲಿ ಕೇಳಿ ಬರುತ್ತಿದೆ,ಜಿಲ್ಲೆಯ ಮಂಚೇನಹಳ್ಳಿ ಹೊರವಲಯದಲ್ಲಿ ಘಟನೆ ನಡೆದಿದ್ದು.ಕಲ್ಲು ಕ್ವಾರಿ ಕ್ರಷರ್?ಗೆ ರಸ್ತೆ ನಿರ್ಮಾಣಕ್ಕೆ ವಿರೋಧ ವ್ಯಕ್ತಪಡಿಸಿ ಸ್ಥಳೀಯರು ಪ್ರತಿಭಟನೆ ನಡೆಸುತ್ತಿದ್ದರು ರಸ್ತೆ ನಿರ್ಮಾಣಕ್ಕೆ ವಿರೋಧ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಸಕಲೇಶ್ ಎಂಬಾತ ಸಿನಿಮೀಯ ರೀತಿಯಲ್ಲಿ ಪ್ರತಿಭಟನೆ ನಡೆಸುತ್ತಿದ್ದವರ ಮೇಲೆ ಗುಂಡಿನ ದಾಳಿ ನಡೆಸಿದ್ದಾರೆ ಎನ್ನಲಾಗಿದೆ,ಕ್ರಷರ್ ಗೆ ಅನುಮತಿ ನೀಡಿರುವುದರ ವಿರುದ್ದ ಸ್ಥಳೀಯರಿಂದ ನಿರಂತರವಾಗಿ ಪ್ರತಿಭಟನೆಯೂ ನಡೆಯುತಿತ್ತು ಈ ಕುರಿತು ಜನಪ್ರತಿನಿಧಿಗಳು ಕ್ರಷರ್ ಸ್ಥಾಪಿಸುವ ಕುರಿತು ವಿರೋದ ವ್ಯಕ್ತಪಡಿಸಿದ್ದರು ಈ ಎಲ್ಲಾ ವಿರೋದದ ಮದ್ಯೆಯೂ ಕ್ರಷರ್ಗೆ ರಸ್ತೆ ಕಾಮಗಾರಿಯನ್ನ ಕ್ವಾರಿ ಮಾಲೀಕರು ನಡೆಸುತಿದ್ದರು ಅದನ್ನ ತಡೆಯಲು ಹೋದ ಸ್ಥಳೀಯ ರವಿ ಮತ್ತು ಕ್ರಷರ್ ಪಾಲುದಾರ ಸಕಲೇಶ್ ಎನ್ನುವವರ ಮದ್ಯೆ ಜಟಾಪಟಿ ನಡೆದಿದೆ ಎನ್ನಲಾಗಿದ್ದು ತಳ್ಳಾಟ ನೂಕಾಟ ವೇಳೆ ಸಕಲೇಶ್ ತಲೆಗೆ ಪೆಟ್ಟು ಬಿದ್ದಿದೆ ಎನ್ನಲಾಗಿದ್ದು ಅದನ್ನೆ ನೆಪಮಾಡಿಕೊಂಡ ಸಕಲೇಶ್ ತನ್ನ ಬಳಿ ಇದ್ದ ಪಿಸ್ಟೂಲ್ ನಿಂದ ಗುಂಡು ಹಾರಿಸಿದ ಪರಿಣಾಮ ರವಿ ಕಾಲಿಗೆ ಗುಂಡು ತಾಗಿ ತೀವ್ರ ಗಾಯವಾಗಿದೆ ರವಿ ಗುಂಡು ಹಾರಿಸಿದ ಸಕಲೇಶ್ ಅಷ್ಟಕ್ಕೆ ಸುಮ್ಮನಾಗದೆ ಅಲ್ಲಿ ಸೇರಿದ್ದ ರೈತರ ಮೇಲೆಲ್ಲ ಪಿಸ್ತೋಲ್ ತೋರಿಸಿ ಯಾರು ಬರ್ತರೋ ಬರ್ರೋ ನೋಡೋಣ ಎಂದು ಹೆದರಿಸುತಿದ್ದ ವೀಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.ಮಾಹಿತಿ ತಿಳಿದ ಪೊಲೀಸರು ಆಸ್ಪತ್ರೆಗೆ ದಾವಿಸಿ ಆತನನ್ನ ಬಂದಿಸಿ ಸ್ಥಳಕ್ಕೆ ಕರೆದೊಯಿದ್ದಾರೆ,ಸ್ಥಳಕ್ಕೆ ಎಸ್ ಪಿ ಕುಶಾಲ್ ಚೌಕ್ಸೆ ಬೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಇನ್ನೂ ಈ ಘಟನೆ ಬಗ್ಗೆ ಪ್ರತಿಕ್ರಿಯೆ ನೀಡಿರುವ ಸಂಸದ ಡಾ ಕೆ ಸುಧಾಕರ್ ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರಕ್ಕೆ ಎಂತಾಗತಿ ಬಂತಪ್ಪ ಕಳೆದ ಐವತ್ತು ವರ್ಷಗಳಲ್ಲಿ ಗನ್ ಸಂಸ್ಕೃತಿ ನೋಡಿಯೇ ಇಲ್ಲಾ ಮಂಚೇನಹಳ್ಳಿ ತಾಲ್ಲೂಕು ಮಿಣಕನಗುರ್ಕಿ ಪಂಚಾಯಿತಿ ವ್ಯಾಪ್ತಿಯಲ್ಲಿ ನಡೆದ ಗುಂಡಿನ ಘಟನೆ ಕ್ಷೇತ್ರದ ಜನರಿಗೆ ದಿಗಿಲು ಹುಟ್ಟಿಸುವಂತಿದೆ ಸಿನಿಮಾ ಸ್ಟೈಲಲ್ಲಿ ಡೈಲಾಗ್ ಹೊಡೆದು ಕ್ರಷರ್ ತೆರೆಯಲು ಬಿಡೊಲ್ಲ ಎಂದಿದ್ದ ಪ್ರತಿನಿಧಿ ಈಗ ಏನು ಮಾಡುತಿದ್ದಾರೆ ನಾನು ಶಾಸಕನಾಗಿದ್ದ ಹತ್ತು ವರ್ಷಗಳ ಕಾಲ ಅಲ್ಲಿ ಕ್ರಷರ್ ಗೆ ಎಷ್ಟೆ ಒತ್ತಡ ಬಂದರೂ ಅನುಮತಿ ನೀಡಿರಲಿಲ್ಲ ಕಾಶ್ಮೀರದಲ್ಲಿ ಉಗ್ರರ ದಾಳಿಯಂತೆ ಇಲ್ಲಿ ಪ್ರಭಾವಿಗಳಿಂದ ಅಮಾಯಕರ ಮೇಲೆ ದಾಳಿ ನಡೆದಿದೆ ಈಗೆ ಮುಂದುವರೆದರೆ ಜನರೇ ಇವರಿಗೆ ತಕ್ಕ ಪಾಠ ಕಲಿಸುತ್ತಾರೆಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಘಟನೆ ನಡೆದ ಕೂಡಲೆ ಮಂಚೇನಹಳ್ಳಿ ಪೊಲೀಸ್ ಠಾಣೆ ಮುಂದೆ ಜಮಾಯಿಸಿದ ಸಾರ್ವಜನಿಕರು,ರೈತಸಂಘದ ಕಾರ್ಯಕರ್ತರು ಪೈರಿಂಗ್ ಮಾಡಿದ ವ್ಯಕ್ತಿಯನ್ನ ಬಂದಿಸಬೇಕು ಕ್ರಷರ್ ಗೆ ಅನುಮತಿ ನೀಡಿದ ಆದೇಶ ರದ್ದುಪಡಿಸಬೇಕೆಂದು ಘೋಷಣೆ ಕೂಗಿ ಒತ್ತಾಯಿಸುತ್ತಿದ್ದರು.



# ಭೂ ಮಾಫಿಯಾದವರ ವಿರುದ್ಧ ಬಾವನಹಳ್ಳಿ ಗ್ರಾಮಸ್ಥರು ಆಕ್ರೋಶ

**ಮಾಲೂರು :** 200 ವರ್ಷಗಳ ಸರ್ಕಾರದ ಕೆರೆಯನ್ನು ನಕಲಿ ದಾಖಲೆ ಸೃಷ್ಟಿಸಿ ಕೆರೆಯನ್ನು ಕಬಳಿಸಿ ಮಾರಾಟಕ್ಕೆ ಮುಂದಾಗಿರುವ ಭೂ ಮಾಫಿಯಾದವರ ವಿರುದ್ಧ ಬಾವನಹಳ್ಳಿ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿ ತಾಲ್ಲೂಕು ಸೌಧದ ಮುಂದೆ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿರುವ ಘಟನೆ ನಡೆದಿದೆ,

ಮಾಲೂರು ತಾಲ್ಲೂಕಿನ ಕಸಬಾ ಹೋಬಳಿಯ ಅಬ್ಬೇನಹಳ್ಳಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಬಾವನಹಳ್ಳಿ ಗ್ರಾಮದ ಸರ್ವೆ ನಂಬರ್ ಸುಮಾರು 95 ಎಕರೆ ಭೂಮಿಯಲ್ಲಿ 26 ಎಕರೆ ಭೂಮಿಯನ್ನು ಕೆಲ ಪ್ರಭಾವಿ ವ್ಯಕ್ತಿಗಳು ಒತ್ತುವರಿ ಮಾಡಿಕೊಂಡಿದ್ದು ಕೆರೆಯ ಮದ್ಯೆ ಭಾಗದಲ್ಲಿ ಕಟ್ಟೆ ನಿರ್ಮಾಣ ಮಾಡಲು ಮುಂದಾದ ಭೂ ಮಾಫಿಯಾದವರ ವಿರುದ್ಧ ಬಾವನಹಳ್ಳಿ ಗ್ರಾಮಸ್ಥರು ಜಮಾಯಿಸಿ ಆಕ್ರೋಶ ವ್ಯಕ್ತಪಡಿಸಿದರು,

ಮೈಸೂರು ರಾಜರ ಕಾಲದಲ್ಲಿ ಬಾವನಹಳ್ಳಿ ಗ್ರಾಮದ ಸರ್ಕಾರಿ ಕೆರೆ ಅಂಗಳ ಎಂದು ದಾಖಲಾತಿಯಲ್ಲಿ ದಾಖಲಾಗಿದೆ, ಇತ್ತೀಚೆಗೆ ಈ ಪ್ರದೇಶದಲ್ಲಿ ಕೈಗಾರಿಕಾ ಪ್ರದೇಶದಲ್ಲಿ ಕಾರ್ಖಾನೆಗಳು ಹೆಚ್ಚಾಗಿದ್ದು, ಇಲ್ಲಿನ ಭೂಮಿಯ ಬೆಲೆ ಗಗನಕ್ಕೆ ಏರಿದ ಕಾರಣ ಕೆರೆಯನ್ನು ಒತ್ತುವರಿ ಮಾಡಿಕೊಂಡು ಕಂಪನಿಗಳಿಗೆ ಭೂಮಿಯನ್ನ ಮಾರಲು ಭೂ ಮಾಫಿಯಾದವರು ಮುಂದಾಗಿದ್ದಾರೆ ಎಂದು ದೂರಿದರು,

ಆದರೆ ಸರ್ಕಾರಿ ಕೆರೆ ಯನ್ನು ಸರ್ಕಾರಿ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಕೆರೆಯನ್ನು ಉಳಿಸಿಕೊಳ್ಳಲು ನಿರ್ಲಕ್ಷ್ಯ ವಹಿಸಿರೋದು ಗ್ರಾಮಸ್ಥರ ಆಕ್ರೋಶಕ್ಕೆ ಗುರಿಯಾಗಿದ್ದು, ನಮ್ಮ ಕೆರೆ ನಮ್ಮ ಹಕ್ಕು ಎಂಬ ಘೋ?ಣೆಯೊಂದಿಗೆ ಬಾವನಹಳ್ಳಿ ಗ್ರಾಮಸ್ಥರು ಕೆರೆ ಉಳಿಸಲು ತಹಶಿಲ್ದಾರ್ ಕಛೇರಿ ಮುಂದೆ ಪ್ರತಿಭಟನೆ ನಡೆಸಿ ಒತ್ತುವರಿ ತೆರವುಗೊಳಿಸಬೇಕು ಎಂದು ಆಗ್ರಹಿಸಿದರು,

ಇನ್ನೂ ತಹಶೀಲ್ದಾರ್ ಎಂ.ವಿ.ರೂಪ ಬಾವನಹಳ್ಳಿ ಗ್ರಾಮದ ಕೆರೆಗೆ ಭೇಟಿ ನೀಡಿ ಕೆರೆಗೆ ಅಡ್ಡಗಟ್ಟುತ್ತಿರುವ ಕಟ್ಟೆ ಕಾಮಗಾರಿ ನಿಲ್ಲಿಸಿ ಈ ಪ್ರಕರಣ ಇತ್ಯರ್ಥ ಆಗುವವರೆಗೂ ಯಾವುದೇ ಕಾಮಗಾರಿ ನಡೆಸದಂತೆ ತಾಕೀತು ಮಾಡಿದರು,

ಈ ಸಂದರ್ಭದಲ್ಲಿ ಗ್ರಾ.ಪಂ.ಮಾಜಿ ಅಧ್ಯಕ್ಷ ಮಂಜುನಾಥ್, ರಾಮಪ್ಪ, ಮನೋಹರ, ಡಿ.ಮಂಜುನಾಥ್ ಪ್ರಕಾಶ್, ದೇವೇಂದ್ರ, ಪ್ರತಾಪ್, ಓಂಪ್ರಕಾ ಶ್, ನಾರಾಯಣ ಗೌಡ, ಶಿವಾರೆಡ್ಡಿ, ಗೌತಮರೆಡ್ಡಿ, ಪ್ರಕಾಶ್, ರಮೇಶ್, ಎಂ.ಟಿ.ಬಿ ಮುರಳಿ, ವಿಜಿ, ಡಿ.ಸಿ.ಮುರಳಿರೆಡ್ಡಿ, ಸೇರಿದಂತೆ ಹಲವಾರು ಗ್ರಾಮಸ್ಥರು ಭಾಗವಹಿಸಿದ್ದರು.



# 25ರಿಂದ ಸಾಂಸ್ಕೃತಿಕ ಉತ್ಸವ 'ವಿದ್ಯುತ್ 2025'

**ಮೈಸೂರು:**ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜು, ಮೈಸೂರು ವಾರ್ಷಿಕ ಸಾಂಸ್ಕೃತಿಕ ಉತ್ಸವ ವಿದ್ಯುತ್ 2025 ಅನ್ನು ಏಪ್ರಿಲ್ 25ರಿಂದ 27ರವರೆಗೆ, 2025ರ ವರೆಗೆ, ವಿವಿಸಿಇ ಕ್ಯಾಂಪಸ್‌ನಲ್ಲಿ ಆಯೋಜಿಸಿದೆ.

ಬುಧವಾರ ಇಲ್ಲಿನ ಪ್ರೆಸ್ ಕ್ಲಬ್‌ನಲ್ಲಿ ಮಾಧ್ಯಮ ಪ್ರತಿನಿಧಿಗಳನ್ನುದ್ದೇಶಿಸಿ ಮಾತನಾಡಿದ ವಿವಿಸಿಇಯ ಉಸ್ತುವಾರಿ ಪ್ರಾಂಶುಪಾಲ ಸುದೇವ್ ಎಲ್ವೆ,''ವಿದ್ಯುತ್‌ನ ಮೊದಲ ದಿನ, ಪ್ರೊ. ಎಸ್. ಆರ್. ನಿರಂಜನ, ಗೌರವಾನ್ವಿತ ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಮಂಡಳಿ, ಕಾರ್ಯಕ್ರಮವನ್ನು ಉದ್ಘಾಟಿಸಿ ಈ ಮೂರು ದಿನಗಳ ಉತ್ಸವಕ್ಕೆ ಚಾಲನೆ ನೀಡಲಿದ್ದಾರೆ. ಅವರ ಜೊತೆಗೆ ಶ್ರೀ. ಗುಂಡಪ್ಪ ಗೌಡ, ವಿದ್ಯಾವರ್ಧಕ ಸಂಘದ ಗೌರವಾಧ್ಯಕ್ಷರು, ಅಭಿಯಂತರ ಪಿ. ವಿಶ್ವನಾಥ್, ವಿದ್ಯಾವರ್ಧಕ ಸಂಘದ ಗೌರವ ಕಾರ್ಯದರ್ಶಿಗಳು, ಶ್ರೀ. ಶ್ರೀಶೈಲ ರಾಮಣ್ಣನವರ, ಗೌರವ ಕೋಶಾಧಿಕಾರಿಗಳು, ಡಾ. ಬಿ. ಸದಾಶಿವ ಗೌಡ, ಪ್ರಾಂಶುಪಾಲರು, ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜು ಮತ್ತು ಡಾ. ಗೌರಿಶಂಕರ ಬಿ.ಎಸ್, ಸಾಂಸ್ಕೃತಿಕ ಸಮಿತಿಯ ಅಧ್ಯಕ್ಷರು ಉಪಸ್ಥಿತರಿರಲಿದ್ದಾರೆ. ಉದ್ಘಾಟನೆಯ ನಂತರ ಓಖಖ ಮತ್ತು ರೆಡ್ ಕ್ರಾಸ್ ಸಹಯೋಗದಲ್ಲಿ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿದೆ''.

ವಿದ್ಯುತ್‌ನ ಸಾಂಸ್ಕೃತಿಕ ಕಾರ್ಯದರ್ಶಿ ಬಿ.ಎಸ್.ಗೌರಿಶಂಕರ್ ಹೇಳಿದರು ''ವಿದ್ಯುತ್ ವಿದ್ಯಾರ್ಥಿಗಳಿಂದ ಆಯೋಜಿಸಲಾಗುವ ವಾರ್ಷಿಕ ಸಾಂಸ್ಕೃತಿಕ ಮಹೋತ್ಸವವಾಗಿದ್ದು, ವೈವಿಧ್ಯಮಯ ಸಾಂಸ್ಕೃತಿಕ ಹಾಗೂ ಕಲೆಗಳ ಕಾರ್ಯಕ್ರಮಗಳನ್ನು ಒಳಗೊಂಡಿರುತ್ತದೆ. ಈ ಬಹು ನಿರೀಕ್ಷಿತ ಉತ್ಸವವು ವಿವಿಧ ಕಾಲೇಜುಗಳು ಹಾಗೂ ವಿಶ್ವವಿದ್ಯಾಲಯಗಳಿಂದ ವಿದ್ಯಾರ್ಥಿಗಳನ್ನು ಒಟ್ಟಿಗೆ ಸೇರಿಸುವ ಮೂಲಕ ಸ್ನೇಹಪರ ಸ್ಪರ್ಧಾತ್ಮಕತೆಯನ್ನು ಉತ್ತೇಜಿಸುತ್ತದೆ. ಈ ವರ್ಷದ ವಿದ್ಯುತ್ 2025 ಹೆಚ್ಚು ಜನರನ್ನು ಆಕರ್ಷಿಸುವ ಕಾರ್ಯಕ್ರಮಗಳೊಂದಿಗೆ ಮತ್ತಷ್ಟು ಭವ್ಯವಾಗಲಿದೆ. ಈ ಕಾರ್ಯಕ್ರಮಗಳಲ್ಲಿ ವೇದಿಕೆ ಮೇಲಿನ ಹಾಗೂ ಹೊರಗಿನ ಕ್ರಿಯೆಗಳು ಹಾಗೂ ಹಲವಾರು ಸ್ಪರ್ಧೆಗಳು ನಡೆಯಲಿದ್ದು, ಭಾಗವಹಿಸುವವರು ಹೆಚ್ಚು ಸಂಖ್ಯೆಯಲ್ಲಿ ಬರಲಿದ್ದಾರೆ''. ಇಂಪನಾ ಮತ್ತು ಆಕಾಶ್, ಇಬ್ಬರೂ ವಿದ್ಯಾರ್ಥಿ ಸಂಯೋಜಕರು, ಈ ಕಾರ್ಯಕ್ರಮಗಳನ್ನು ಆಯೋಜಿಸುವ ಅನುಭವವನ್ನು ಹಂಚಿಕೊಂಡರು. ಈ ಕಾರ್ಯಕ್ರಮವನ್ನು ಆಯೋಜಿಸುವಾಗ ನಾವು ಸಂವಹನ ಕೌಶಲ್ಯಗಳು ಮತ್ತು ಸಮಯ ನಿರ್ವಹಣೆಯನ್ನ ಕಲಿತೆವು, ಎಂದು ಇಂಪನಾ ಹೇಳಿದರು. ಪ್ರೊ. ಎಚ್. ಎಸ್. ಪುಣಿತ್, ಪ್ರೊ. ಎಚ್. ಲಕ್ಷ್ಮಿ ಮತ್ತು ಪ್ರೊ. ಸ್ಪೂರ್ತಿ ಕೂಡ ಉಪಸ್ಥಿತರಿದ್ದರು.

ದಿನದ ಕಾರ್ಯಕ್ರಮಗಳಲ್ಲಿ: ಡಾಗ್ ಶೋ, ಆಟೋ ಎಕ್ಸ್‌ಪೋ, ರಂಗೋಲಿ, ರಿದಮ್ ರಂಬಲ್, ದಿ ಸಾಂಗ್‌ಬರ್ಡ್ಸ್ ಎಕೊ, ಮೆಹೆಂದಿ ಸ್ಪರ್ಧೆ, ದಿ ರನ್‌ವೇ ಶೋಡೌನ್, ದಿ ಲ್ಯೂಮಿನಸ್ ಲೆನ್ಸ್ (ಫೋಟೋಗ್ರಫಿ ಸ್ಪರ್ಧೆ), ಃಉಖಖ ಮತ್ತು ಫ್ರೀ ಫೈರ್ ಟೂರ್ನಮೆಂಟ್, ಕ್ಯಾರಂ, ಟ್ರೆಜರ್ ಹಂಟ್, ಮ್ಯಾಡ್ ಆಡ್ಸ್, ಸಾಮಾನ್ಯ ಜ್ಞಾನ ಮತ್ತು ಸಿನೆಮಾ ಕ್ವಿಜ್, ಡಬ್ ಶರೇಡ್ಸ್, ಮುಖದ ಚಿತ್ತಾರ, ಪಿಕ್ಷನರಿ ಇತ್ಯಾದಿ.

ಪ್ರಸಿದ್ಧ ಕಲಾವಿದರು ವಿವಿಧ ದಿನಗಳಲ್ಲಿ ಪ್ರದರ್ಶನ ನೀಡಲಿದ್ದಾರೆ:

ಎಪ್ರಿಲ್ 25 (ದಿನ 1) – ಸ್ಯಾಂಡಲ್ವುಡ್ ನೈಟ್: ಸಂಗೀತಾ ರವೀಂದ್ರನಾಥ್ ಪ್ರದರ್ಶನ ನೀಡಲಿದ್ದಾರೆ.

ಎಪ್ರಿಲ್ 26 (ದಿನ 2) – ಬಾಲಿವುಡ್ ನೈಟ್: ಹೆಸರಾಂತ ಹಿನ್ನೆಲೆ ಗಾಯಕಿ ಶಿರ್ಲಿ ಸೆಟಿಯಾ ತಮ್ಮ ಗಾಯನದಿಂದ ಪ್ರೇಕ್ಷಕರನ್ನು ಮನೋರಂಜಿಸಲಿದ್ದಾರೆ.

ಎಪ್ರಿಲ್ 27 (ದಿನ 3) – ಡಿಜೆ ನೈಟ್: ಡಿಜೆ ಶಿವ ಮಾನ್ವಿ ಯುವ ಪ್ರತಿಭೆಗಳಿಗೆ ಮನರಂಜನೆ ನೀಡಲಿದ್ದಾರೆ.

ಎಪ್ರಿಲ್ 27ರಂದು ವಿದ್ಯುತ್ 2025 ಗೆ ಸಂಭ್ರಮದ ಮುಕ್ತಾಯವಾಗುತ್ತದೆ. ಇದು ಸೃಜನಶೀಲತೆ, ಹೊಸತನ ಮತ್ತು ಯುವ ಶಕ್ತಿಯ ಸಡಗರದ ಉತ್ಸವವಾಗಿದ್ದು, ಪ್ರೇಕ್ಷಕರ ಮನಸ್ಸಿನಲ್ಲಿ ಶಾಶ್ವತವಾಗಿ ನೆಲೆಸುವ ಅನುಭವವಾಗಲಿದೆ.



# ಉಗ್ರರ ದಾಳಿಯಲ್ಲಿ ಮೃತಪಟ್ಟವರಿಗೆ ಶ್ರದ್ಧಾಂಜಲಿ

**ಮೈಸೂರು:** ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಉಗ್ರರು ದಾಳಿ ಮಾಡಿ, ಮಾರಣಹೋಮ ನಡೆಸಿದ್ದನ್ನು ಖಂಡಿಸಿ ಕನ್ನಡಾಂಬೆ ರಕ್ಷಣಾ ವೇದಿಕೆ ವತಿಯಿಂದ ನಗರದ ಗನ್‌ಹೌಸ್ ವೃತ್ತದ ಬಸವೇಶ್ವರ ಪುತ್ತಳಿ ಬಳಿ ಮೇಣದ ಬತ್ತಿ ಹಚ್ಚಿ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಈ ವೇಳೆ ವೇದಿಕೆ ಸಂಸ್ಥಾಪಕ ರಾಜ್ಯಾಧ್ಯಕ್ಷ ಬಿ.ಬಿ ರಾಜಶೇಖರ್ ಮಾತನಾಡಿ,

ಕಾಶ್ಮೀರವೆಂದರೆ ಭಾರತೀಯರಿಗೆ ಸ್ವರ್ಗ. ದೇಶಾದ್ಯಂತ ಜನ ಅಲ್ಲಿಗೆ ಭೇಟಿ ನೀಡುವುದು ಆ ಸುಂದರವಾದ ತಾಣಗಳನ್ನು ವೀಕ್ಷಿಸಲು. ಆದರೆ, ನಮ್ಮ ದೇಶದಲ್ಲಿ ನಮಗೆ ಕೆಲವು ಕಡೆ ರಕ್ಷಣೆ ಇಲ್ಲವೆಂದರೆ ನಾವು ಎಲ್ಲಿದ್ದೇವೆ ಎಂಬ ಎಂದು ಆಕ್ರೋಶ ವ್ಯಕ್ತಪಡಿಸಿದರು. ಈಗಾಗಲೇ ನಮ್ಮ ಯೋಧರು ಕೆಲವು ಉಗ್ರರನ್ನು ಮಟ್ಟ ಹಾಕಿದ್ದಾರೆ. ಭದ್ರತೆ ನಡುವೆಯೂ ಉಗ್ರರು ನುಸುಳುತ್ತಾರೆಂದರೆ ಕಾಶ್ಮೀರ ಅವರಿಗೆ ಅರಿವಿದೆ ಎಂಬುದು ಇಲ್ಲಿ ಗೊತ್ತಾಗುತ್ತದೆ. ಹೀಗಾಗಿ ಗಡಿಯಲ್ಲಿ ಭದ್ರತೆಯನ್ನು ಹೆಚ್ಚಿಸಬೇಕು. ಕೂಡಲೇ ಶಂಕಿತ ಪಾಕಿಸ್ತಾನಿ ಪ್ರಜೆಗಳನ್ನು ಗಡಿಯಿಂದ ಗಡಿಪಾರು ಮಾಡಬೇಕು ಎಂದು ಒತ್ತಾಯಿಸಿದರು. ವೇದಿಕೆ ಸಂಸ್ಥಾಪಕ ರಾಜ್ಯಾಧ್ಯಕ್ಷ ಬಿ.ಬಿ.ರಾಜ ಶೇಖರ್, ಪರಮೇಶ್, ಮಹದೇವ ಸ್ವಾಮಿ, ಮಂಜುಳಾ, ಸಂತೋಷ್, ಅನುರಾಜ್, ಭಾಗ್ಯ, ಅಜಯ್, ರವೀಶ, ನೇಹಾ, ಕೃಷ್ಣಪ್ಪ, ಸಿಂಧುವಳ್ಳಿ ಶಿವಕುಮಾರ್, ಸುಶೀಲ, ಪುಟರಾಜು, ಲೋಕೇಶ್, ಲಕ್ಷ್ಮೀ, ಶ್ರೀನಿವಾಸ್ ಸೇರಿದಂತೆ ಹಲವರು ಭಾಗವಹಿಸಿದ್ದರು.






ಮಹಾರಾಷ್ಟ್ರದ ರಾಹೌರಿಯ ಮಹಾತ್ಮ ಪುಲೆ ಕೃಷಿ ವಿದ್ಯಾಪೀಠದ ಘಟಿಕೋತ್ಸವದಲ್ಲಿ ಕೃಷಿ ಸ್ನಾತಕೋತ್ತರ ಪದವಿ ಚಿನ್ನದ ಪದಕ ಪುರಸ್ಕೃತೆ ಕುಮಾರಿ ಸಹನ.ಎಸ್.ವಿ ರವರು ಮಹಾರಾಷ್ಟ್ರದ ಘನತೆವೆತ್ತ ರಾಜ್ಯಪಾಲರಾದ ಶ್ರೀ ಸಿ.ಪಿ ರಾಧಾಕೃಷ್ಣ ರವರಿಂದ ಸ್ನಾತಕೋತ್ತರ ಪದವಿ ಮತ್ತು ಚಿನ್ನದ ಪದಕ ಪಡೆದರು. ಕು. ಸಹನ.ಎಸ್.ವಿ ಕೋಂ ಶ್ರೀ ವೈದ್ಯಪ್ಪ, ರವರು ಮೂಲತ: ಮಂಡ್ಯ ಜಿಲ್ಲೆ ಮಳವಳ್ಳಿ ತಾಲ್ಲೂಕು ಸಮಶೆಟ್ಟಿಪುರ ಗ್ರಾಮದವರಾಗಿದ್ದು, ಇವರ ತಂದೆ ಶ್ರೀ ವೈದ್ಯಪ್ಪ ರವರು ಬೆಂಗಳೂರು ಬಿ.ಎಂ.ಟಿ.ಸಿ ಯಲ್ಲಿ ನೌಕರರಾಗಿದ್ದು, ತಾಯಿ ಶ್ರೀಮತಿ ಸುಧಾ ರವರು ಗೃಹಿಣಿಯಾಗಿರುತ್ತಾರೆ.. ಕುಮಾರಿ ಸಹನಾ.ಎಸ್.ವಿ ರವರು ಪ್ರಾಥಮಿಕ ಶಿಕ್ಷಣವನ್ನು ಬೇಗೂರಿನ ಲಿಟ್ಸ್ ಪ್ಲವರ್ ಸ್ಕೂಲ್‌ನಲ್ಲಿ ಪಡೆದಿದ್ದು, ನಂತರ ಪದವಿ ಪೂರ್ವ ಶಿಕ್ಷಣವನ್ನು ಬನ್ನೂರಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಮುಗಿಸಿ, ಪದವಿ ಶಿಕ್ಷಣವನ್ನು 'ತೋಟಗಾರಿಕಾ ಕಾಲೇಜು' ಇಲವಾಲ ಮೈಸೂರು ಇಲ್ಲಿ ಪಡೆದಿರುತ್ತಾರೆ.

# ಇಶಾ ಸಂಸ್ಥೆ ಅಕ್ರಮ ವಿರುದ್ಧ ಉಗ್ರ ಹೋರಾಟ

**ಚಿಕ್ಕಬಳ್ಳಾಪುರ :** ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರದಲ್ಲಿ ಶಿಕ್ಷಣ,ದಾರ್ಮಿಕ,ಯೋಗ ಕೇಂದ್ರದ ಹೆಸರಲ್ಲಿ ಸ್ಥಾಪನೆಯಾಗಿರುವ ಇಶಾ ಆದಿಯೋಗಿ ಸಂಸ್ಥೆಯಿಂದ ಸ್ಥಳೀಯರಿಗೆ ಯಾರಿಗೂ ಏನೂ ಪ್ರಯೋಜನವಾಗಿಲ್ಲ ಬದಲಿಗೆ ಅಕ್ರಮ ಕೂಟಗಳು ಸರ್ಕಾರಿ ಜಮೀನುಗಳ ವಶ,ಅಪಘಾತಗಳು ಸುಲಿಗೆಗಳು ಹೆಚ್ಚಾಗುತ್ತಿವೆ ಎಂದು ಜಿಲ್ಲಾಡಳಿತಕ್ಕೆ ಮನವರಿಕೆ ಮಾಡಿಕೊಟ್ಟರೂ ಕೇರ್ ಮಾಡಿಲ್ಲ ಆದ್ದರಿಂದ ಸುತ್ತಮುತ್ತಲ ರೈತರೂ ಸೇರಿದಂತೆ ಸಮಾಜಿಕ ಕಾರ್ಯಕರ್ತರು ಪ್ರತಿಭಟನೆ ನಡೆಸಲಾಗುವುದು ಎಂದು ಹಿರಿಯ ವಕೀಲ ನಾರಾಯಣಸ್ವಾಮಿ ಹಾಗು ಸಮಾಜಿಕ ಹೋರಾಟಗಾರ ಮುಸ್ತೂರು ಶ್ರೀದರ್ ತಿಳಿಸಿದ್ದಾರೆ.ಇಶಾ ಆದಿಯೋಗಿ ಸಂಸ್ಥೆ ಚಿಕ್ಕಬಳ್ಳಾಪುರ ದಲ್ಲಿ ರಚನೆಯಾಗಿರೋದ್ರಿಂದ ನಮ್ಮವರಿಗೆ ಏನು ಲಾಭ,ಇಲ್ಲಿನ ಸಾಗುವಳಿ ಭೂಮಿ ಕಳೆದುಕೊಂಡಿದ್ದೇವೆ ಪುರಾತನ ದೇವಾಲಯಗಳಿಗೆ ಭಕ್ತರ ಸಂಖ್ಯೆ ಕಡಿಮೆಯಾಗುತ್ತಿದೆ ಸರ್ಕಾರಿ ಗೋಮಾಳ ಜಮೀನು ಇದ್ದಕಿದ್ದಂತೆ ಮಾಯವಾಗುತ್ತಿದೆ ಸರ್ಕಾರಿ ಜಮೀನಿನಲ್ಲಿ ಸ್ವಂತ ರಸ್ತೆ ನಿರ್ಮಿಸಿಕೊಂಡು ಟೋಲ್ ಸಂಗ್ರಹಿಸುತಿದ್ದಾರೆ ಭಕ್ತಿಯ ಬದಲು ಆಮಿಷಗಳಿಗೆ ಜನ ಬಲಿಯಾಗುತಿದ್ದಾರೆ ಹೊರಗಡೆ ಜನ ನೂಕು ನುಗ್ಗಲಿನಿಂದ ಅಕ್ಕಪಕ್ಕ ಹಳ್ಳಿ ರಸ್ತೆಗಳು ಹಾಳಾಗಿ ಹೋಗಿವೆ ಅಫಘಾತಗಳು ಹೆಚ್ಚಾಗುತ್ತಿವೆ ಅಕ್ರಮ ಚಟುವಟಿಕೆಗಳ ತಾಣಗಳಾಗುತ್ತಿವೆ ಎಂದು ಸಮಾಜಿಕ ಹೋರಾಟಗಾರರ ಗಂಬೀರ ಸ್ವರೂಪದ ಆರೋಪ ಮಾಡಿದ್ದಾರೆ ಈ ಸಂಸ್ಥೆಯ ಕಾರ್ಯಚಟುವಟಿಕೆಗಳ ವಿರುದ್ದ ಜಿಲ್ಲಾಡಳಿತಕ್ಕೆ ದೂರು ನೀಡಿದರು ಕ್ರಮ ಜರುಗಿಸುತ್ತಿಲ್ಲ ತಹಶೀಲ್ದಾರರಿಗೆ ದೂರು ನೀಡಿದರು ಪ್ರಯೋಜನವಾಗಿಲ್ಲ ಎಂದು ಹಿರಿಯ ವಕೀಲ ನಾರಾಯಣಸ್ವಾಮಿ ಹಾಗು ಸಮಾಜಿಕ ಹೋರಾಟಗಾರ ಮುಸ್ತೂರು ಶ್ರೀದರ್ ಆರೋಪಿಸಿದ್ದಾರೆ.



ಚಿಕ್ಕಬಳ್ಳಾಪುರ ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಟಿ ನಡೆಸಿದ ಮುಷ್ಟೂರು ಶ್ರೀದರ್ ಪ್ರತಿದಿನ ಸಂಜೆ ಏಳು ಗಂಟೆಗೆ ಇಶಾದಲ್ಲಿ ಲೇಜರ್ ಲೈಟ್ ಗಳು ಆನ್ ಮಾಡೋದ್ರಿಂದ ಸಾವಿರಾರು ಜನ ಹಳ್ಳಿ ರಸ್ತೆಗಳಿಗೆ ನುಗ್ಗಿ ಬೆಳೆಗಳು ಹಾಳು ಮಾಡುತಿದ್ದಾರೆ ಅಕ್ರಮ ದಂದೆಗಳಲ್ಲಿ ಮುಳುಗಿದ್ದಾರೆ ಅಲ್ಲಿ ಬಕ್ತಿಗಿಂತ ಹಣಕ್ಕೆ ಹೆಚ್ಚು ಆದ್ಯತೆ ನೀಡುತಿದ್ದಾರೆ.ಸರ್ಕಾರಿ ಜಮೀನು ಒತ್ತುವರಿಯಾಗುತ್ತಿದೆ. ಅಲ್ಲಿ ನಡೆಯೋ ಅಕ್ರಮ ಚಟುವಟಿಕೆಗಳಿಂದ ಸುತ್ತಮುತ್ತಲ ಜನ ಬೇಸತ್ತು ಹೋಗಿದ್ದಾರೆ ಕೆಲವೆ ದಿನಗಳಲ್ಲಿ ಇಶಾ ಸಂಸ್ತೆ ವಿರುದ್ದ ಉಗ್ರ ಹೋರಾಟ ರೂಪಿಸಲಾಗುವುದು ಎಂದರು.

ಹಿರಿಯ ವಕೀಲ ನಾರಾಯಣಸ್ವಾಮಿ ಮಾತನಾಡಿ ಇಶಾ ಸಂಸ್ತೆ ಆದಿಯೋಗಿಗೆ ಪ್ರವೇಶ ಪಡೆಯಲು ಐವತ್ತರಿಂದ ನೂರು ರುಪಾಯಿ ಲಿಂಗಕ್ಕೆ ನೀರು ಹಾಕಲು ಐದು ನೂರು ರುಪಾಯಿ,ಅಬಿಷೇಕಕ್ಕೆ ಸಾವಿರಾರು ರುಪಾಯಿ ವಸೂಲಿ ಮಾಡುತಿದ್ದಾರೆ ದೇವರ ಹೆಸರಲ್ಲಿ ಜಗ್ಗಿವಾಸುದೇವ್ ಶೂ ಕಾಲಲ್ಲೆ ಡ್ಯಾನ್ಸ್ ಮಾಡ್ತಾರೆ ಇದೆಲ್ಲಾ ಹಿಂದೂ ಸಂಸ್ಕೃತಿಯನ್ನ ಹಾಳು ಮಾಡುವ ಪದ್ದತಿಯಾಗಿದೆ ಇವರಿಂದ ಜಿಲ್ಲಾಡಳಿತಕ್ಕಾಗಲಿ ಸರ್ಕಾರಕ್ಕಾಗಲಿ ನಯಾ ಪೈಸೆ ಆದಾಯವಿಲ್ಲ ಸುತ್ತಮುತ್ತ ಜಮೀನು ಬೆಲೆ ಜಾಸ್ತಿ ಆಗ್ತಿದೆ ಕಾರಣಕ್ಕೆ ಹೊರಗಿನವರೂ ದಂದೆ ನಡೆಸಿ ಅಮಾಯಕರ ಜಮೀನುಗಳು ಸರ್ಕಾರಿ ಕರಾಬು ಜಮೀನು ಮಂಗಮಾಯ ಮಾಡುತಿದ್ದಾರೆ ಅದಕ್ಕಾಗಿ ಸಂಸ್ಥೆ ವಿರುದ್ದ ತೀವ್ರತರ ಹೋರಾಟಕ್ಕೆ ನಾವು ಕೈ ಜೋಡಿಸುತ್ತೇವೆ ಹತ್ತಿರದಲ್ಲಿ ಸಮಾನ ಮನಸ್ಕರ ಮತ್ತು ಸುತ್ತ ಮುತ್ತ ರೈತರ ಜತೆ ಪ್ರತಿಭಟನೆಗೆ ಕರೆ ನೀಡುತ್ತೇವೆ ಎಂದರು.ಈ ವೇಳೆ ಆರ್ ಟಿ ಐ ಕಾರ್ಯಕರ್ತೆ ಜ್ಯೋತಿ,ಎಲ್ ಐ ಸಿ ಸೋಮಶೇಖರ್,ಕನ್ನಡ ಪರ ಹೋರಾಟಗಾರ ರಮೇಶ್ ಗೌಡ,ಚಂದ್ರಮೋಹನ್ ಇತರರು ಹಾಜರಿದ್ದರು.

ಸಂಜೆ ಟಿಪ್ಸ್

## ಅಸಿಸ್ಟೆಡ್ ಲಿವಿಂಗ್ ಸೆಂಟರ್ ಪ್ರಾರಂಭಿಸಿದ ಗೆರಿ ಕೇರ್

ವೃದ್ಧಾಶ್ರಮ ತಜ್ಞರ ನೇತೃತ್ವದಲ್ಲಿ ಹಿರಿಯ ನಾಗರಿಕರಿಗಾಗಿ ಆರೋಗ್ಯ ಸೇವೆಯನ್ನು ಒದಗಿಸುತ್ತಿರುವ ಭಾರತದ ಮೊದಲ ಸಮಗ್ರ ಆರೋಗ್ಯ ಸೇವಾ ಪೂರೈಕೆದಾರರಾದ ಗೆರಿ ಕೇರ್ ಹೆಲ್ತ್ ಸರ್ವೀಸಸ್, ಬೆಂಗಳೂರಿನಲ್ಲಿ ಮೊದಲ ಬಾರಿಗೆ ತನ್ನದೇ ರೀತಿಯದ್ದಾದ ಅಸಿಸ್ಟೆಡ್ ಲಿವಿಂಗ್ ಸೆಂಟರ್ ಅನ್ನು ಪ್ರಾರಂಭಿಸುವುದಾಗಿ ಘೋಷಿಸಿದೆ. ಅಲ್ಸೂರಿನ ಸೇಂಟ್ ಜಾನ್ಸ್ ರಸ್ತೆಯಲ್ಲಿರುವ ಈ 100 ಹಾಸಿಗೆಗಳ ಪ್ರೀಮಿಯಂ ಕೌಶಲ್ಯಪೂರ್ಣ ನರ್ಸಿಂಗ್ ಸೌಲಭ್ಯವು ಗೆರಿ ಕೇರ್‌ನ ರಾಷ್ಟ್ರೀಯ ವಿಸ್ತರಣೆಯಲ್ಲಿ ಪ್ರಮುಖ ಮೈಲಿಗಲ್ಲಾಗಿ ಗುರುತಿಸಿಕೊಂಡಿದ್ದು, ನಗರಕ್ಕೆ ಮೊದಲ ಬಾರಿಗೆ ತನ್ನದೇ ರೀತಿಯದ್ದಾದ ಹಿರಿಯರ ಆರೈಕೆಯ ಪರಿಹಾರವನ್ನು ಪರಿಚಯಿಸುತ್ತಿದೆ. ಪ್ರಮುಖ ಆರೋಗ್ಯ-ಕೇಂದ್ರಿತ ಖಾಸಗಿ ಈಕ್ವಿಟಿ ಸಂಸ್ಥೆಯಿಂದ ಗೆರಿ ಕೇರ್‌ನ ಇತ್ತೀಚಿನ ಸಾಂಸ್ಥಿಕ ನಿಧಿಸಂಗ್ರಹವನ್ನು ಅನುಸರಿಸುತ್ತಿರುವ ಈ ವಿಸ್ತರಣೆಯು, ಕಂಪನಿಯ ಹೊಸ ಮಾರುಕಟ್ಟೆಗಳ ಬೆಳವಣಿಗೆ ವೇಗವನ್ನು ನೀಡುತ್ತದೆ ಮತ್ತು ಭಾರತದಾದ್ಯಂತ ಹಿರಿಯ ನಾಗರಿಕರ ಆರೈಕೆ ಸೇವೆಗಳ ನಿರಂತರತೆಯನ್ನು ಬಲಪಡಿಸುತ್ತದೆ.

ಮನೆಯಂತಹ ವಾತಾವರಣದಲ್ಲಿ ದಿನದ 24 ಗಂಟೆಗಳ ಕಾಲ ವೈದ್ಯಕೀಯ ಮೇಲ್ವಿಚಾರಣೆಯ ಅಗತ್ಯವಿರುವ ಹಿರಿಯ ನಾಗರಿಕರಿಗೆ ಬೆಂಬಲ ನೀಡುವ ಉದ್ದೇಶದಿಂದ ನಿರ್ಮಿಸಲಾದ ಈ ಅಲ್ಸೂರ್ ನ ಸೌಲಭ್ಯವು ವೃದ್ಧರಿಗೆ 24/7 ಸ್ಥಳದಲ್ಲೇ ವೈದ್ಯರ ನೆರವು, ಸಮರ್ಪಿತ ವೃದ್ಧಾಪ್ಯದ ನರ್ಸಿಂಗ್ ಸಿಬ್ಬಂದಿ ಮತ್ತು ಚಿಂತನಶೀಲವಾಗಿ ವಿನ್ಯಾಸಗೊಳಿಸಲಾದ ವಾಸಸ್ಥಳಗಳನ್ನು ಒದಗಿಸುತ್ತದೆ. ಹೆಚ್ಚಿನ ಅಪಾಯವನ್ನು ಎದುರಿಸುತ್ತಿರುವ ರೋಗಿಗಳಿಗೆ ಮೀಸಲಾದ ಹೈ ಡಿಪೆಂಡೆನ್ಸಿ ಯೂನಿಟ್ (ಊಆಗ) ಮತ್ತು ವಿಶೇಷ ಬುದ್ಧಿಮಾಂದ್ಯತೆ ಆರೈಕೆಗಾಗಿ ಮನಸ್ಸು ಮತ್ತು ಸ್ಮರಣಾ ಘಟಕವನ್ನು ಹೊಂದಿರುವ ಬೆಂಗಳೂರಿನ ಮೊದಲ ಹಿರಿಯ ನಾಗರಿಕರ ಆರೈಕೆ ಸೌಲಭ್ಯ ಇದಾಗಿದ್ದು, ನಗರದಲ್ಲಿ ಹಿರಿಯ-ಕೇಂದ್ರಿತ ಆರೋಗ್ಯ ರಕ್ಷಣೆಯಲ್ಲಿ ಹೊಸ ಮಾನದಂಡವನ್ನು ಸ್ಥಾಪಿಸಿದೆ.

5 ಕಿ.ಮೀ ವ್ಯಾಪ್ತಿಯಲ್ಲಿ ಲಭ್ಯವಾಗುವಂತಹ ನರ್ಸಿಂಗ್, ವೈದ್ಯರ ಭೇಟಿ, ಲ್ಯಾಬ್ ಡಯಾಗ್ನೋಸ್ಟಿಕ್ಸ್ ಮತ್ತು ಫಿಸಿಯೋಥೆರಪಿಯನ್ನು ಒಳಗೊಂಡಂತಹ ಹೋಮ್ ಕೇರ್ ಸೇವೆಗಳನ್ನು ಗೆರಿ ಕೇರ್ ಒದಗಿಸುತ್ತಿದೆ. ಕಂಪನಿಯು ನಗರದಲ್ಲಿ ತನ್ನ ಎರಡನೇ ಅಸಿಸ್ಟೆಡ್ ಲಿವಿಂಗ್ ಸೆಂಟರ್ ಅನ್ನು ಸರ್ಜಾಪುರದಲ್ಲಿ ಪ್ರಾರಂಭಿಸಲು ಸಜ್ಜಾಗಿದೆ ಮತ್ತು ಕೊಯಮತ್ತೂರು, ಹೈದರಾಬಾದ್ ಹಾಗೂ ಕೊಚ್ಚಿಯಲ್ಲಿ ಮುಂಬರುವ ಕೇಂದ್ರಗಳೊಂದಿಗೆ ದಕ್ಷಿಣ ಭಾರತದಾದ್ಯಂತ ತನ್ನ ಹೆಜ್ಜೆಗುರುತನ್ನು ವೇಗವಾಗಿ ವಿಸ್ತರಿಸುತ್ತಿದೆ.

## ಮೊಟ್ಟೆಗ್ರೇವಿ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

● 6 ಬೇಯಿಸಿದ ಮೊಟ್ಟೆ ● 2 ಉದ್ದುದ್ದವಾಗಿ ತೆಳ್ಳಗೆ ಕತ್ತರಿಸಿದ ಈರುಳ್ಳಿ ● ಸ್ವಲ್ಪ ಶುಂಠಿ ● ಅರ್ಧ ಚಮಚ ಖಾರದ ಪುಡಿ (ಖಾರಕ್ಕೆ ತಕ್ಕಷ್ಟು) ● 1 ಚಮಚ ಹುಣಸೆಹಣ್ಣಿನ ಪೇಸ್ಟ್ ● 2 ಚಮಚ ಎಣ್ಣೆ ● 1 ಚಮಚ ಸಾಸಿವೆ ● ರುಚಿಗೆ ತಕ್ಕ ಉಪ್ಪು ● 3 ಟೊಮೆಟೊ ● ಹಸಿ ಮೆಣಸಿನಕಾಯಿ 2 ● 1/4 ಚಮಚ ಅರಿಶಿಣ ಪುಡಿ ● ಒಂದೂವರೆ ಚಮಚ ರೋಸ್ಟ್ ಮಾಡಿದ ಕೊತ್ತಂಬರಿ ಪುಡಿ ● 1 ಚಕ್ಕೆ ● ಅರ್ಧ ಕಪ್ ತೆಂಗಿನಕಾಯಿ ಹಾಲು

### ಮಾಡುವ ವಿಧಾನ

**ಪ್ಯಾನ್ ಬಿಸಾಡಿ ಅದಕ್ಕೆ ಎಣ್ಣೆ ಹಾಕಿ, ಎಣ್ಣೆ ಬಿಸಿಯಾದಾಗ ಸಾಸಿವೆ ಹಾಕಿ. ಸಾಸಿವೆ ಚಟಾಪಟಾ ಶಬ್ದ ಬಂದಾಗ ಚಕ್ಕೆ ಹಾಕಿ, ಈಗ ಚಿಕ್ಕದಾಗಿ ಕತ್ತರಿಸಿದ ಶುಂಠಿ ಮತ್ತು ಈರುಳ್ಳಿ, ಹಸಿ ಮೆಣಸಿನಕಾಯಿ ಹಾಕಿ ಈರುಳ್ಳಿ ಕಂದು ಬಣ್ಣ ಬರುವವರೆಗೆ ಫ್ರೈ ಮಾಡಿ. ಈಗ ಟೊಮೆಟೊ ಹಾಕಿ ಟೊಮೆಟೊ ಬೆಂದ ಮೇಲೆ ಸೌಟ್ನಿಂದ ಪೇಸ್ಟ್ ರೀತಿ ಮಾಡಿ. ಈಗ ಕೊತ್ತಂಬರಿ ಪುಡಿ, ಖಾರದ ಪುಡಿ, ಅರಿಶಿಣ ಪುಡಿ ಹಾಕಿ, ರುಚಿಗೆ ತಕ್ಕ ಉಪ್ಪು ಸೇರಿಸಿ 2-3 ನಿಮಿಷ ಫ್ರೈ ಮಾಡಿ. ಒಂದು ಕಪ್ ನೀರು ಹಾಕಿ, ತೆಂಗಿನ ಹಾಲು ಸೇರಿಸಿ ಕುದಿಸಿ, ಈಗ ಹುಣಸೆ ರಸ 5 ನಿಮಿಷ ಕುದಿಸಿ. ಮಿಶ್ರಣ ಸ್ವಲ್ಪ ಗಸಿ-ಗಸಿಯಾಗುವಾಗ ಮೊಟ್ಟೆಯ ಬಿಳಿಯನ್ನು ಮೆಲ್ಲನೆ ಸೀಳಿ ಗ್ರೇವಿಗೆ ಹಾಕಿ ಎರಡು ನಿಮಿಷ ಕುದಿಸಿ, ಕೊತ್ತಂಬರಿ ಸೊಪ್ಪು ಉದುರಿಸಿ ಉರಿಯಿಂದ ಇಳಿಸಿದರೆ ಮೊಟ್ಟೆ ಗ್ರೇವಿ ರೆಡಿ.**

## ಗರ್ಭಾಶಯದ ಉರಿಯೂತ

### ಹೆಲ್ತ್ ಟಿಪ್ಸ್



ಗರ್ಭಾಶಯವು ಗರ್ಭಧಾರಣೆಯಲ್ಲಿ ಪ್ರಮುಖ ಪಾತ್ರವಹಿಸುವ ಅಂಗವಾಗಿದೆ. ಇದು ಅಂಡಾಣುವಿನ ಬೆಳವಣಿಗೆ ಮತ್ತು ಪೋಷಣೆಗೆ ಸಹಾಯ ಮಾಡುತ್ತದೆ. ಆದರೆ, ಅನಾರೋಗ್ಯಕರ ಜೀವನಶೈಲಿ, ತಪ್ಪು ಆಹಾರ ಪದ್ಧತಿಗಳಿಂದಾಗಿ ಗರ್ಭಾಶಯಕ್ಕೆ ಸಂಬಂಧಿಸಿದ ಸಮಸ್ಯೆಗಳು, ವಿಶೇಷವಾಗಿ ಉರಿಯೂತ, ಹೆಚ್ಚಿನ ಮಹಿಳೆಯರಲ್ಲಿ ಕಂಡುಬರುತ್ತಿದೆ.ಗರ್ಭಾಶಯದ ಉರಿಯೂತವನ್ನು ಸಕಾಲದಲ್ಲಿ ಗುಣಪಡಿಸದಿದ್ದರೆ, ತಾಯಿಯಾಗುವ ಕನಸಿನಲ್ಲಿ ಅಡಚಣೆ ಉಂಟಾಗಬಹುದು.ಈ ಕೆಳಗಿನ ಲಕ್ಷಣಗಳನ್ನು ಗಂಭೀರವಾಗಿ ಪರಿಗಣಿಸಿ, ಸಮಯಕ್ಕೆ ವೈದ್ಯರ ಸಲಹೆ ಪಡೆಯಿರಿ.

ಗರ್ಭಾಶಯದ ಉರಿಯೂತದಿಂದ ಹೊಟ್ಟೆಯ ಕೆಳಭಾಗದಲ್ಲಿ ನೋವು ಅಥವಾ ಭಾರವಾದ ಭಾವನೆ ಕಾಣಿಸಿಕೊಳ್ಳಬಹುದು. ಈ ನೋವು ಸೌಮ್ಯದಿಂದ ತೀವ್ರವಾಗಿರಬಹುದು ಮತ್ತು ಋತುಚಕ್ರದ ಸಮಯದಲ್ಲಿ ಹೆಚ್ಚಾಗಬಹುದು. ಈ ಲಕ್ಷಣವನ್ನು ನಿರ್ಲಕ್ಷಿಸದೆ ವೈದ್ಯರನ್ನು ಭೇಟಿಯಾಗಿ.

ಗರ್ಭಾಶಯದ ಊತವು ಆಗಾಗ ಮೂತ್ರ ವಿಸರ್ಜನೆಯ ಒತ್ತಡವನ್ನು ಉಂಟುಮಾಡಬಹುದು.ಕೆಲವು ಮಹಿಳೆಯರಿಗೆ ಮೂತ್ರ ವಿಸರ್ಜನೆಯ ಸಮಯದಲ್ಲಿ ಸುಡುವಿಕೆ ಅಥವಾ ನೋವು ಕಾಣಿಸಿಕೊಳ್ಳಬಹುದು.ಇಂತಹ ಲಕ್ಷಣಗಳನ್ನು ಗಂಭೀರವಾಗಿ ಪರಿಗಣಿಸಿ, ತಕ್ಷಣ ವೈದ್ಯರ ಸಲಹೆ ಪಡೆಯಿರಿ. ಗರ್ಭಾಶಯದ ಉರಿಯೂತವು ಋತುಚಕ್ರದ ಸಮಯದಲ್ಲಿ ಭಾರೀ ರಕ್ತಸ್ರಾವ, ತೀವ್ರ ನೋವು ಅಥವಾ ಇತರ ಅಡಚಣೆಗಳನ್ನು ಉಂಟುಮಾಡಬಹುದು.ಇಂತಹ ಸಮಸ್ಯೆಗಳು ಕಾಣಿಸಿದರೆ, ವೈದ್ಯರನ್ನು ಸಂಪರ್ಕಿಸುವುದು ಅವಶ್ಯಕ.

ಗರ್ಭಾಶಯದ ಉರಿಯೂತದಿಂದ ದೇಹದಲ್ಲಿ ದಣಿವು, ಆಯಾಸ, ದೌರ್ಬಲ್ಯ ಮತ್ತು ಜ್ವರ ಕಾಣಿಸಿಕೊಳ್ಳಬಹುದು. ಈ ಲಕ್ಷಣಗಳನ್ನು ನಿರ್ಲಕ್ಷಿಸದೆ, ಆದಷ್ಟು ಬೇಗ ವೈದ್ಯಕೀಯ ಸಹಾಯ ಪಡೆಯಿರಿ.

## ಮೊಡವೆಗಳಿಂದ ಮುಕ್ತಿ ಪಡೆಯಬೇಕೆ?

### ಬ್ಯೂಟಿ ಟಿಪ್ಸ್



ಹಸುವಿನ ಹಾಲು ಆರೋಗ್ಯಕ್ಕೆ ವರದಾನ ಎಂಬುದರಲ್ಲಿ ಎರಡು ಮಾತಿಲ್ಲ. ಆದರೆ, ಈ ಹಾಲಿನಲ್ಲಿ ಐಜಿಎಫ್-1 ಹಾಗೂ ಬೊವಿನ್ ಎಂಬ ಬೆಳವಣಿಗೆಯ ಹಾರ್ಮೋನ್ ಇದ್ದು ಇದು ಚರ್ಮದ ಆರೋಗ್ಯದ ಮೇಲೂ ಪರಿಣಾಮ ಬೀರುತ್ತದೆ. ಕೆಲವರಲ್ಲಿ ಇದು ಬೇಡದ ಕೂದಲು ಎಂದರೆ ಅನ್ ವಾಂಟೆಡ್ ಕೂದಲ ಬೆಳವಣಿಗೆಗೆ ಕಾರಣವಾದರೆ, ಇನ್ನೂ ಕೆಲವರಲ್ಲಿ ಮೊಡವೆಗಳ ಸಮಸ್ಯೆಯನ್ನು ಉಲ್ಬಣಿಸಬಹುದು.

ಉಪ್ಪು ಅಥವಾ ಉಪ್ಪಿನಲ್ಲಿರುವ ಅಯೋಡಿನ್ಗೂ ಮೊಡವೆಗಳಿಗೂ ಒಂದು ರೀತಿಯ ಅವಿನಾಭಾವ ಸಂಬಂಧ ಎಂತಲೇ ಹೇಳಬಹುದು. ಅಧಿಕ ಪ್ರಮಾಣದಲ್ಲಿ ಉಪ್ಪು ಸೇವನೆ, ಇಲ್ಲವೇ ಉಪ್ಪು ಹೆಚ್ಚಿರುವ ತಿನಿಸುಗಳನ್ನು ತಿನ್ನುವುದನ್ನು ತಪ್ಪಿಸಿದರೆ ಮೊಡವೆಗಳಿಂದ ಮುಕ್ತಿ ಪಡೆಯಬಹುದು.

ಎಣ್ಣೆಯುಕ್ತ ಆಹಾರಗಳ ಅತಿಯಾದ ಸೇವನೆಯು ಮೊಡವೆ ಸಮಸ್ಯೆಗೆ ಕಾರಣವಾಗಿದೆ. ಕರಿದ ಆಹಾರಗಳ ಸೇವನೆಯನ್ನು ತಪ್ಪಿಸಿದರೆ ಮೊಡವೆ ಸಮಸ್ಯೆಯಿಂದಲೂ ಸುಲಭ ಪರಿಹಾರ ಪಡೆಯಬಹುದಾಗಿದೆ.

ಅಧಿಕ ಗ್ಲಿಸೆಮಿಕ್ ಇಂಡೆಕ್ಸ್ ಇರುವ ಆಹಾರಗಳಾದ ಮೈದಾ, ಸಕ್ಕರೆ, ಕೇಚಪ್ಗಳು, ಸಾಸ್, ಸಂಸ್ಕರಿಸಿದ ಆಹಾರಗಳು, ಕೆಂಪು ಮಾಸ, ಕೋಲ್ಡ್ ಡ್ರಿಂಕ್ಸ್ ಗಳನ್ನು ಸೇವಿಸುವುದರಿಂದಲೂ ಮೊಡವೆಗಳು ಹೆಚ್ಚಾಗುತ್ತದೆ. ಹಾಗಾಗಿ, ಹೆಚ್ಚು ಗ್ಲಿಸೆಮಿಕ್ ಇಂಡೆಕ್ಸ್ ಹೊಂದಿರುವ ಈ ಆಹಾರಗಳಿಂದ ದೂರವಿದ್ದರೆ ಮೊಡವೆಗಳಿಂದ ಮುಕ್ತಿ ಪಡೆಯಬಹುದು.

# ಬೋಲ್ಡ್ ಆಗಿ ಹೇಳಿಕೆ ನೀಡಿದ ನಟಿ ನಿಧಿ ಅಗರ್ವಾಲ್



ಟಾಲಿವುಡ್ ಬ್ಯೂಟಿ ಹೀರೋಯಿನ್ಗಳೊಂದಿಗೆ ನಿಧಿ ಅಗರ್ವಾಲ್ ವಿಶೇಷ. ಗ್ಲಾಮರ್ ವಿಷಯದಲ್ಲೂ ನಾಯಕಿ ಹಿಂದೆ ಸರಿಯುವುದಿಲ್ಲ. ಇತ್ತೀಚೆಗೆ, ನಿಧಿ ಉದ್ಯಮದಲ್ಲಿ ನಾಯಕಿಯರ ಗ್ಲಾಮರ್ ಮತ್ತು ಮಾನ್ಯತೆ ಬಗ್ಗೆ ಮಾತನಾಡಿದ್ದಾರೆ.. ?ಉದ್ಯಮದಲ್ಲಿ ಉತ್ತಮ ಸಾಧನೆ ಮಾಡಲು ಪ್ರತಿಭೆ ಮಾತ್ರ ಸಾಕಾಗುವುದಿಲ್ಲ.. ನಿಮ್ಮಲ್ಲಿರುವ ಸೌಂದರ್ಯವನ್ನು ಬಿಚ್ಚಿ ತೋರಿಸಬೇಕು? ಎಂದು ಬೋಲ್ಡ್ ಕಾಮೆಂಟ್ ಮಾಡಿದ್ದಾರೆ.. ಹೌದು ಈ ಬಗ್ಗೆ ಬಹಿರಂಗವಾಗಿ ಮಾತನಾಡಿದ ನಟಿ ಗ್ಲಾಮರ್ ಪ್ರದರ್ಶನ ಮಾಡುವುದರಿಂದ ಹಿಂದೆ ಸರಿಯಬಾರದು. ಅವಕಾಶಗಳು ಬೇಕಾದರೆ, ಅವುಗಳನ್ನು ಪ್ರದರ್ಶಿಸಬೇಕು... ಆಗ ಮಾತ್ರ ನಿಮಗೆ ಹೆಚ್ಚಿನ ಅವಕಾಶಗಳು ಸಿಗುತ್ತವೆ. ಮತ್ತು ನಾಯಕಿಯಾಗಿ ಮುಂದುವರಿಯಬಹುದು. ಇಲ್ಲವಾದರೇ ಅನೇಕ ಜನರು ತಮ್ಮ ಜೀವನವನ್ನು ಮಧ್ಯದಲ್ಲಿಯೇ ಕೊನೆಗೊಳಿಸಿಕೊಳ್ಳುತ್ತಾರೆ.. ವಿಶೇಷವಾಗಿ ಉದ್ಯಮದಲ್ಲಿ ಅವಕಾಶಗಳನ್ನು ಒದಗಿಸುವ ರೀತಿ ಅವಲಂಭಿಸಿರುವುದು ಸುಂದರವಾಗಿದ್ದಾರೋ? ಅಥವಾ ಇಲ್ಲವೋ? ಅದನ್ನು ನೋಡಿದ ನಂತರ ಆಫರ್ ನೀಡುತ್ತಾರೆ. ಪ್ರತಿಭೆಯನ್ನು ನೋಡಿ ಅವಕಾಶಗಳನ್ನು ನೀಡುವವರು ಬಹಳ ಕಡಿಮೆ? ಎಂದು ನಿಧಿ ಹೇಳಿದ್ದಾರೆ.. ಇನ್ನು ನಿಧಿ ಅಗರ್ವಾಲ್ 2015 ರಲ್ಲಿ ಹಿಂದಿ ಚಿತ್ರ ಮುನ್ನಾ ಮೈಕೆಲ್ ಮೂಲಕ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದರು. ಟಾಲಿವುಡ್ಗೆ ಪ್ರವೇಶಿಸಿದಾಗಿನಿಂದ ಅವರು ಅಕ್ಕಿನೇನಿ ನಾಯಕರೊಂದಿಗೆ ಸತತ ಎರಡು ಚಿತ್ರಗಳನ್ನು ಮಾಡಿದರು. ನಾಗ ಚೈತನ್ಯ ನಾಯಕನಾಗಿ ನಟಿಸಿದ ಸವ್ಯಸಾಚಿ ಚಿತ್ರದ ಮೂಲಕ ನಟಿ ತೆಲುಗು ತೆರೆಗೆ ಪಾದಾರ್ಪಣೆ ಮಾಡಿದರು. ಅದಾದ ನಂತರ, ಅವರು ಅಖಿಲ್ ಅಕ್ಕಿನೇನಿ ಜೊತೆ ಮಿಸ್ಟರ್ ಮಜ್ನು ಚಿತ್ರದಲ್ಲೂ ನಟಿಸಿದರು. ಈ ಎರಡೂ ಚಿತ್ರಗಳು ನಿಧಿ ಅವರಿಗೆ ಕೈ ಹಿಡಿಯಲಿಲ್ಲ...

ಅಕ್ಕಿನೇನಿ ಸಹೋದರರಿಬ್ಬರೂ ನಿಧಿಗೆ ಟಾಲಿವುಡ್ನಲ್ಲಿ ಬ್ರೇಕ್ ನೀಡಲು ಸಾಧ್ಯವಾಗಲಿಲ್ಲ. ನಂತರ ಪುರಿ ಜಗನ್ನಾಥ್ ನಿರ್ದೇಶನದ, ರಾಮ್ ನಾಯಕನಾಗಿ ನಟಿಸಿದ ಮಾಸ್ ಮಸಾಲಾ ಚಿತ್ರ, ಇಸ್ಮಾರ್ಟ್ ಶಂಕರ್ ಮೂಲಕ ನಿಧಿಗೆ ಬ್ರೇಕ್ ಸಿಕ್ಕಿತು. ಈ ಚಿತ್ರ ಬ್ಲಾಕ್ಬಸ್ಟರ್ ಹಿಟ್ ಆಯಿತು ಮತ್ತು ಅವರು ಟಾಲಿವುಡ್ನಲ್ಲಿ ಇಸ್ಮಾರ್ಟ್ ಬ್ಯೂಟಿ ಎಂದು ಹೆಸರುವಾಸಿಯಾದರು. ಆದರೆ ಈ ಸಿನಿಮಾದ ನಂತರ ಅವರಿಗೆ ಸತತ ಆಫರ್ಗಳು, ಹಿಟ್ಗಳು ಬರಬಹುದೆಂದು ಭಾವಿಸಲಾಗಿತ್ತು.. ಆದರೆ ನಿಧಿಯ ವೃತ್ತಿಜೀವನ ಇನ್ನೂ ನಿಧಾನವಾಗಿ ಮುಂದುವರಿಯುತ್ತಿದೆ.

## ತೆಪ್ಪೋತ್ಸವ



**ಇಸ್ಕಾನ್ ವಾರ್ಷಿಕ ಬ್ರಹ್ಮೋತ್ಸವದ ಅಂಗವಾಗಿ ತೆಪ್ಪೋತ್ಸವವನ್ನು ಆಚರಿಸಲಾಯಿತು. ಶ್ರೀ ರಾಧ ಕೃಷ್ಣರನ್ನು ಪಲ್ಲಕ್ಕಿಯಲ್ಲಿ ಕಲ್ಯಾಣಿ (ದೇವಾಲಯದ ಕೆರೆಗೆ) ತರಲಾಯಿತು. ಭಕ್ತರು ಕೀರ್ತನೆಗಳಲ್ಲಿ ಭಾಗವಹಿಸಿ ಸಂತೋಷದಿಂದ ನರ್ತನ ಮಾಡಿದರು. ಬ್ರಹ್ಮೋತ್ಸವವು ಇಸ್ಕಾನ್ ಬೆಂಗಳೂರಿನ ಪ್ರಮುಖ ಹಬ್ಬವಾಗಿದೆ, ಇದು ಕೇವಲ ಧಾರ್ಮಿಕ ಆಚರಣೆಯಲ್ಲ, ಇಸ್ಕಾನ್ ಬೆಂಗಳೂರಿನ ಪ್ರತಿ ವರ್ಷದ ಮಹತ್ವಪೂರ್ಣ ಉತ್ಸವವಾಗಿದ್ದು, ರಾಧ ಕೃಷ್ಣರ ಸ್ಥಾಪನೆಯು 1997ರಲ್ಲಿ ಚೈತ್ರ ಮಾಸದ ಪೂರ್ವಾಷಾಢ ನಕ್ಷತ್ರದಂದು ನಡೆದ ಸ್ಮರಣೀಯ ಘಟನೆಯಾಗಿರುವುದರಿಂದ ಈ ಹಬ್ಬವು ವಿಶೇಷ ಮಹತ್ವ ಪಡೆದಿದೆ.**

## ರಾಶಿ ಭವಿಷ್ಯ



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಆರ್ಥಿಕವಾಗಿ ಹಿನ್ನಡೆ, ದೇವತಾ ಕಾರ್ಯಗಳಿಗೆ ಖರ್ಚು, ಸ್ಥಿರಾಸ್ತಿಯಿಂದ ನಷ್ಟ ಮತ್ತು ಮೋಸ, ತಂದೆಯ ಆರೋಗ್ಯದಲ್ಲಿ ವ್ಯತ್ಯಾಸ

**ವೃಷಭ:** ಹಿರಿಯರಿಂದ ಲಾಭ, ಸಹೋದರರೊಂದಿಗೆ ಮನಸ್ತಾಪ, ನೆರೆಹೊರೆಯವರಿಂದ ಲಾಭ, ಪ್ರಯಾಣದಿಂದ ಅನುಕೂಲ

**ಮಿಥುನ:** ಉದ್ಯೋಗದಲ್ಲಿ ಒತ್ತಡ, ಕೋರ್ಟ್ ಕೇಸ್‌ಗಳಿಗೆ ಅಲೆದಾಟ, ಸಂಗಾತಿಯೊಂದಿಗೆ ಮನಸ್ತಾಪ

**ಕಟಕ:** ಉದ್ಯೋಗದಲ್ಲಿ ಗೊಂದಲ, ಆರೋಗ್ಯದಲ್ಲಿ ಏರುಪೇರು, ಮಂದತ್ವ, ಆಹಾರದಲ್ಲಿ ವ್ಯತ್ಯಾಸ.

**ಸಿಂಹ:** ಅಧಿಕ ಒತ್ತಡಗಳು, ದೂರ ಪ್ರಯಾಣದಲ್ಲಿ ಹಿನ್ನಡೆ, ಅನಿರೀಕ್ಷಿತ ಉದ್ಯೋಗ ಅವಕಾಶ, ಆರ್ಥಿಕವಾಗಿ ಅನುಕೂಲ

**ಕನ್ಯಾ:** ಸಂಗಾತಿಯ ಆರೋಗ್ಯದಲ್ಲಿ ವ್ಯತ್ಯಾಸ, ಮಕ್ಕಳ ನಡವಳಿಕೆಯಿಂದ ಬೇಸರ, ಸ್ನೇಹಿತರೊಂದಿಗೆ ಮನಸ್ತಾಪ, ಭಾವನಾತ್ಮಕ ತೊಳಲಾಟ

**ತುಲಾ:** ಆರೋಗ್ಯದಲ್ಲಿ ಏರುಪೇರು, ಹಳೆ ವಸ್ತುಗಳಿಂದ ಪೆಟ್ಟು, ಸಂಗಾತಿಯೊಂದಿಗೆ ಅಂತರ, ಆರ್ಥಿಕವಾಗಿ ಸ್ವಲ್ಪ ಚೇತರಿಕೆ

**ವೃಶ್ಚಿಕ:** ಬಾಲಗ್ರಹ ದೋಷ, ಮಕ್ಕಳ ಆರೋಗ್ಯದಲ್ಲಿ ವ್ಯತ್ಯಾಸ, ವಿದ್ಯಾಭ್ಯಾಸದಲ್ಲಿ ಹಿನ್ನಡೆ,

**ಧನಸ್ಸು:** ಸ್ವಯಂಕೃತ ಅಪರಾಧ, ಸೋಮಾರಿತನ, ಮಕ್ಕಳಿಂದ ಆರ್ಥಿಕವಾಗಿ ಸಹಾಯ, ಯಂತ್ರೋಪಕರಣಗಳಿಂದ ಅನುಕೂಲ

**ಮಕರ:** ಸ್ವಂತ ಉದ್ಯಮ ವ್ಯವಹಾರಗಳಿಗೆ ಖರ್ಚು, ಆರ್ಥಿಕವಾಗಿ ಅನಾನುಕೂಲ, ಕೌಟುಂಬಿಕ ಹಿನ್ನಡೆ, ಮಕ್ಕಳ ಆರೋಗ್ಯದಲ್ಲಿ ವ್ಯತ್ಯಾಸ

**ಕುಂಭ:** ಸ್ವಯಂಕೃತಾಪರಾದದಿಂದ ಹಿನ್ನಡೆ, ತಾಯಿ ಆರೋಗ್ಯಕ್ಕಾಗಿ ಖರ್ಚು, ವಾಹನದಿಂದ **ತೊಂದರೆ, ಮಾತಿನಿಂದ ಸಮಸ್ಯೆ**

**ಮೀನ:** ಲಾಭದ ನಿರೀಕ್ಷೆ, ಅಧಿಕ ಒತ್ತಡ, ಅಸಮಾಧಾನ, ಮನೆಯ ವಾತಾವರಣ ಕಲುಷಿತ.

## ಪ್ರಯೋಗಾಲಯಗಳಲ್ಲಿನ ಪ್ರಾಣಿಗಳ ವಿಶ್ವ ದಿನ

ವಿಶ್ವ ಪ್ರಯೋಗಾಲಯ ಪ್ರಾಣಿ ದಿನವು ಪ್ರಯೋಗಾಲಯಗಳಲ್ಲಿನ ಪ್ರಾಣಿಗಳ ವಿಶ್ವ ದಿನಕ್ಕೆ ಮತ್ತೊಂದು ಹೆಸರು, ಇದನ್ನು ಪ್ರತಿ ವರ್ಷ ಏಪ್ರಿಲ್ 24 ರಂದು ಜಾಗತಿಕವಾಗಿ ಆಚರಿಸಲಾಗುತ್ತದೆ. ಪ್ರಪಂಚದಾದ್ಯಂತ ಪ್ರಯೋಗಾಲಯಗಳಲ್ಲಿ ನಡೆಯುವ ಪ್ರಾಣಿಗಳ ನೋವು ಮತ್ತು ಹತ್ಯೆಯ ಬಗ್ಗೆ ಗಮನ ಸೆಳೆಯುವುದು ಈ ದಿನದ ಉದ್ದೇಶವಾಗಿದೆ. ರಾಷ್ಟ್ರೀಯ ವಿವಿಸೆಕ್ಷನ್ ವಿರೋಧಿ ಸೊಸೈಟಿ ಯ ಕಾರಣವನ್ನು ಉತ್ತೇಜಿಸಲು ಈ ದಿನವನ್ನು 40 ವರ್ಷಗಳ ಹಿಂದೆ ಸ್ಥಾಪಿಸಲಾಯಿತು. ಕ್ರಿ.ಪೂ. ಎರಡನೇ ಶತಮಾನದಿಂದ, ಬಯೋಮೆಡಿಕಲ್ ಸಂಶೋಧನೆಯು ಪ್ರಾಣಿ ಪರೀಕ್ಷೆಯನ್ನು ಬಳಸಿಕೊಂಡಿದೆ. ಕ್ರಮವಾಗಿ 1800 ಮತ್ತು 1900 ರ ದಶಕಗಳಲ್ಲಿ ಇನ್ಸುಲಿನ್ ಮತ್ತು ಆಂಥ್ರಾಕ್ಸ್ನ ಅಭಿವೃದ್ಧಿಯು ಆಧುನಿಕ ಕಾಲದಲ್ಲಿ ಪ್ರಾಣಿ ಪರೀಕ್ಷೆಯ ಆರಂಭಿಕ ಉದಾಹರಣೆಗಳನ್ನು ಪ್ರತಿನಿಧಿಸುತ್ತದೆ. ಸೌಂದರ್ಯ, ವೈದ್ಯಕೀಯ, ವಾಯುಯಾನ ಮತ್ತು ಮಿಲಿಟರಿ ಕೈಗಾರಿಕೆಗಳಲ್ಲಿ ಪ್ರಾಣಿಗಳ ಪ್ರಯೋಗವನ್ನು ವರ್ಷಗಳಲ್ಲಿ ವಿವಿಧ ರೀತಿಯಲ್ಲಿ ಬಳಸಲಾಗಿದೆ. ಪ್ರಾಣಿಗಳ ಗಾಯ ಮತ್ತು ಮರಣದ ಹೆಚ್ಚಿನ ಆವರ್ತನ ಮತ್ತು ಹಲವಾರು ವಿಫಲ ಉಪಕ್ರಮಗಳಿಂದಾಗಿ, ಈ ವಿಧಾನದ ಅನಾನುಕೂಲಗಳು ಸಹ ಸ್ಪಷ್ಟವಾಗಿವೆ. 1979 ರಲ್ಲಿ, ಓಂಗಿಖ ವಿಶ್ವ ಪ್ರಯೋಗಾಲಯ ಪ್ರಾಣಿ ದಿನವನ್ನು ಸ್ಥಾಪಿಸಿತು, ಇದನ್ನು ಲಾರ್ಡ್ ಹಗ್ ಡೌಡಿಂಗ್ ಅವರ ಜನ್ಮದಿನವಾದ ಏಪ್ರಿಲ್ 24 ರಂದು ಆಚರಿಸಲಾಗುತ್ತದೆ. ಸಂಸ್ಥೆಯ ಹೇಳಿಕೆಗಳ ಪ್ರಕಾರ, ವಿಶ್ವಸಂಸ್ಥೆಯು ಈ ಜಾಗತಿಕ ಸ್ಮರಣಾರ್ಥ ದಿನವನ್ನು ಗುರುತಿಸುತ್ತದೆ, ಇದನ್ನು ಈಗ ಪ್ರಪಂಚದಾದ್ಯಂತ ಪ್ರಾಣಿ ವಿಶ್ಲೇಷಕ ವಿರೋಧಿಗಳು ವಾರ್ಷಿಕವಾಗಿ ಆಚರಿಸುತ್ತಾರೆ. ಪ್ರಯೋಗಾಲಯ ಪ್ರಾಣಿಗಳ ಉದ್ಘಾಟನಾ ವಿಶ್ವ ದಿನ ಪ್ರತಿಭಟನೆಯನ್ನು 1980 ರಲ್ಲಿ ಯುನೈಟೆಡ್ ಸ್ಟೇಟ್ಸ್ನಲ್ಲಿ ನಡೆಸಲಾಯಿತು ಮತ್ತು ಇಂಗ್ರಿಡ್ ನ್ಯೂಕಿರ್ಕ್ ಸ್ಥಾಪಿಸಿದ ಪೀಪಲ್ ಫಾರ್ ದಿ ಎಥಿಕಲ್ ಟ್ರೀಟ್ಮೆಂಟ್ ಆಫ್ ಅನಿಮಲ್ಸ್ ಆಯೋಜಿಸಿತ್ತು. ಇತಿಹಾಸದಲ್ಲಿ ಮೊದಲ ಪ್ರಾಣಿ ವಿಶ್ಲೇಷಕ ವಿರೋಧಿ ಗುಂಪು ರಾಷ್ಟ್ರೀಯ ಪ್ರಾಣ ವಿಶ್ಲೇಷಕ ವಿರೋಧಿ ಸೊಸೈಟಿ ಅನ್ನು 1875 ರಲ್ಲಿ ಸ್ಥಾಪಿಸಲಾಯಿತು. ಲಂಡನ್ ಮೂಲದ ಈ ಲಾಭರಹಿತ ಸಂಸ್ಥೆ ಪ್ರಾಣಿಗಳನ್ನು ರಕ್ಷಿಸುತ್ತದೆ. ಅವರು ಪ್ರಾಣಿ ಪರೀಕ್ಷೆಯನ್ನು ಹೆಚ್ಚು ಅತ್ಯಾಧುನಿಕ ಸಂಶೋಧನಾ ವಿಧಾನಗಳೊಂದಿಗೆ ಬದಲಾಯಿಸಲು ಬಯಸುತ್ತಾರೆ.ವಿಶ್ವ ಪ್ರಯೋಗಾಲಯ ಜೀವಿಗಳ ದಿನದ ಉದ್ದೇಶವು ಈ ಜೀವಿಗಳ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸುವುದು, ಆ ಹಕ್ಕುಗಳನ್ನು ರಕ್ಷಿಸಲು ನಮ್ಮ ಪಾತ್ರವನ್ನು ಮಾಡುವುದು, ಇತರರು ಅದೇ ರೀತಿ ಮಾಡಲು ಪ್ರೇರೇಪಿಸುವುದು ಮತ್ತು ಬಹುಶಃ ಪ್ರಸ್ತುತ ಪ್ರಯೋಗಾಲಯಗಳಲ್ಲಿ ಇರಿಸಲಾಗಿರುವ ನೂರಾರು ಪ್ರಾಣಿಗಳ ಜೀವಗಳನ್ನು ಉಳಿಸುವುದು.ಈ ದಿನವು ಈಗ ಸಂಶೋಧನೆಯಲ್ಲಿ ಪ್ರಾಣಿಗಳನ್ನು ಬಳಸುವುದನ್ನು ವಿರೋಧಿಸುವ ಸಂಸ್ಥೆಗಳಿಂದ ಪ್ರತಿಭಟನೆಗಳು ಮತ್ತು ರ್ಯಾಲಿಗಳಿಂದ ಗುರುತಿಸಲ್ಪಟ್ಟಿದೆ. ಸಂಶೋಧನೆಯಲ್ಲಿ ಪ್ರಾಣಿಗಳ ಬಳಕೆಯನ್ನು ಕೊನೆಗೊಳಿಸಬೇಕೆಂದು ಒತ್ತಾಯಿಸಿ ಏಪ್ರಿಲ್ 2010 ರಲ್ಲಿ ಪ್ರತಿಭಟನಾಕಾರರು ಲಂಡನ್ನ ಹೃದಯಭಾಗದಲ್ಲಿ ಮೆರವಣಿಗೆ ನಡೆಸಿದರು. 2012 ಮತ್ತು 2014 ರಲ್ಲಿ, ಬರ್ಮಿಂಗ್ಹ್ಯಾಮ್ ಮತ್ತು ನಾಟಿಂಗ್ಹ್ಯಾಮ್ ಎರಡೂ ಇದೇ ರೀತಿಯ ಮೆರವಣಿಗೆಗಳನ್ನು ಆಯೋಜಿಸಿದವು.

ಸಂಜೆ ಮುಗಿಲು
ಬುಧವಾರ
23.4.2025



## ರಕ್ಷಣಾ ಸಚಿವ ರಾಜನಾಥ್ ಸಿಂಗ್ ಎಚ್ಚರಿಕೆ

# ಪಹಲ್ಗಾಮ್ ದಾಳಿಕೋರರ ಮಟ್ಟಹಾಕುತ್ತೇವೆ

**ನವದೆಹಲಿ:** ಪಹಲ್ಗಾಮ್ ಭಯೋತ್ಪಾದಕ ದಾಳಿಯ ಅಪರಾಧಿಗಳು ಮತ್ತು ಸಂಚುಕೋರರಿಗೆ ಭಾರತವು ಗಟ್ಟಿಯಾದ ಮತ್ತು ಸ್ಪಷ್ಟವಾದ ಪ್ರತ್ಯುತ್ತರವನ್ನು ನೀಡಿಯೇ ನೀಡುತ್ತೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬುಧವಾರ ಎಚ್ಚರಿಕೆ ರವಾನಿಸಿದ್ದಾರೆ.

ಮಂಗಳವಾರ ಪಹಲ್ಗಾಮ್ನ ಬೈಸರನ್ ಹುಲ್ಲುಗಾವಲಿನಲ್ಲಿ ಪಾಕಿಸ್ತಾನ ಮೂಲದ ಶಂಕಿತ ಭಯೋತ್ಪಾದಕರು 26 ಪುರುಷ ಪ್ರವಾಸಿಗರನ್ನು ಗುಂಡಿಕ್ಕಿ ಕೊಂದು ಹಾಕಿದ್ದಾರೆ. ನಿನ್ನೆ ಪಹಲ್ಗಾಮ್ನಲ್ಲಿ ನಿರ್ದಿಷ್ಟ ಜನರನ್ನು ಗುರಿಯಾಗಿಸಿಕೊಂಡು ಭಯೋತ್ಪಾದಕರು ಹೇಡಿತನದ ಕೃತ್ಯ ಎಸಗಿದ್ದಾರೆ. ಇದರಲ್ಲಿ ನಾವು ಅನೇಕ ಮುಗ್ಧ ಜೀವಗಳನ್ನು ಕಳೆದುಕೊಂಡಿದ್ದೇವೆ. ಸರ್ಕಾರವು ಅಗತ್ಯವಿರುವ ಎಲ್ಲ ಕ್ರಮಗಳನ್ನು ತೆಗೆದುಕೊಳ್ಳುತ್ತದೆ ಎಂದು ನಾನು ದೇಶವಾಸಿಗಳಿಗೆ ಭರವಸೆ ನೀಡಲು ಬಯಸುತ್ತೇನೆ. ನಾವು ಈ ಕೃತ್ಯದ ಅಪರಾಧಿಗಳನ್ನು ಮಾತ್ರವಲ್ಲದೇ ತೆರೆಮರೆಯಲ್ಲಿರುವ ಸಂಚುಕೋರರಿಗೂ ಬುದ್ಧಿ ಕಲಿಸುತ್ತೇವೆ. ಆರೋಪಿಗಳು ಶೀಘ್ರದಲ್ಲೇ ತಾವು ಮಾಡಿದ ಕೆಲಸಕ್ಕೆ ಪ್ರತಿಫಲವನ್ನು ಪಡೆದುಕೊಳ್ಳಲಿದ್ದಾರೆ. ನಾನು ದೇಶಕ್ಕೆ ಭರವಸೆ ನೀಡಲು ಬಯಸುತ್ತೇನೆ ಎಂದು ರಾಜನಾಥ್ ಸಿಂಗ್ ಹೇಳಿದ್ದಾರೆ. ರಕ್ಷಣಾ ಸಚಿವರು ನವದೆಹಲಿಯಲ್ಲಿ ನಡೆದ 'ಅರ್ಜನ್ ಸಿಂಗ್ ಸ್ಮಾರಕ ಉಪನ್ಯಾಸ'ದಲ್ಲಿ ವಿರೋಧಿಗಳಿಗೆ ಈ ಎಚ್ಚರಿಕೆ ರವಾನಿಸಿದ್ದಾರೆ.

ಜಮ್ಮು ಮತ್ತು ಕಾಶ್ಮೀರದಲ್ಲಿನ ಭದ್ರತಾ ಪರಿಸ್ಥಿತಿಯನ್ನು ಪರಿಶೀಲಿಸಿದ ನಂತರ ರಕ್ಷಣಾ ಸಚಿವರು ಈ ನೇರ ಎಚ್ಚರಿಕೆ ನೀಡಿದ್ದಾರೆ. ಸುಮಾರು ಎರಡೂವರೆ ಗಂಟೆಗಳ ಕಾಲ ನಡೆದ ಸಭೆಯಲ್ಲಿ ರಾಷ್ಟ್ರೀಯ ಭದ್ರತಾ ಸಲಹೆಗಾರ (ಎನ್ಎಸ್ಎ) ಅಜಿತ್ ದೋವಲ್, ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್, ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ ತ್ರಿಪಾಠಿ ಮತ್ತು ವಾಯುಪಡೆಯ ಮುಖ್ಯಸ್ಥ ಮಾರ್ಷಲ್ ಎಕೆ ಸಿಂಗ್ ಭಾಗವಹಿಸಿದ್ದರು.



## ಪಾಕ್ ಜತೆಗಿನ ಸಿಂಧೂ ನದಿ ನೀರು ಒಪ್ಪಂದ ರದ್ದು

**ನವದೆಹಲಿ: ಪಹಲ್ಗಾಮ್ನಲ್ಲಿ ನಡೆದ ಭಯೋತ್ಪಾದಕ ದಾಳಿಯ ಬಳಿಕ ಭಾರತ, ಪಾಕಿಸ್ತಾನದ ವಿರುದ್ಧ ಮತ್ತಷ್ಟು ಕಠಿಣವಾಗಿ ವರ್ತಿಸಲು ತೀರ್ಮಾನಿಸಿದೆ. ಈ ಸಂಬಂಧ ಪ್ರಧಾನಿ ನೇತೃತ್ವದಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ಭಾರತ ಮತ್ತು ಪಾಕಿಸ್ತಾನ ನಡುವಿನ ಅಟ್ಟಾರಿ ಗಡಿ ಚೆಕ್ ಪೋಸ್ಟ್ ಮುಚ್ಚುವ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ. ಅಷ್ಟೇ ಅಲ್ಲ ಪಾಕ್ ಜತೆಗಿನ ಸಿಂಧೂ ನದಿ ನೀರು ಒಪ್ಪಂದ ರದ್ದು ಮಾಡುವುದಾಗಿ ಘೋಷಿಸಿದೆ. ಬುಧವಾರ ಸಂಜೆ ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ಭದ್ರತೆ ಕುರಿತ ಸಂಪುಟ ಸಮಿತಿಯ (ಸಿಸಿಎಸ್) ಮಹತ್ವದ ಸಭೆ ನಡೆಯಿತು. ಈ ಸಭೆಯಲ್ಲಿ ಪಾಕ್ ವಿರುದ್ಧ ಮತ್ತಷ್ಟು ಕಠಿಣವಾಗಿ ನಡೆದುಕೊಳ್ಳುವ ತೀರ್ಮಾನ ಕೈಗೊಳ್ಳಲಾಗಿದೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ತ್ರಿ ಮಾಹಿತಿ ನೀಡಿದ್ದಾರೆ. ಪತ್ರಿಕಾಗೋಷ್ಠಿ ನಡೆಸಿದ ವಿದೇಶಾಂಗ ಕಾರ್ಯದರ್ಶಿ, ಪ್ರಧಾನಿ ನೇತೃತ್ವದ ಸಭೆ ತೆಗೆದುಕೊಂಡಿರುವ 5 ದೊಡ್ಡ ನಿರ್ಧಾರಗಳ ಬಗ್ಗೆ ಮಾಹಿತಿ ನೀಡಿದರು. ಭಾರತ ಮತ್ತು ಪಾಕಿಸ್ತಾನ ನಡುವಿನ ಅಟ್ಟಾರಿ ಗಡಿ ಚೆಕ್ ಪೋಸ್ಟ್ ಅನ್ನು ಮುಚ್ಚುವ ತೀರ್ಮಾನ ಕೈಗೊಳ್ಳಲಾಗಿದೆ. ಇದು ಎರಡೂ ದೇಶಗಳ ನಡುವಿನ ಸೀಮಿತ ಸಂಚಾರವನ್ನು ಸಹ ನಿಲ್ಲಿಸುವ ಒಂದು ದೊಡ್ಡ ಹೆಜ್ಜೆಯಾಗಿದೆ.ಭಾರತದ ಎರಡನೇ ದೊಡ್ಡ ನಿರ್ಧಾರ ಎಂದರೆ ಅದು ಪಾಕಿಸ್ತಾನದಲ್ಲಿರುವ ಭಾರತೀಯ ರಾಯಭಾರ ಕಚೇರಿಯನ್ನು ಮುಚ್ಚುವ ತೀರ್ಮಾನವಾಗಿದೆ.ಭಾರತವು ಸಿಂಧೂ ಜಲ ಒಪ್ಪಂದವನ್ನು ರದ್ದು ಮಾಡಿದೆ. ಭಾರತದಲ್ಲಿರುವ ಎಲ್ಲಾ ಪಾಕಿಸ್ತಾನಿ ರಾಜತಾಂತ್ರಿಕರಿಗೆ 48 ಗಂಟೆಗಳ ಒಳಗೆ ದೇಶ ತೊರೆಯುವಂತೆ ಆದೇಶಿಸಲಾಗಿದೆ. ಪಾಕಿಸ್ತಾನಿ ನಾಗರಿಕರಿಗೆ ಭಾರತೀಯ ವೀಸಾ ಸಿಗುವುದಿಲ್ಲ. ಸಾರ್ಕ್ ವೀಸಾ ವಿನಾಯಿತಿ ಯೋಜನೆಯಡಿ ಪಾಕಿಸ್ತಾನಿ ನಾಗರಿಕರಿಗೆ ಭಾರತಕ್ಕೆ ಪ್ರಯಾಣಿಸಲು ಅವಕಾಶವಿರುವುದಿಲ್ಲ. ಈಗಾಗಲೇ ನೀಡಲಾದ ವೀಸಾಗಳನ್ನು ರದ್ದುಗೊಳಿಸಲಾಗಿದ್ದು, ಅವರು 48 ಗಂಟೆಗಳ ಒಳಗೆ ಭಾರತವನ್ನು ತೊರೆಯಬೇಕಾಗುತ್ತದೆ. ನವದೆಹಲಿಯಲ್ಲಿರುವ ಪಾಕಿಸ್ತಾನ ಹೈಕಮಿಷನ್ನಲ್ಲಿರುವ ರಕ್ಷಣಾ, ನೌಕಾ ಮತ್ತು ವಾಯುಪಡೆಯ ಸಲಹೆಗಾರರನ್ನು ಪರ್ಸನಾ ನಾನ್ ಗ್ರಾಟಾ ಎಂದು ಘೋಷಿಸಲಾಗಿದೆ. ಅವರು ಒಂದು ವಾರದೊಳಗೆ ದೇಶವನ್ನು ತೊರೆಯಬೇಕಾಗುತ್ತದೆ.**

## ಉಗ್ರ ದಾಳಿಗೆ ಟ್ರಂಪ್, ಪುಟಿನ್, ಮೆಲೋನಿ ಖಂಡನೆ

**ವಾಷಿಂಗ್ಟನ್/ಮಾಸ್ಕೋ:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತು ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ ಸೇರಿದಂತೆ ಹಲವು ವಿಶ್ವನಾಯಕರು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ ನಲ್ಲಿ ನಡೆದ ಉಗ್ರ ದಾಳಿಯನ್ನು ಖಂಡಿಸಿದ್ದಾರೆ. ಭಯೋತ್ಪಾದನೆಯ ವಿರುದ್ಧ ಭಾರತಕ್ಕೆ ಅಗತ್ಯ ಬೆಂಬಲ ನೀಡುವುದಾಗಿ ಹೇಳಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರೊಂದಿಗಿನ ಫೋನ್ ಕರೆಯಲ್ಲಿ ಮಾತನಾಡಿರುವ ಟ್ರಂಪ್, ಭಯೋತ್ಪಾದಕ ದಾಳಿಯನ್ನು ತೀವ್ರವಾಗಿ ಖಂಡಿಸಿದ್ದಾರೆ. ಇದೊಂದು ಘೋರ ದಾಳಿಯಾಗಿದ್ದು, ಅಪರಾಧಿಗಳನ್ನು ಹೆಡೆಮುರಿ ಕಟ್ಟಲು ಭಾರತಕ್ಕೆ ಸಂಪೂರ್ಣ ಬೆಂಬಲ ನೀಡುವುದಾಗಿ ತಿಳಿಸಿದ್ದಾರೆ.

ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಂಚಿಕೊಂಡಿರುವ ಟ್ರಂಪ್, ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಭಾರತ ಮತ್ತು ಅಮೆರಿಕ ಒಟ್ಟಾಗಿ ನಿಂತಿವೆ ಎಂದಿದ್ದಾರೆ. ಟ್ರೂತ್ ಸೋಷಿಯಲ್ ಮೀಡಿಯಾದಲ್ಲಿ, ಕಾಶ್ಮೀರದಿಂದ ತೀವ್ರ ಆತಂಕಕಾರಿ ಸುದ್ದಿ ಹೊರಬಂದಿದೆ. 26 ಮಂದಿಯನ್ನು ಉಗ್ರರು ಹತ್ಯೆ ಮಾಡಿದ್ದಾರೆ. ಮೃತರ ಆತ್ಮಕ್ಕೆ ಶಾಂತಿ ಕೋರುತ್ತೇವೆ. ಗಾಯಗೊಂಡವರ ಚೇತರಿಕೆಗಾಗಿ ಪ್ರಾರ್ಥಿಸುತ್ತೇವೆ ಎಂದು ಬರೆದುಕೊಂಡಿದ್ದಾರೆ.

ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಪಾಲುದಾರ ಭಾರತದೊಂದಿಗೆ ರಷ್ಯಾ ನಿಲ್ಲಲಿದೆ ಎಂದು ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಘೋಷಿಸಿದ್ದಾರೆ. ಮೃತರ ಕುಟುಂಬಗಳಿಗೆ ಸಂತಾಪ. ಗಾಯಾಳುಗಳು ಶೀಘ್ರ ಚೇತರಿಸಿಕೊಳ್ಳಲಿ ಎಂದು ಹಾರೈಸುವುದಾಗಿ ಹೇಳಿದ್ದಾರೆ.

ಇನ್ನು ಭಾರತದ ಪ್ರವಾಸದಲ್ಲಿರುವ ಅಮೆರಿಕ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್ ದಾಳಿಯನ್ನು ಖಂಡಿಸಿದ್ದಾರೆ. ಪಹಲ್ಗಾಮ್ನಲ್ಲಿ ನಡೆದ ವಿನಾಶಕಾರಿ ಭಯೋತ್ಪಾದಕ ದಾಳಿಯ ಬಲಿಯಾದವರಿಗೆ ಸಂತಾಪ ಸೂಚಿಸುತ್ತೇವೆ. ಕೆಲವು ದಿನಗಳಿಂದ ನಾನು ಭಾರತದಲ್ಲೇ ಇದ್ದೇನೆ. ಇಲ್ಲಿನ ಜನರು ಮತ್ತು ನಾಡಿನ ಸೌಂದರ್ಯವನ್ನು ಅನುಭವಿಸುತ್ತಿದ್ದೇನೆ. ಅದರ ನಡುವೆ ಈ ಭಯಾನಕ ದಾಳಿ ನಡೆದಿರುವುದು ಆಘಾತ ಉಂಟು ಮಾಡಿದೆ ಎಂದಿದ್ದಾರೆ.



## ಕಾಶ್ಮೀರದ 1,500 ಜನರು ವಶಕ್ಕೆ

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಿನ್ನೆ ನಡೆದ ಭಯೋತ್ಪಾದಕ ದಾಳಿಗೆ ಸಂಬಂಧಿಸಿದಂತೆ ವಿಚಾರಣೆಗಾಗಿ ಜಮ್ಮು ಮತ್ತು ಕಾಶ್ಮೀರದಾದ್ಯಂತ ಸುಮಾರು 1,500 ಜನರನ್ನು ಮುನ್ನೆಚ್ಚರಿಕಾ ಕ್ರಮವಾಗಿ ವಶಕ್ಕೆ ತೆಗೆದುಕೊಳ್ಳಲಾಗಿದೆ ಎಂದು ಮೂಲಗಳು ತಿಳಿಸಿವೆ. ಪಹಲ್ಗಾಮ್ ದಾಳಿಯ ನಂತರ ಕಾಶ್ಮೀರದಲ್ಲಿ ದೊಡ್ಡ ಕಾರ್ಯಾಚರಣೆ ನಡೆಸಲಾಗಿದ್ದು, ರಕ್ಷಣಾ ಸಂಸ್ಥೆಗಳು 1500 ಜನರನ್ನು ವಿಚಾರಣೆಗಾಗಿ ವಶಕ್ಕೆ ಪಡೆದಿವೆ. ಅವರ ವಿಚಾರಣೆ ನಡೆಯುತ್ತಿದೆ. ಉಗ್ರರಿಗೆ ಆಶ್ರಯ ನೀಡಿದವರನ್ನು ಹುಡುಕುವಲ್ಲಿ ತನಿಖಾ ಸಂಸ್ಥೆಗಳು ನಿರತವಾಗಿವೆ. ಇಡೀ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆಯನ್ನು ತೀವ್ರಗೊಳಿಸಲಾಗಿದೆ.

ಪಹಲ್ಗಾಮ್ ದಾಳಿಯ ನಂತರ, ಭದ್ರತಾ ಸಂಸ್ಥೆಗಳು ಜಮ್ಮು ಮತ್ತು ಕಾಶ್ಮೀರದಲ್ಲಿ ಪ್ರಮುಖ ಕಾರ್ಯಾಚರಣೆಯನ್ನು ಪ್ರಾರಂಭಿಸಿವೆ. ಮೂಲಗಳ ಪ್ರಕಾರ, ಕಾಶ್ಮೀರ ಕಣಿವೆಯಾದ್ಯಂತ 1500ಕ್ಕೂ ಹೆಚ್ಚು ಜನರನ್ನು ವಿಚಾರಣೆಗಾಗಿ ವಶಕ್ಕೆ ಪಡೆಯಲಾಗಿದೆ. ಈ ಜನರನ್ನು ವಿವಿಧ ಜಿಲ್ಲೆಗಳು ಮತ್ತು ಸೂಕ್ಷ್ಮ ಪ್ರದೇಶಗಳಿಂದ ಬಂಧಿಸಲಾಗಿದೆ. ಇವರಲ್ಲಿ ಭೂಗತ ಕೆಲಸಗಾರರು, ಮಾಜಿ ಉಗ್ರಗಾಮಿಗಳು ಮತ್ತು ಈಗಾಗಲೇ FIR ದಾಖಲಾಗಿರುವವರು ಅಥವಾ ಗುಪ್ತಚರ ವೀಕ್ಷಣಾ ಪಟ್ಟಿಯಲ್ಲಿರುವವರು ಸೇರಿದ್ದಾರೆ. ದಾಳಿಕೋರರಿಗೆ ಆಶ್ರಯ ನೀಡಿದವರನ್ನು ಹುಡುಕುವಲ್ಲಿ ತನಿಖಾ ಸಂಸ್ಥೆಗಳು ನಿರತವಾಗಿವೆ. ಇಡೀ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆಯನ್ನು ಚುರುಕುಗೊಳಿಸಲಾಗಿದೆ.

ಪಹಲ್ಗಾಮ್ ಗೆ ಬಂದು ಪ್ರವಾಸಿಗರನ್ನು ಹತ್ಯೆ ಮಾಡಲು ಉಗ್ರರಿಗೆ ಯಾರು ಆಶ್ರಯ ನೀಡಿದರು, ಸಹಾಯ ಮಾಡಿದರು ಅಥವಾ ಶಸ್ತ್ರಾಸ್ತ್ರಗಳನ್ನು ಒದಗಿಸಿದರು ಎಂಬುದನ್ನು ಕಂಡುಹಿಡಿಯಲು ಈ ಎಲ್ಲ ಜನರನ್ನು ವಿಚಾರಣೆಗೆ ಒಳಪಡಿಸಲಾಗುತ್ತಿದೆ. ಗುಪ್ತಚರ ಸಂಸ್ಥೆಗಳ ಮಾಹಿತಿಗಳನ್ನು ಒಟ್ಟುಗೂಡಿಸಿ, ಪ್ರತಿಯೊಬ್ಬ ಶಂಕಿತನ ಸಂಪರ್ಕಗಳನ್ನು ತನಿಖೆ ಮಾಡಲಾಗುತ್ತಿದೆ.

ಈ ದಾಳಿಯ ನಂತರ, ಜಮ್ಮು ಮತ್ತು ಕಾಶ್ಮೀರದಲ್ಲಿ ಭದ್ರತೆಗೆ ಸಂಬಂಧಿಸಿದಂತೆ ಹೊಸ ಮಾರ್ಗಸೂಚಿಗಳನ್ನು ಸಿದ್ಧಪಡಿಸಲಾಗುತ್ತಿದೆ. ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚುವರಿ ಭದ್ರತಾ ಪಡೆಗಳನ್ನು ನಿಯೋಜಿಸಲಾಗುತ್ತಿದ್ದು, ಧಾರ್ಮಿಕ, ರಾಜಕೀಯ ಮತ್ತು ಸಾರ್ವಜನಿಕ ಕಾರ್ಯಕ್ರಮಗಳ ಮೇಲೆ ವಿಶೇಷ ಕಣ್ಗಾವಲು ಇರಿಸಲಾಗಿದೆ. ಭಯೋತ್ಪಾದನೆಯ ವಿರುದ್ಧದ ಈ ಹೋರಾಟವು ಈಗ ನಿರ್ಣಾಯಕ ಹಂತವನ್ನು ತಲುಪಿದೆ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ.

ಇನ್ನು, ಪಹಲ್ಗಾಮ್ ದಾಳಿಯ ಹೊಣೆಯನ್ನು ಟಿಆರ್ ಎಫ್ ಸಂಘಟನೆ ಹೊತ್ತಿಕೊಂಡಿದೆ. ಟಿಆರ್ಎಫ್ ಭಯೋತ್ಪಾದಕರು ಪಾಕಿಸ್ತಾನದಿಂದ ತರಬೇತಿ ಮತ್ತು ಹಣಕಾಸು ಪಡೆಯುತ್ತಿದ್ದಾರೆ ಎಂದು ನಿರಂತರವಾಗಿ ಆರೋಪಿಸಲಾಗಿದೆ. ಕಾಶ್ಮೀರ ಕಣಿವೆಯಲ್ಲಿ ಟಿಆರ್ಎಫ್ ರಕ್ತಪಾತಕ್ಕೆ ಕಾರಣವಾಗುತ್ತಿರುವುದು ಇದೇ ಮೊದಲಲ್ಲ. ಈ ಹಿಂದೆ ಕೂಡ ಈ ಸಂಘಟನೆಯು ಅನೇಕ ದೊಡ್ಡ ಭಯೋತ್ಪಾದಕ ದಾಳಿಗಳನ್ನು ನಡೆಸಿತ್ತು. ಟಿಆರ್ ಎಫ್ ಅನ್ನು ಲಷ್ಕರ್-ಎ-ತೊಯ್ಬಾದ ಭಾಗವೆಂದು ಪರಿಗಣಿಸಲಾಗಿದೆ.

## ಭಯೋತ್ಪಾದಕ ದಾಳಿ: ಭದ್ರತಾ ವ್ಯವಸ್ಥೆಯಲ್ಲಿ ಗಂಭೀರ ಲೋಪ

ಪಹಲ್ಗಾಮ್: ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ನ ಬೈಸರನ್ ಎಂಬ ಪ್ರವಾಸಿ ತಾಣದ ಹೊರವಲಯದ ಹುಲ್ಲುಗಾವಲಿನಲ್ಲಿ ಮಂಗಳವಾರ (ಏಪ್ರಿಲ್ 22, 2025) ನಡೆದ ಭಯೋತ್ಪಾದಕ ದಾಳಿಯು ಭದ್ರತಾ ವ್ಯವಸ್ಥೆಯಲ್ಲಿ ಗಂಭೀರ ಲೋಪವನ್ನು ಸೂಚಿಸುತ್ತದೆ ಎಂದು ಉನ್ನತ ಗುಪ್ತಚರ ಮೂಲಗಳು ತಿಳಿಸಿವೆ ಎಂದು ಸಿಎನ್ಎನ್ ನ್ಯೂಸ್ 18 ವರದಿ ಮಾಡಿದೆ. ಗುಪ್ತಚರ ಮೂಲಗಳ ಪ್ರಕಾರ, ದಾಳಿಕೋರರು ಮಿಲಿಟರಿ ಶೈಲಿಯ ಉಡುಗೆ ಧರಿಸಿದ್ದರು, ವಿದೇಶಿ ಭಯೋತ್ಪಾದಕರ ಚಲನವಲನ ಕುರಿತು ಯಾವುದೇ ಮುಂಚಿನ ಗುಪ್ತಚರ ಎಚ್ಚರಿಕೆ ಇರದಿರುವುದು ಸ್ಥಳೀಯ ಗುಪ್ತಚರ ಜಾಲದೊಂದಿಗಿನ ಸಂಪರ್ಕದ ಕೊರತೆ ಅಥವಾ ಭದ್ರತಾ ವ್ಯವಸ್ಥೆಯ ಮೇಲಿನ ವಿಶ್ವಾಸದ ಕೊರತೆಯನ್ನು ಸೂಚಿಸುತ್ತದೆ ಎಂದು ಮೂಲಗಳು ತಿಳಿಸಿವೆ.

ಕೆಲವೇ ನಿಮಿಷಗಳಲ್ಲಿ ಭಾರೀ ಸಾವುನೋವು ಸಂಭವಿಸಿರುವುದು ಇಲ್ಲಿನ ಭದ್ರತಾ ಪಡೆಯ ವಿಳಂಬ ಮತ್ತು ವೈಫಲ್ಯವನ್ನು ತೋರಿಸುತ್ತದೆ.ಜೊತೆಗೆ ದಾಳಿಕೋರರ ತ್ವರಿತ ಪಲಾಯನವು ದಾಳಿಯ ನಂತರ ಪ್ರದೇಶವನ್ನು ಸುತ್ತುವರಿಯುವ ಮತ್ತು ತಡೆಯುವ ಕಾರ್ಯಾಚರಣೆಯ ವೈಫಲ್ಯವನ್ನು ಸೂಚಿಸುತ್ತದೆ ಎಂದು ಮೂಲಗಳು ಹೇಳಿವೆ.ಬೈಸರನ್ನಂತಹ ಜನಪ್ರಿಯ ಪ್ರವಾಸಿ ತಾಣದ ಸಮೀಪದಲ್ಲಿ ಸೂಕ್ತ ಭದ್ರತಾ ವ್ಯವಸ್ಥೆ ಇಲ್ಲದಿರುವುದು ದಾಳಿಗೆ ಕಾರಣವಾಗಿದೆ ಎಂದು ಗುಪ್ತಚರ ಮೂಲಗಳು ಆರೋಪಿಸಿವೆ.ಭದ್ರತಾ ಪಡೆಗಳು ಈಗ ದಾಳಿಕೋರರನ್ನು ಟ್ರ್ಯಾಕ್ ಮಾಡುತ್ತಿವೆ ಎಂದು ವರದಿಯಾಗಿದೆ. ಈ ಘಟನೆಯು ಭದ್ರತಾ ಕಾರ್ಯಾಚರಣೆಗಳಲ್ಲಿ ಸುಧಾರಣೆ ಮತ್ತು ಸ್ಥಳೀಯ ಗುಪ್ತಚರ ಜಾಲದೊಂದಿಗಿನ ಸಮನ್ವಯವನ್ನು ಬಲಪಡಿಸುವ ತುರ್ತು ಅಗತ್ಯವನ್ನು ಒತ್ತಿಹೇಳಿದೆ.



## ಉರಿ ಗಡಿಯಲ್ಲಿ ನುಸುಳಲು ಯತ್ನಿಸಿದ ಉಗ್ರರು, ಗುಂಡಿನ ಚಕಮಕಿ

ಶ್ರೀನಗರ: ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ನಲ್ಲಿ ನಡೆದ ಅತ್ಯಂತ ಭೀಕರ ಭಯೋತ್ಪಾದಕ ದಾಳಿಯ ನಂತರ, ಉರಿ ಜಿಲ್ಲೆಯಲ್ಲಿ ಭದ್ರತಾ ಪಡೆಗಳು ಮತ್ತು ಭಯೋತ್ಪಾದಕರ ನಡುವೆ ಗುಂಡಿನ ಚಕಮಕಿ ನಡೆದಿದೆ. ಭಾರತೀಯ ಸೇನೆ ನೀಡಿದ ಮಾಹಿತಿಯ ಪ್ರಕಾರ, ಬುಧವಾರ ಸುಮಾರು ಎರಡರಿಂದ ಮೂರು ಭಯೋತ್ಪಾದಕರು ಉರಿ ಗಡಿ ಮೂಲಕ ಒಳನುಸುಳಲು ಪ್ರಯತ್ನಿಸಿದರು. ಕೂಡಲೇ ಪಡೆಗಳು ಈ ಚಲನವಲನವನ್ನು ತಡೆದವು. ಈ ಸಂದರ್ಭದಲ್ಲಿ ಗುಂಡಿನ ಚಕಮಕಿ ನಡೆಯಿತು.

''ಏಪ್ರಿಲ್ 23, 2025ರಂದು, ಬಾರಾಮುಲ್ಲಾದ ಉರಿ ನಾಲಾದ ಸರ್ಜೀವನ್ ಸಾಮಾನ್ಯ ಪ್ರದೇಶದ ಮೂಲಕ ಸರಿಸುಮಾರು 2-3 ಅಪರಿಚಿತ ಭಯೋತ್ಪಾದಕರು ಒಳನುಸುಳಲು ಪ್ರಯತ್ನಿಸಿದರು. ನಿಯಂತ್ರಣ ರೇಖೆಯಲ್ಲಿದ್ದ ಯೋಧರ ಪಡೆ ಅವರನ್ನು ತಡೆಯಿತು. ಇದರ ಪರಿಣಾಮವಾಗಿ ಗುಂಡಿನ ಚಕಮಕಿ ನಡೆಯಿತು. ಕಾರ್ಯಾಚರಣೆ ಪ್ರಗತಿಯಲ್ಲಿದೆ ಎಂದು ಭಾರತೀಯ ಸೇನೆಯು ಸೋಶಿಯಲ್ ಮೀಡಿಯಾ ಎಕ್ಸ್ ಅಕೌಂಟ್ನಲ್ಲಿ ತಿಳಿಸಿದೆ. ಉಗ್ರರ ನಿರ್ಮೂಲನೆ ಆಪರೇಶನ್ ನಡೆಯುತ್ತಿದೆ ಮತ್ತು ಈ ಪ್ರದೇಶದಲ್ಲಿ ಪಡೆಗಳು ಹೆಚ್ಚಿನ ಎಚ್ಚರಿಕೆಯಲ್ಲಿವೆ.

ಇದಕ್ಕೂ ಮುನ್ನ, ಮಂಗಳವಾರ ಲಷ್ಕರ್-ಎ-ತೈಬಾ (ಎಲ್ಇಟಿ) ಗೆ ಸಂಬಂಧಿಸಿದ ಭಯೋತ್ಪಾದಕರ ಗುಂಪು ದಕ್ಷಿಣ ಕಾಶ್ಮೀರದ ಪಹಲ್ಗಾಮ್ನ ಬೈಸರನ್ ಕಣಿವೆಯಲ್ಲಿರುವ ಜನಪ್ರಿಯ ಪ್ರವಾಸಿ ತಾಣದಲ್ಲಿ ಮಂಗಳವಾರ ಭೀಕರ ದಾಳಿ ನಡೆಸಿತ್ತು. ಕನಿಷ್ಠ 28 ಪ್ರವಾಸಿಗರು ಸಾವನ್ನಪ್ಪಿ ಹಲವಾರು ಜನರು ಗಾಯಗೊಂಡಿದ್ದರು. ಸಾವನ್ನಪ್ಪಿದ 28 ಪ್ರವಾಸಿಗರಲ್ಲಿ ಇಬ್ಬರು ವಿದೇಶಿ ಪ್ರಜೆಗಳು ಸೇರಿದ್ದರು. ಉಗ್ರರು ಪ್ರವಾಸಿಗರ ಹೆಸರು ಕೇಳಿ, ಹಿಂದೂ ಎಂದು ಖಚಿತಪಡಿಸಿಕೊಂಡು ಅವರಿಗೆ ಗುಂಡಿಕ್ಕಿದ್ದರು. ಪ್ರಧಾನ ಮಂತ್ರಿ ಮೋದಿಯವರನ್ನು ಅವಾಚ್ಯ ಪದಗಳಿಂದ ನಿಂದಿಸಿದ್ದರು. ಇದಾಗಿ ಕೆಲವೇ ಗಂಟೆಗಳಲ್ಲಿ ಉರಿಯಲ್ಲಿ ಉಗ್ರರು ಒಳನುಸುಳಲು ಯತ್ನಿಸಿದ್ದಾರೆ. ಹೀಗಾಗಿ, ಕಾಶ್ಮೀರದಲ್ಲಿ ವ್ಯಾಪಕ ನರಮೇಧಕ್ಕೆ ಇಸ್ಲಾಮಿಕ್ ಉಗ್ರರು ಸಿದ್ಧತೆ ನಡೆಸಿದ್ದಾರೆಯೇ ಎಂಬ ಶಂಕೆ ಮೂಡಿದೆ.

## ದೇಶದ 5.5 ಲಕ್ಷ ಮಸೀದಿಗಳಿಂದ ಭಯೋತ್ಪಾದಕರಿಗೆ ಕಟು ಸಂದೇಶ

**ಕಾಶ್ಮೀರದ ಪಹಲ್ಗಾಮ್ ನಲ್ಲಿ ಮಂಗಳವಾರ ಪ್ರವಾಸಿಗರ ಮೇಲೆ ನಡೆದ ಭಯೋತ್ಪಾದಕರ ದಾಳಿಯನ್ನು ಮುಸ್ಲಿಂ ಸಂಘಟನೆಗಳು ಮಂಗಳವಾರ ಖಂಡಿಸಿವೆ. ಪ್ರವಾಸಿಗರನ್ನೇ ಗುರಿಯಾಗಿಸಿ ಪಹಲ್ಗಾಮ್ ನಲ್ಲಿ ನಡೆದ ಗುಂಡಿನ ದಾಳಿಯಲ್ಲಿ ರಾಜ್ಯದ ಮೂವರು ಸೇರಿದಂತೆ ಕನಿಷ್ಠ 28 ಮಂದಿ ಮೃತಪಟ್ಟಿದ್ದಾರೆ. ಹಲವರು ಗಾಯಗೊಂಡಿದ್ದಾರೆ. 'ಭಯೋತ್ಪಾದನೆ ಎಂಬುದು ಕ್ಯಾನ್ಸರ್ ಇದ್ದಂತೆ. ಇದು ಇಸ್ಲಾಂ ಬೋಧಿಸುವ ಶಾಂತಿ ನೀತಿಯ ವಿರುದ್ಧ' ಎಂದು ಜಮಾತ್ ಉಲೆಮಾ ಎ ಹಿಂದ್ ಹೇಳಿದೆ. ಜಮಾತ್ ಉಲೆಮಾ ಎ ಹಿಂದ್ ಅಧ್ಯಕ್ಷ ಮೌಲಾನಾ ಅರ್ಶದ್ ಮದನಿ ಅವರು ಪಹಲ್ಗಾಮ್ ಘಟನೆಯನ್ನು ಕಟುವಾಗಿ ಖಂಡಿಸಿದ್ದಾರೆ. 'ಇದು ಹೇಡಿಗಳ ಕೃತ್ಯ. ಅಮಾಯಕರನ್ನು ಕೊಲ್ಲುವವರು ಮನುಷ್ಯರಲ್ಲ, ಮೃಗಗಳು. ಭಯೋತ್ಪಾದನೆಗೆ ಇಸ್ಲಾಂನಲ್ಲಿ ಅವಕಾಶವೇ ಇಲ್ಲ. ಇಂಥ ಕೃತ್ಯದ ವಿರುದ್ಧ ಪ್ರತಿಯೊಬ್ಬರೂ ದ್ವನಿ ಎತ್ತಬೇಕು.**

## ತೀವ್ರಗೊಂಡ ಕಾಡ್ಗಿಚ್ಚು

**ನ್ಯೂಯಾರ್ಕ್:** ಅಮೆರಿಕದ ನ್ಯೂಜೆರ್ಸಿ ರಾಜ್ಯದಲ್ಲಿ ಕಾಣಿಸಿಕೊಂಡಿರುವ ಕಾಡ್ಗಿಚ್ಚು ತೀವ್ರಗತಿಯಲ್ಲಿ ಹರಡುತ್ತಿದ್ದು ಸಾವಿರಾರು ಎಕರೆ ಪ್ರದೇಶವನ್ನು ಸುಟ್ಟುಹಾಕಿದೆ. ಸುಮಾರು 3 ಸಾವಿರ ನಿವಾಸಿಗಳನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ ಎಂದು ಅಗ್ನಿಶಾಮಕ ಇಲಾಖೆ ಹೇಳಿದೆ. ಕಾಡ್ಗಿಚ್ಚು ಸುಮಾರು 3,200 ಎಕರೆ ಪ್ರದೇಶವನ್ನು ವ್ಯಾಪಿಸಿದ್ದು ಬುಧವಾರ ಬೆಳಗ್ಗಿನವರೆಗೆ ಕೇವಲ 10%ದಷ್ಟನ್ನು ಮಾತ್ರ ನಿಯಂತ್ರಿಸಲು ಸಾಧ್ಯವಾಗಿದೆ. ಅಗ್ನಿಶಾಮಕ ಯಂತ್ರಗಳು, ಬುಲ್ಡೋಝರ್ಗಳ ನೆರವಿನಿಂದ ಅಗ್ನಿಶಾಮಕ ಸಿಬ್ಬಂದಿ ಕಾಡ್ಗಿಚ್ಚನ್ನು ನಿಯಂತ್ರಿಸಲು ಕಾರ್ಯಾಚರಣೆ ಮುಂದುವರಿಸಿದ್ದಾರೆ ಎಂದು ನ್ಯೂಜೆರ್ಸಿ ಅರಣ್ಯ ಇಲಾಖೆ ಹೇಳಿದೆ. ಸುಮಾರು 25,000 ಗ್ರಾಹಕರಿಗೆ ವಿದ್ಯುತ್ ಪೂರೈಕೆ ಕಡಿತಗೊಂಡಿದೆ. ನ್ಯೂಜೆರ್ಸಿಯ ಪ್ರಮುಖ ಹೆದ್ದಾರಿ ಗಾರ್ಡನ್ ಸ್ಟೇಟ್ ಪಾರ್ಕ್ವೇಯ ಒಂದು ಭಾಗವನ್ನು ಮುಚ್ಚಲಾಗಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ.



## ಕಾಶ್ಮೀರದಲ್ಲಿ ''TRF' ' ಕಮಾಂಡರ್‌ನನ್ನು ಸುತ್ತುವರಿದ ಭಾರತೀಯ ಸೇನೆ!

**ಜಮ್ಮು ಕಾಶ್ಮೀರ :** ನಿನ್ನೆ ತಾನೆ ಕಾಶ್ಮೀರದ ಫಹಲ್ಗಾಮ್ ನಲ್ಲಿ ಪ್ರವಾಸಿಗರ ಮೇಲೆ ಉಗ್ರರು ಭೀಕರವಾದ ಗುಂಡಿನ ದಾಳಿ ನಡೆಸಿ 30ಕ್ಕೂ ಹೆಚ್ಚು ಪ್ರವಾಸಿಗರನ್ನು ಹತ್ಯೆ ಮಾಡಿದ್ದರು. ಈ ದಾಳಿಯನ್ನು TRF ಉಗ್ರ ಸಂಘಟನೆ ಹೊತ್ತುಕೊಂಡಿತ್ತು. ಇದರ ಬೆನ್ನಲ್ಲೇ ಇದೀಗ ಭಾರತೀಯ ಸೇನೆ ಅಲರ್ಟ್ ಆಗಿದ್ದು ಭಾರತೀಯ ಸೇನೆ ಸಿಆರ್ಪಿಎಫ್ ಹಾಗೂ ಪೊಲೀಸರು ಖಖಈ ಕಮಾಂಡರ್ ಅನ್ನು ಸುತ್ತುವರಿದಿದ್ದಾರೆ. ಹೌದು ದಕ್ಷಿಣ ಕಾಶ್ಮೀರದ ಕುಲ್ಗಾಮ್ ತಂಗ್ ಮಾರ್ಗ್ ನಲ್ಲಿ ಟಿ ಆರ್ ಎಫ್ ಭಯೋತ್ಪಾದಕ ಸಂಘಟನೆ ಹಾಗೂ ಭಾರತೀಯ ಸೇನೆ ಸಿಆರ್ಪಿಎಫ್ ಹಾಗೂ ಪೊಲೀಸರ ಜಂಟಿ ಕಾರ್ಯಾಚರಣೆಯಲ್ಲಿ ಗುಂಡಿನ ಚಕಮಕಿ ನಡೆದಿದೆ. ದಕ್ಷಿಣ ಕಾಶ್ಮೀರದ ಕುಲ್ಗಾಮ್ ತಂಗ್ ಮಾರ್ಗ್ ನಲ್ಲಿ ಪೊಲೀಸರು, ಸೇನೆ CRPF ಜಂಟಿ ಕಾರ್ಯಾಚರಣೆ ನಡೆಸಿದ್ದು, ಈ ವೇಳೆ TRF ಕಮಾಂಡರ್ ನನ್ನು ಇದೀಗ ಸೇನೆ ಸುತ್ತುವರೆದಿದೆ ಎಂದು ಮಾಹಿತಿ ತಿಳಿದು ಬಂದಿದೆ.



## ನಮ್ಮ ಕೈವಾಡ ಇಲ್ಲ- ಪಾಕಿಸ್ತಾನ

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ, ಕುತಂತ್ರಿ ಪಾಕಿಸ್ತಾನ ಪ್ರತಿಕ್ರಿಯಿಸಿದೆ. ಈ ದಾಳಿಗೂ ಪಾಕಿಸ್ತಾನಕ್ಕೂ ಯಾವುದೇ ಸಂಬಂಧ ಇಲ್ಲ. ಭಾರತದ ಕೇಂದ್ರ ಸರ್ಕಾರವು ನಾಗಾಲ್ಯಾಂಡ್, ಮಣಿಪುರ, ಕಾಶ್ಮೀರ ಮತ್ತು ಛತ್ತೀಸ್ಗಢ ಸೇರಿದಂತೆ ಹಲವು ರಾಜ್ಯಗಳಲ್ಲಿ ಪ್ರತಿಭಟನೆಗಳನ್ನು ಎದುರಿಸುತ್ತಿದೆ. ಈ ದಾಳಿಯೂ ಅದರ ಪರಿಣಾಮವಾಗಿಯೇ ನಡೆದಿರುವುದು ಎಂದು ಪಾಕಿಸ್ತಾನದ ರಕ್ಷಣಾ ಸಚಿವ ಖವಾಜಾ ಆಸಿಫ್ ಹೇಳಿದ್ದಾರೆ. ಸರ್ಕಾರದ ಶೋಷಣೆಗೆ ಪ್ರತಿಕಾರವಾಗಿ ನಡೆದ ಈ ಕೃತ್ಯ ಎಂದು ಹೇಳುವ ಮೂಲಕ ತನ್ನ ಹೀನ ಕೃತ್ಯಕ್ಕೆ ತೇಪೆ ಹಚ್ಚುವ ಪ್ರಯತ್ನ ನಡೆಸಿದೆ. ಭಾರತ ಅಕ್ರಮವಾಗಿ ಆಕ್ರಮಿಸಿಕೊಂಡಿರುವ ಜಮ್ಮು ಮತ್ತು ಕಾಶ್ಮೀರದ ಅನಂತ್ನಾಗ್ ಜಿಲ್ಲೆಯಲ್ಲಿ ನಡೆದ ದಾಳಿಯಲ್ಲಿ ಪ್ರವಾಸಿಗರು ಸಾವನ್ನಪ್ಪಿರುವುದು ಆಘಾತ ತಂದಿದೆ. ಮೃತರ ಕುಟುಂಬಸ್ಥರಿಗೆ ನಾವು ಸಂತಾಪ ಸೂಚಿಸುತ್ತೇವೆ ಮತ್ತು ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಹಾರೈಸುತ್ತೇವೆ ಎಂದು ಅವರು ಹೇಳಿದರು. ಇನ್ನು ಉಗ್ರರ ಬಳಿಮಿಲಿಟರಿ ದರ್ಜೆಯ ಶಸ್ತ್ರಾಸ್ತ್ರಗಳು ಇತ್ತು ಎಂದು ಪ್ರತ್ಯಕ್ಷದರ್ಶಿಗಳು ಹೇಳಿದ್ದಾರೆ. ಇನ್ನು ದಾಳಿಯ ಹೊಣೆ ಹೊತ್ತುಕೊಂಡಿರುವ ಲಷ್ಕರ್-ಎ-ತೈಬಾದಂತಹ ಭಯೋತ್ಪಾದಕ ಗುಂಪುಗಳು ಪಾಕಿಸ್ತಾನದೊಳಗಿನಿಂದ ಹಣಕಾಸಿನ ನೆರವು, ತರಬೇತಿ ಮತ್ತು ಕಾರ್ಯತಂತ್ರದ ಬೆಂಬಲ ಪಾಕಿಸ್ತಾನದಿಂದ ಸಿಗುತ್ತಲೇ ಇವೆ. ಪಾಕ್ ಆಕ್ರಮಿತ ಕಾಶ್ಮೀರ (ಪಿಒಕೆ)ದಲ್ಲಿರುವ ಶಿಬಿರಗಳು ಸುಧಾರಿತ ಮಿಲಿಟರಿ ತರಬೇತಿ ಮತ್ತು ವ್ಯವಸ್ಥಾಪನಾ ಬೆಂಬಲವನ್ನು ನೀಡುತ್ತವೆ.

## ಇಂದು ಸರ್ವಪಕ್ಷ ಸಭೆ ಕರೆದ ಕೇಂದ್ರ



**ನವದೆಹಲಿ:** ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರ ಪೈಶಾಚಿಕ ಕೃತ್ಯಕ್ಕೆ ದೇಶದಾದ್ಯಂತ ವ್ಯಾಪಕ ಖಂಡನೆ ವ್ಯಕ್ತವಾಗುತ್ತಿದೆ. ಈ ಬೆನ್ನಲ್ಲೇ ಇಂದು ಉನ್ನತಮಟ್ಟದ ಸಂಪುಟ ಸಮಿತಿ ಸಭೆ ನಡೆಸಿದ ಕೇಂದ್ರ ಸರ್ಕಾರ ಗುರುವಾರ ಸರ್ವಪಕ್ಷಗಳ ಸಭೆ ಕರೆದಿದೆ.

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸಭೆಯ ಅಧ್ಯಕ್ಷತೆ ವಹಿಸಲಿದ್ದು, ಕೇಂದ್ರ ಗೃಹಸಚಿವ ಅಮಿತ್ ಶಾ ಅವರೂ ಉಪಸ್ಥಿತರಿರಲಿದ್ದಾರೆ. ಪಹಲ್ಗಾಮ್ ದಾಳಿಯ ಕುರಿತು ಸರ್ವಪಕ್ಷ ಸಭೆಗೆ ಮಾಹಿತಿ ನೀಡಲಿದ್ದಾರೆ. ಜೊತೆಗೆ ಇಂದಿನ ಸಭೆಯಲ್ಲಿ ಪಾಕ್ ಉಗ್ರರನ್ನು ಮಟ್ಟಹಾಕಲು, ಪಾಕ್ ಸಂಬಂಧ ಕಡಿದುಕೊಳ್ಳುವ ಬಗ್ಗೆ ತೆಗೆದುಕೊಂಡ ನಿರ್ಧಾರಗಳನ್ನು ವಿವರಿಸಲಿದ್ದಾರೆ.

ಸಭೆಯಲ್ಲಿ, ರಾಜನಾಥ್ ಸಿಂಗ್ ಮತ್ತು ಇತರ ಸರ್ಕಾರಿ ಅಧಿಕಾರಿಗಳು ಭಯೋತ್ಪಾದಕ ದಾಳಿ, ನಂತರ ಸಂಗ್ರಹಿಸಿದ ಪುರಾವೆಗಳು ಮತ್ತು ಘಟನೆಯ ನಂತರ ಪಾಕಿಸ್ತಾನದ ವಿರುದ್ಧ ತೆಗೆದುಕೊಂಡ ಕ್ರಮಗಳ ಬಗ್ಗೆ ನಾಯಕರಿಗೆ ತಿಳಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಉಗ್ರರ ದಾಳಿಗೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರ ತಕ್ಷಣ ಸರ್ವಪಕ್ಷ ಸಭೆ ಕರೆದು ಎಲ್ಲರ ಅಭಿಪ್ರಾಯ ಪಡೆಯುವುದರ ಜತೆಗೆ ಭಯೋತ್ಪಾದಕರನ್ನು ಹುಡುಕಿ ಹೊಡೆದು ಹಾಕಬೇಕು' ಎಂದು ರಾಜ್ಯಸಭೆ ವಿರೋಧ ಪಕ್ಷದ ನಾಯಕರೂ ಆಗಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದರು.

## ಇಬ್ಬರು ಸ್ಥಳೀಯ ಉಗ್ರರ ಕೈವಾಡ ಬಹಿರಂಗ

ನವದೆಹಲಿ: ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ ಬಳಿಯ ಬೈಸರನ್ ಹುಲ್ಲುಗಾವಲಿನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ 26 ಪ್ರವಾಸಿಗರು ಮೃತಪಟ್ಟಿದ್ದಾರೆ. ಭದ್ರತಾ ಪಡೆಗಳ ಅನುಪಸ್ಥಿತಿ ಮತ್ತು ವಾಹನ ಸಂಚಾರಕ್ಕೆ ಅವಕಾಶವಿಲ್ಲದ ಕಾರಣ ಭಯೋತ್ಪಾದಕರು ಬೈಸರನ್ ಅನ್ನು ಆಯ್ಕೆ ಮಾಡಿಕೊಂಡಿದ್ದಾರೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

ರಕ್ಷಣಾ ಕಾರ್ಯಾಚರಣೆ ನಿಧಾನವಾಗಲು ಮತ್ತು ಸಾವುನೋವುಗಳನ್ನು ಹೆಚ್ಚಿಸಲು ಉಗ್ರರು ಈ ಸ್ಥಳವನ್ನು ಆಯ್ಕೆ ಮಾಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಅನಂತ್‌ನಾಗ್‌ನ ಆದಿಲ್ ಗುರಿ ಮತ್ತು ಸೋಪೋರ್‌ನ ಆಸಿಫ್ ಶೇಖ್ ಎಂಬ ಇಬ್ಬರು ಸ್ಥಳೀಯರು ಉಗ್ರರು ಈ ದಾಳಿಯಲ್ಲಿ ಭಾಗಿಯಾಗಿದ್ದಾರೆಂದು ತನಿಖಾಧಿಕಾರಿಗಳು ಶಂಕಿಸಿದ್ದಾರೆ ಎಂದು ಖಚಿತ ಮೂಲಗಳು ತಿಳಿಸಿವೆ.

ಸ್ಥಳೀಯ ಪೊಲೀಸರು ಒದಗಿಸಿದ ಮಾಹಿತಿಯನ್ನು ಓಖಂ ತಂಡ ಮತ್ತಷ್ಟು ಪರಿಶೀಲಿಸುತ್ತಿದೆ. ಪಾಕಿಸ್ತಾನಿ ಮತ್ತು ಸ್ಥಳೀಯ ಕಾಶ್ಮೀರಿ ಭಯೋತ್ಪಾದಕರು ಹೆಲ್ಮೆಟ್ ಗೆ ಅಳವಡಿಸಿದ ಕ್ಯಾಮೆರಾಗಳನ್ನು ಧರಿಸಿ, ಸಂಪೂರ್ಣ ದಾಳಿಯನ್ನು ಚಿತ್ರೀಕರಿಸಿ, ಪ್ರವಾಸಿಗರ ಮೇಲೆ ಗುಂಡಿನ ದಾಳಿ ನಡೆಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಒಟ್ಟಾರೆಯಾಗಿ, ಭಯೋತ್ಪಾದಕರ ಸಂಖ್ಯೆ ಏಳು ಎಂದು ನಂಬಲಾಗಿದೆ. ಈ ಪೈಕಿ ಅವರು ವಿದೇಶಿ ಉಗ್ರರಾಗಿದ್ದು, ಇಬ್ಬರು ಸ್ಥಳೀಯರು ಎಂದು ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿದೆ. ಪಠಾಣಿ ಸೂಟ್‌ಗಳನ್ನು ಧರಿಸಿದ್ದ ಭಯೋತ್ಪಾದಕರು, ಬೈಸರನ್ ಹುಲ್ಲುಗಾವಲಿಗೆ ಆಗಮಿಸಿ ಅಮೆರಿಕ ನಿರ್ಮಿತ ಒ4 ಕಾರ್ಬೈನ್ ಅಸಾಲ್ಟ್ ರೈಫಲ್ ಮತ್ತು ಂಏ-47 ಗಳಿಂದ ಗುಂಡಿನ ದಾಳಿ ನಡೆಸಿದ್ದಾರೆ. ಏಪ್ರಿಲ್ 22 ರ ಸಂಜೆಯ ವೇಳೆಗೆ ಘಟನಾ ಸ್ಥಳದಿಂದ 50 ರಿಂದ 70 ಕ್ಕೂ ಹೆಚ್ಚು ಬಳಸಿದ ಕಾರ್ಟ್ರಿಡ್ಜ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಮೂಲಗಳು ತಿಳಿಸಿವೆ. ಇದಲ್ಲದೆ, ಭಯೋತ್ಪಾದಕರು ಹೊತ್ತೊಯ್ಯುತ್ತಿದ್ದ ಶಸ್ತ್ರಾಸ್ತ್ರಗಳ ವಿವರಗಳನ್ನು ನೀಡಿದ ಅವರು, ಉಗ್ರರಲ್ಲಿ ಇಬ್ಬರು ಒ4 ಕಾರ್ಬೈನ್ ಅಸಾಲ್ಟ್ ರೈಫಲ್‌ಗಳನ್ನು ಹೊಂದಿದ್ದರೆ, ಉಳಿದ ಮೂವರು ಂಏ-47 ಗಳನ್ನು ಹೊತ್ತೊಯ್ಯುತ್ತಿದ್ದರು ಎಂದು ಹೇಳಿದ್ದಾರೆ.

## ಪೋಪ್ ಫ್ರಾನ್ಸಿಸ್ ಪಾರ್ಥಿವ ಶರೀರ ಅಂತಿಮ ದರ್ಶನಕ್ಕೆ ವ್ಯವಸ್ಥೆ

ವ್ಯಾಟಿಕನ್ ಸಿಟಿ: ಪೋಪ್ ಫ್ರಾನ್ಸಿಸ್ ಅವರ ಪಾರ್ಥಿವ ಶರೀರವನ್ನು ಬುಧವಾರ ಸೇಂಟ್ ಪೀಟರ್ಸ್ ಬೆಸಿಲಿಕಾಗೆ ಸ್ಥಳಾಂತರಿಸಲಾಗುವುದು. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಇತರ ಡಜನ್ಗಟ್ಟಲೆ ವಿಶ್ವ ನಾಯಕರನ್ನು ರೋಮ್ಗೆ ಕರೆತರುವ ನಿರೀಕ್ಷೆಯ ಅಂತ್ಯಕ್ರಿಯೆಗೆ ಮುಂಚಿತವಾಗಿ ಕ್ಯಾಥೊಲಿಕ್ ನಿಷ್ಠಾವಂತರು ತಮ್ಮ ಅಂತಿಮ ಗೌರವ ಸಲ್ಲಿಸಲು ಅವಕಾಶ ನೀಡಲಾಗುವುದು.

ಕ್ರಾಂತಿಕಾರಿ ಸುಧಾರಕರಾದ ಫ್ರಾನ್ಸಿಸ್ ಸೋಮವಾರ 88 ನೇ ವಯಸ್ಸಿನಲ್ಲಿ ಪಾರ್ಶ್ವವಾಯು ಮತ್ತು ಹೃದಯಾಘಾತದಿಂದ ನಿಧನರಾದರು, 12 ವರ್ಷಗಳ ಕಾಲ ಪ್ರಕ್ಷುಬ್ಧ ಆಳ್ವಿಕೆಯನ್ನು ಕೊನೆಗೊಳಿಸಿದರು. ಇದರಲ್ಲಿ ಅವರು ಸಂಪ್ರದಾಯವಾದಿಗಳೊಂದಿಗೆ ಪದೇ ಪದೇ ಘರ್ಷಣೆ ನಡೆಸಿದರು ಮತ್ತು ಬಡವರು ಮತ್ತು ಅಂಚಿನಲ್ಲಿರುವವರನ್ನು ಬೆಂಬಲಿಸಿದರು.

ತೆರೆದ ಶವಪೆಟ್ಟಿಗೆಯಲ್ಲಿ ಇರಿಸಲಾದ ಅವರ ಪಾರ್ಥಿವ ಶರೀರವನ್ನು ಅವರು ವಾಸಿಸುತ್ತಿದ್ದ ವ್ಯಾಟಿಕನ್ ನಿವಾಸದ ಪ್ರಾರ್ಥನಾ ಮಂದಿರದಿಂದ ಸೇಂಟ್ ಪೀಟರ್ಸ್ಗೆ ಕರೆದೊಯ್ಯಲು ನಿರ್ಧರಿಸಲಾಗಿತ್ತು, ಬೆಳಿಗ್ಗೆ 9 ಗಂಟೆಗೆ (0700 ಉಒಖ) ಪ್ರಾರಂಭವಾಗುವ ಭವ್ಯ ಮೆರವಣಿಗೆಯಲ್ಲಿ, ಕಾರ್ಡಿನಲ್ಸ್ ಮತ್ತು ಲ್ಯಾಟಿನ್ ಪಠಣಗಳೊಂದಿಗೆ ಮಧ್ಯದ ಬಾಗಿಲಿನ ಮೂಲಕ ಪ್ರವೇಶಿಸಲಾಯಿತು. ಧಾರ್ಮಿಕ ಸೇವೆಯ ನಂತರ, ಭಕ್ತರು ಮತ್ತು ಸಾರ್ವಜನಿಕರಿಗೆ ಶುಕ್ರವಾರ ಸಂಜೆ 7 ಗಂಟೆಯವರೆಗೆ ದಿವಂಗತ ಮಠಾಧೀಶರನ್ನು ಭೇಟಿ ಮಾಡಲು ಅವಕಾಶ ನೀಡಲಾಗುವುದು, ಮರುದಿನ ಬೆಳಿಗ್ಗೆ ಅಂತ್ಯಕ್ರಿಯೆಯನ್ನು ನಿಗದಿಪಡಿಸಲಾಗಿದೆ.



ಈ ಸೇವೆಯು ಹೊರಾಂಗಣದಲ್ಲಿ, ಸೇಂಟ್ ಪೀಟರ್ಸ್ ಚೌಕದಲ್ಲಿ ನಡೆಯಲಿದ್ದು, ಕಾರ್ಡಿನಲ್ಸ್ ಕಾಲೇಜಿನ ಡೀನ್, 91 ವರ್ಷದ ಜಿಯೋವಾನಿ ಬ್ಯಾಟಿಸ್ಟಾ ರೆ ಅವರ ನೇತೃತ್ವದಲ್ಲಿ ನಡೆಯಲಿದೆ. ಹತ್ತಾರು ಸಾವಿರ ಜನರು ಭಾಗವಹಿಸುವ ನಿರೀಕ್ಷೆಯಿದೆ.

ವಲಸೆಯ ಕುರಿತು ಪೋಪ್ ಜೊತೆ ಪದೇ ಪದೇ ಘರ್ಷಣೆ ನಡೆಸುತ್ತಿದ್ದ ಟ್ರಂಪ್ ಅವರೊಂದಿಗೆ ಪ್ರಥಮ ಮಹಿಳೆ ಮೆಲಾನಿಯಾ ಕೂಡ ಇರುತ್ತಾರೆ. ಇಟಲಿ, ಫ್ರಾನ್ಸ್, ಜರ್ಮನಿ, ಬ್ರಿಟನ್, ಉಕ್ರೇನ್, ಇಗ ಸಂಸ್ಥೆಗಳು ಮತ್ತು ಫ್ರಾನ್ಸಿಸ್ ಅವರ ತವರು ರಾಷ್ಟ್ರವಾದ ಅರ್ಜೆಂಟೀನಾ ನಾಯಕರು ಸಹ ತಮ್ಮ ಉಪಸ್ಥಿತಿಯನ್ನು ದೃಢಪಡಿಸಿದರು.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಭಾರತಾಂಬೆಯ ಕಳಶದಂತೆ ಇರುವ ಜಮ್ಮು, ಕಾಶ್ಮೀರ ಎಂದಿಗೂ ನಮ್ಮದೆ



ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ಅಟ್ಟಹಾಸಕ್ಕೆ 27 ಮಂದಿ ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದಾರೆ. ಅವರ ನೀಚ ಕ್ರೌರ್ಯದ ಬಗ್ಗೆ ಸಿನಿಮಾ ಸ್ಟಾರ್‌ಗಳು ಖಂಡಿಸಿದ್ದಾರೆ. ಇದೀಗ ಭಾರತಾಂಬೆಯ ಕಳಶದಂತಿರುವ ಜಮ್ಮು ಮತ್ತು ಕಾಶ್ಮೀರ ಎಂದಿಗೂ ನಮ್ಮದೆ ಎಂದು ನಟ ಧ್ರುವ ಸರ್ಜಾ ಎಂದು ಉಗ್ರರ ದಾಳಿ ಬಗ್ಗೆ ಖಡಕ್ ಆಗಿ ಪ್ರತಿಕ್ರಿಯೆ ನೀಡಿದ್ದಾರೆ.

ಭಾರತಾಂಬೆಯ ಕಳಶದಂತಿರೋ ಜಮ್ಮು ಮತ್ತು ಕಾಶ್ಮೀರ ಎಂದಿಗೂ ನಮ್ಮದೆ..

ಪಹಲ್ಗಾಮ್ ನಲ್ಲಿ ಉಗ್ರರು, ಅಮಾಯಕರ ಮೇಲೆ ನಡೆಸಿದಂತ ಕೃತ್ಯ ಎಂದಿಗೂ ಯಾರೂ ಕ್ಷಮಿಸಲಾಗದು.

ಎಲ್ಲಾ ಧರ್ಮದ ಸಾರ ಪ್ರೀತಿ ಹಾಗೂ ಅಹಿಂಸೆ. ಪ್ರೀತಿಯಿಂದ ಸಾಧಿಸಲಾಗದ್ದು ಹಿಂಸೆ ಹಾಗೂ ದ್ವೇಷದಿಂದ ಸಾಧಿಸಲು ಸಾಧ್ಯವೇ ಇಲ್ಲ.

ಭಾರತಾಂಬೆಯ ಕಳಶದಂತಿರುವ ಜಮ್ಮು ಮತ್ತು ಕಾಶ್ಮೀರ ಎಂದಿಗೂ ನಮ್ಮದೆ. ಪಹಲ್ಗಾಮ್ ನಲ್ಲಿ ಉಗ್ರರು, ಅಮಾಯಕರ ಮೇಲೆ ನಡೆಸಿದಂತ ಕೃತ್ಯ ಎಂದಿಗೂ ಯಾರೂ ಕ್ಷಮಿಸಲಾಗದು. ಎಲ್ಲಾ ಧರ್ಮದ ಸಾರ ಪ್ರೀತಿ ಹಾಗೂ ಅಹಿಂಸೆ. ಪ್ರೀತಿಯಿಂದ ಸಾಧಿಸಲಾಗದ್ದು, ಹಿಂಸೆ ಹಾಗೂ ದ್ವೇಷದಿಂದ ಸಾಧಿಸಲು ಸಾಧ್ಯವೇ ಇಲ್ಲ. ಪ್ರಾಣ ಬಿಟ್ಟವರ ಆತ್ಮಕ್ಕೆ ಶಾಂತಿ ಸಿಗಲಿ. ಕಳೆದುಕೊಂಡವರ ಕುಟುಂಬಗಳಿಗೆ ದೇವರು ಧೈರ್ಯ ಕರುಣಿಸಲಿ ಎಂದು ಧ್ರುವ ಸರ್ಜಾ ಎಕ್ಸ್‌ನಲ್ಲಿ ಬರೆದುಕೊಂಡಿದ್ದಾರೆ. ಜೈ ಹಿಂದ್, ಜೈ ಭಾರತ, ಜೈ ಆಂಜನೇಯ ಎಂದು ಹೇಳಿದ್ದಾರೆ.

ಪಹಲ್ಗಾಮ್‌ನಲ್ಲಿ ಅಮಾಯಕರ ನೆತ್ತರು ಹರಿಸಲಾಗಿದೆ. ಇದು ಕೇವಲ ವ್ಯಕ್ತಿಗಳ ಮೇಲಿನ ದಾಳಿಯಲ್ಲ, ದೇಶದ ಶಕ್ತಿಯ ಮೇಲೆ ಮಾಡಲಾದ ದಾಳಿ. ಇದು ಸುಮ್ಮನಿರುವ ಸಮಯವಲ್ಲ. ಈ ಘಟನೆಗೆ ಪ್ರತಿಕ್ರಿಯೆ ಕೊಡಲೇಬೇಕು. ಈ ಹೀನ ಕೃತ್ಯದಲ್ಲಿ ಪಾಲ್ಗೊಂಡವರ ವಿರುದ್ಧ ತಕ್ಷಣ ಕ್ರಮ ವಹಿಸಿ ಅಂತಾ ಪ್ರಧಾನಿ ನರೇಂದ್ರ ಮೋದಿ, ಗೃಹಸಚಿವ ಅಮಿತ್ ಶಾ, ರಾಜನಾಥ್ ಸಿಂಗ್‌ಗೆ ಎಕ್ಸ್‌ನಲ್ಲಿ ಮೂಲಕ ಸುದೀಪ್ ಮಾಡಿದ್ದಾರೆ.

ಯಶ್ ಎಕ್ಸ್‌ನಲ್ಲಿ ಪಹಲ್ಗಾಮ್‌ನಲ್ಲಿ ಮುಗ್ಧ ಜನರ ಕ್ರೂರ ಹತ್ಯೆಯಿಂದ ತೀವ್ರ ದುಃಖವಾಗಿದೆ. ಮುಗ್ಧ ಜನರ ಮೇಲಿನ ದಾಳಿಯನ್ನು ಊಹಿಸಲು ಸಾಧ್ಯವಿಲ್ಲ. ಈ ಭೀಕರ ದುರಂತದಲ್ಲಿ ಸಂತ್ರಸ್ತರ ಕುಟುಂಬಗಳು ಮತ್ತು ರಾಷ್ಟ್ರದೊಂದಿಗೆ ದೃಢವಾಗಿ ನಿಲ್ಲುತ್ತೇವೆ ಎಂದು ಬರೆದುಕೊಂಡಿದ್ದಾರೆ.

ಮುಗ್ಧ ಜೀವಗಳು ಪಹಲ್ಗಾಮ್‌ನಲ್ಲಿ ಬಲಿಯಾಗಿರೋದು ಕೇಳಿ ಆಘಾತವಾಗಿದೆ. ಈ ದುರಂತದಲ್ಲಿ ದುಃಖದಲ್ಲಿರುವ ಕುಟುಂಬಕ್ಕೆ ನನ್ನ ಪ್ರಾರ್ಥನೆಗಳು ಎಂದು ನಟಿ ರಾಧಿಕಾ ಪಂಡಿತ್ ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿದ್ದಾರೆ.

ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ನಡೆದಿರುವ ಉಗ್ರರ ದಾಳಿಯನ್ನ ತೀವ್ರವಾಗಿ ಖಂಡಿಸುತ್ತೇನೆ. ಶಾಂತಿ ಸೌಹಾರ್ದದ ಭಾರತದಲ್ಲಿ ಇಂತಹ ಕೃತ್ಯಗಳು ಮರುಕಳಿಸದಿರಲಿ. ಹಾಗೆಯೇ ಈ ಕೃತ್ಯ ಎಸಗಿದವರಿಗೆ ಕಠಿಣ ಶಿಕ್ಷೆ ಆಗಲಿ ಮತ್ತು ನಮ್ಮನ್ನು ಅಗಲಿದ ಎಲ್ಲಾ ಭಾರತೀಯರಿಗೆ ಭಾವಪೂರ್ಣ ಶ್ರದ್ಧಾಂಜಲಿ ಕೋರುತ್ತಾ ಎಲ್ಲಾ ಕುಟುಂಬಸ್ಥರಿಗೆ ಈ ದುಃಖವನ್ನು ಭರಿಸುವ ಶಕ್ತಿ ಹಾಗೂ ಧೈರ್ಯವನ್ನು ದೇವರು ನೀಡಲಿ. ಈ ಪೈಶಾಚಿಕ ಕೃತ್ಯ ಎಸಗುವವರ ವಿರುದ್ಧದ ಸರ್ಕಾರದ ಹೋರಾಟಕ್ಕೆ ಸದಾ ಬೆಂಬಲವಿರುತ್ತದೆ ಎಂದು ಶಿವಣ್ಣ ಪ್ರತಿಕ್ರಿಯೆ ನೀಡಿದ್ದಾರೆ.

ಕನ್ನಡದ ನಟಿ ರಶ್ಮಿಕಾ ಮಂದಣ್ಣ ರಿಯಾಕ್ಟ್ ಮಾಡಿ, ನನ್ನ ಹೃದಯ ಒಡೆದಿದೆ ಎಂದು ಇನ್ಸ್ಟಾಗ್ರಾಂ ಬರೆದುಕೊಂಡಿದ್ದಾರೆ.

ಕಾಶ್ಮೀರದ ಪಹಲ್ಗಾಮ್‌ನಲ್ಲಿ ಅಮಾಯಕರ ಮೇಲೆ ನಡೆದ ಭೀಕರ ಭಯೋತ್ಪಾದಕ ದಾಳಿಯ ಬಗ್ಗೆ ಕೇಳಿ ನೋವಾಗಿದೆ. ಅವರ ಕುಟುಂಬಗಳಿಗೆ ಹೃದಯಪೂರ್ವಕ ಪ್ರಾರ್ಥನೆ ಮತ್ತು ಸಂತಾಪಗಳು. ಇದು ಎಂದಿಗೂ ಮರೆಯಲಾಗದ ಘೋರ ದಾಳಿ ಎಂದು ಬಾಲಿವುಡ್ ಬೆಡಗಿ ಅನುಷ್ಕಾ ಶರ್ಮಾ ಪ್ರತಿಕ್ರಿಯೆ ನೀಡಿದ್ದಾರೆ.

# ಪಹಲ್ಗಾಮ್ ಉಗ್ರರ ಹೇಯ ಕೃತ್ಯ ಖಂಡಿಸಿದ ಶಿವಣ್ಣ, ರಶ್ಮಿಕಾ ಮಂದಣ್ಣ, ಅನುಷ್ಕಾ ಶರ್ಮಾ



ಕಾಶ್ಮೀರದಲ್ಲಿ ಭಯೋತ್ಪಾದಕರು ಅಟ್ಟಹಾಸ ಮೆರೆದಿದ್ದಾರೆ. ಉಗ್ರರ ಪೈಶಾಚಿಕ ಕೃತ್ಯಕ್ಕೆ 27 ಮಂದಿ ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದಾರೆ. ಈ ಹೇಯ ಕೃತ್ಯದ ಬಗ್ಗೆ ಶಿವಣ್ಣ, ರಶ್ಮಿಕಾ ಮಂದಣ್ಣ, ರಾಮ್ ಚರಣ್, ರವೀನಾ ಟಂಡನ್ ಸೇರಿದಂತೆ ಅನೇಕರು ಪ್ರತಿಕ್ರಿಯೆ ನೀಡಿದ್ದಾರೆ. ಈ ಕೃತ್ಯ ಎಸಗಿದವರಿಗೆ ಕಠಿಣ ಶಿಕ್ಷೆ ಆಗಬೇಕು ಎಂದು ಖಂಡಿಸಿದ್ದಾರೆ.

ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ನಡೆದಿರುವ ಉಗ್ರರ ದಾಳಿಯನ್ನ ತೀವ್ರವಾಗಿ ಖಂಡಿಸುತ್ತೇನೆ. ಶಾಂತಿ ಸೌಹಾರ್ದದ ಭಾರತದಲ್ಲಿ ಇಂತಹ ಕೃತ್ಯಗಳು ಮರುಕಳಿಸದಿರಲಿ. ಹಾಗೆಯೇ ಈ ಕೃತ್ಯ ಎಸಗಿದವರಿಗೆ ಕಠಿಣ ಶಿಕ್ಷೆ ಆಗಲಿ ಮತ್ತು ನಮ್ಮನ್ನು ಅಗಲಿದ ಎಲ್ಲಾ ಭಾರತೀಯರಿಗೆ ಭಾವಪೂರ್ಣ ಶ್ರದ್ಧಾಂಜಲಿ ಕೋರುತ್ತಾ ಎಲ್ಲಾ ಕುಟುಂಬಸ್ಥರಿಗೆ ಈ ದುಃಖವನ್ನು ಭರಿಸುವ ಶಕ್ತಿ ಹಾಗೂ ಧೈರ್ಯವನ್ನು ದೇವರು ನೀಡಲಿ. ಈ ಪೈಶಾಚಿಕ ಕೃತ್ಯ ಎಸಗುವವರ ವಿರುದ್ಧದ ಸರ್ಕಾರದ ಹೋರಾಟಕ್ಕೆ ಸದಾ ಬೆಂಬಲವಿರುತ್ತದೆ ಎಂದು ಶಿವಣ್ಣ ಪ್ರತಿಕ್ರಿಯೆ ನೀಡಿದ್ದಾರೆ.

ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಿಂದ ಆಘಾತ ಮತ್ತು ದುಃಖವಾಗಿದೆ. ಇಂತಹ ಘಟನೆಗಳಿಗೆ ನಮ್ಮ ಸಮಾಜದಲ್ಲಿ ಸ್ಥಾನವಿಲ್ಲ ಮತ್ತು ಅವುಗಳನ್ನು ಬಲವಾಗಿ ಖಂಡಿಸಬೇಕು. ಸಂತ್ರಸ್ತರ ಕುಟುಂಬದ ಪರವಾಗಿ ರಾಮ್ ಚರಣ್ ಬರೆದುಕೊಂಡಿದ್ದಾರೆ.

ಕನ್ನಡದ ನಟಿ ರಶ್ಮಿಕಾ ಮಂದಣ್ಣ ರಿಯಾಕ್ಟ್ ಮಾಡಿ, ನನ್ನ ಹೃದಯ ಒಡೆದಿದೆ ಎಂದು ಇನ್ಸ್ಟಾಗ್ರಾಂ ಬರೆದುಕೊಂಡಿದ್ದಾರೆ.

ಕಾಶ್ಮೀರದ ಪಹಲ್ಗಾಮ್‌ನಲ್ಲಿ ಅಮಾಯಕರ ಮೇಲೆ ನಡೆದ ಭೀಕರ ಭಯೋತ್ಪಾದಕ ದಾಳಿಯ ಬಗ್ಗೆ ಕೇಳಿ ನೋವಾಗಿದೆ. ಅವರ ಕುಟುಂಬಗಳಿಗೆ ಹೃದಯಪೂರ್ವಕ ಪ್ರಾರ್ಥನೆ ಮತ್ತು ಸಂತಾಪಗಳು. ಇದು ಎಂದಿಗೂ ಮರೆಯಲಾಗದ ಘೋರ ದಾಳಿ ಎಂದು ಬಾಲಿವುಡ್ ಬೆಡಗಿ ಅನುಷ್ಕಾ ಶರ್ಮಾ ಪ್ರತಿಕ್ರಿಯೆ ನೀಡಿದ್ದಾರೆ.

ಓಂ ಶಾಂತಿ, ನನ್ನ ಕಡೆಯಿಂದ ಸಂತಾಪ ಸೂಚಿಸುತ್ತೇನೆ. ಆಘಾತ ಮತ್ತು ಕೋಪ ಬರುತ್ತಿದೆ. ದುಃಖವನ್ನು ವ್ಯಕ್ತಪಡಿಸಲು ಪದಗಳಿಲ್ಲ. ನಾವು ಸಣ್ಣ ಪುಟ್ಟ ಜಗಳಗಳನ್ನು ಬಿಟ್ಟು, ಒಗ್ಗೂಡಿ ನಿಜವಾದ ಶತ್ರುಗಳನ್ನು ಅರಿತುಕೊಳ್ಳುವ ಸಮಯ ಎಂದು ರವೀನಾ ಟಂಡನ್ ಬರೆದುಕೊಂಡಿದ್ದಾರೆ.

ಸಂಜಯ್ ದತ್ ಎಕ್ಸ್‌ನಲ್ಲಿ, ಅವರು ನಮ್ಮ ಜನರನ್ನು ರಕ್ತದಲ್ಲಿ ಕೊಂದಿದ್ದಾರೆ. ಇದನ್ನೂ ಕ್ಷಮಿಸಲು ಸಾಧ್ಯವಿಲ್ಲ. ನಾವು ಪ್ರತಿಕಾರ ತೀರಿಸಿಕೊಳ್ಳಬೇಕು. ನಮ್ಮ ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಮತ್ತು ರಕ್ಷಣಾ ಸಚಿವ ರಾಜ್‌ನಾಥ್ ಸಿಂಗ್ ಅವರು ಹೈಯ ಕೃತ್ಯ ಮಾಡಿದವರಿಗೆ ಅರ್ಹವಾದದ್ದನ್ನು ನೀಡಬೇಕೆಂದು ನಾನು ವಿನಂತಿಸುತ್ತೇನೆ.

ಕಾಶ್ಮೀರದ ಪಹಲ್ಗಾಮ್‌ನಲ್ಲಿ ಮುಗ್ಧ ಪ್ರವಾಸಿಗರ ಮೇಲೆ ನಡೆದ ಹೇಡಿತನದ ಭಯೋತ್ಪಾದಕ ದಾಳಿಯನ್ನು ಬಲವಾಗಿ ಖಂಡಿಸುತ್ತೇನೆ. ನಾಗರಿಕ ಜಗತ್ತಿನಲ್ಲಿ ಭಯೋತ್ಪಾದನೆಗೆ ಯಾವುದೇ ಸ್ಥಾನವಿಲ್ಲ. ಈ ಹೇಯ ಕೃತ್ಯವು ಸ್ವೀಕಾರಾರ್ಹವಲ್ಲ. ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳಿಗೆ ನಾನು ಸಂತಾಪ ಸೂಚಿಸುತ್ತೇನೆ. ಗಾಯಗೊಂಡವರು ಬೇಗನೆ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಹೇಳಿದ್ದಾರೆ.

# ಪಹಲ್ಗಾಮ್‌ನಲ್ಲಿ ಅಮಾಯಕರ ನೆತ್ತರು ಹರಿಸಲಾಗಿದೆ



ಪಹಲ್ಗಾಮ್‌ನಲ್ಲಿ ಹಿಂದೂಗಳ ಮೇಲೆ ನಡೆದ ಉಗ್ರರ ದಾಳಿ ಬಗ್ಗೆ ಶಿವಣ್ಣ, ಯಶ್, ರಾಧಿಕಾ ಪಂಡಿತ್ ಪ್ರತಿಕ್ರಿಯೆ ನೀಡಿದ ಬೆನ್ನಲ್ಲೇ ನಟ ಸುದೀಪ್ ಕೂಡ ರಿಯಾಕ್ಟ್ ಮಾಡಿದ್ದಾರೆ. ಪಹಲ್ಗಾಮ್‌ನಲ್ಲಿ ಅಮಾಯಕರ ನೆತ್ತರು ಹರಿಸಲಾಗಿದೆ, ಉಗ್ರರ ಹೀನ ಕೃತ್ಯಕ್ಕೆ ತಕ್ಷಣ ಕ್ರಮ ಕೈಗೊಳ್ಳಿ ಎಂದು ಸರ್ಕಾರಕ್ಕೆ ಸುದೀಪ್ ಮನವಿ ಮಾಡಿದ್ದಾರೆ. ಪಹಲ್ಗಾಮ್ ನಲ್ಲಿ ಅಮಾಯಕರ ನೆತ್ತರು ಹರಿಸಲಾಗಿದೆ. ಇದು ಕೇವಲ ವ್ಯಕ್ತಿಗಳ ಮೇಲಿನ ದಾಳಿಯಲ್ಲ. ದೇಶದ ಶಕ್ತಿಯ ಮೇಲೆ ಮಾಡಲಾದ ದಾಳಿ. ಇದು ಸುಮ್ಮನಿರುವ ಸಮಯವಲ್ಲ. ಈ ಘಟನೆಗೆ ಪ್ರತಿಕ್ರಿಯೆ ಕೊಡಲೇಬೇಕು. ಈ ಹೀನ ಕೃತ್ಯದಲ್ಲಿ ಪಾಲ್ಗೊಂಡವರ ವಿರುದ್ಧ ತಕ್ಷಣ ಕ್ರಮ ವಹಿಸಿ ಅಂತಾ ಪ್ರಧಾನಿ ನರೇಂದ್ರ, ಮೋದಿ, ಗೃಹಸಚಿವ ಅಮಿತ್ ಶಾ, ರಾಜನಾಥ್ ಸಿಂಗ್‌ಗೆ ಎಕ್ಸ್‌ನಲ್ಲಿ ಮೂಲಕ ಸುದೀಪ್ ಮಾಡಿದ್ದಾರೆ.

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರ ಪೈಶಾಚಿಕ ಕೃತ್ಯಕ್ಕೆ 27 ಮಂದಿ ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದಾರೆ.

# ಮುಗ್ಧರ ಕ್ರೂರ ಹತ್ಯೆಯಿಂದ ತೀವ್ರ ದುಃಖವಾಗಿದೆ



27 ಹಿಂದೂಗಳನ್ನು ಕೊಂದಿರುವ ಉಗ್ರರ ನೀಚತನದ ಬಗ್ಗೆ ರಾಕಿಂಗ್ ಸ್ಟಾರ್ ಯಶ್ ರಿಯಾಕ್ಟ್ ಮಾಡಿದ್ದಾರೆ. ಮುಗ್ಧ ಜನರ ಕ್ರೂರ ಹತ್ಯೆಯಿಂದ ತೀವ್ರ ದುಃಖವಾಗಿದೆ ಎಂದು ಯಶ್ ಹೇಳಿದ್ದಾರೆ.

ಯಶ್ ಎಕ್ಸ್‌ನಲ್ಲಿ ಪಹಲ್ಗಾಮ್‌ನಲ್ಲಿ ಮುಗ್ಧ ಜನರ ಕ್ರೂರ ಹತ್ಯೆಯಿಂದ ತೀವ್ರ ದುಃಖವಾಗಿದೆ. ಮುಗ್ಧ ಜನರ ಮೇಲಿನ ದಾಳಿಯನ್ನು ಊಹಿಸಲು ಸಾಧ್ಯವಿಲ್ಲ. ಈ ಭೀಕರ ದುರಂತದಲ್ಲಿ ಸಂತ್ರಸ್ತರ ಕುಟುಂಬಗಳು ಮತ್ತು ರಾಷ್ಟ್ರದೊಂದಿಗೆ ದೃಢವಾಗಿ ನಿಲ್ಲುತ್ತೇವೆ ಎಂದು ಬರೆದುಕೊಂಡಿದ್ದಾರೆ.

ಮುಗ್ಧ ಜೀವಗಳು ಪಹಲ್ಗಾಮ್‌ನಲ್ಲಿ ಬಲಿಯಾಗಿರೋದು ಕೇಳಿ ಆಘಾತವಾಗಿದೆ. ಈ ದುರಂತದಲ್ಲಿ ದುಃಖದಲ್ಲಿರುವ ಕುಟುಂಬಕ್ಕೆ ನನ್ನ ಪ್ರಾರ್ಥನೆಗಳು ಎಂದು ನಟಿ ರಾಧಿಕಾ ಪಂಡಿತ್ ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿದ್ದಾರೆ.

## ರೋಹಿತ್, ಬೌಲ್ಟ್ ಆರ್ಭಟಕ್ಕೆ 'ಸನ್' ಬರ್ನ್

# 7 ವಿಕೆಟ್‌ಗಳ ಭರ್ಜರಿ ಜಯ



**ಹೈದರಾಬಾದ್:** ಟ್ರೆಂಟ್ ಬೌಲ್ಟ್ ಬೆಂಕಿ ಬೌಲಿಂಗ್ ದಾಳಿ, ಹಿಟ್ ಮ್ಯಾನ್ ರೋಹಿತ್ ಶರ್ಮಾ ಅವರ ಅಮೋಘ ಅರ್ಧಶತಕದ ಬ್ಯಾಟಿಂಗ್ ನೆರವಿನಿಂದ ಮಂಬೈ ಇಂಡಿಯನ್ಸ್ ತಂಡ ಸನ್ ರೈಸರ್ಸ್ ಹೈದರಾಬಾದ್ ವಿರುದ್ಧ 7 ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸಿದೆ. ಈ ಮೂಲಕ ಸತತ 4ನೇ ಗೆಲುವು ಕಂಡಿರುವ ಮುಂಬೈ ಪಡೆ ಅಂಕಪಟ್ಟಿಯಲ್ಲೂ ಜಿಗಿತ ಕಂಡಿದೆ.

6ನೇ ಸ್ಥಾನದಲ್ಲಿದ್ದ ಹಾರ್ದಿಕ್ ಪಾಂಡ್ಯ ಬಳಗ ಇದೀಗ 9 ಪಂದ್ಯಗಳಲ್ಲಿ 5 ಗೆಲುವು ಮತ್ತು 4 ಸೋಲಿನೊಂದಿಗೆ 10 ಅಂಕಗಳನ್ನು ಕಲೆ ಹಾಕಿದೆ. +0.67 ನೆಟ್‌ರನ್‌ರೇಟ್‌ನೊಂದಿಗೆ 3ನೇ ಸ್ಥಾನಕ್ಕೇರಿದೆ. ಹೀಗಾಗಿ ರಾಯಲ್ಸ್ ಚಾಲೆಂಜರ್ಸ್ ಬೆಂಗಳೂರು ತಂಡ 3ರಿಂದ 4ನೇ ಸ್ಥಾನಕ್ಕೆ ಕುಸಿದಿದೆ. ಮುಂಬೈ ವಿರುದ್ಧ ಪರಾಭವಗೊಂಡ ಸನ್ ರೈಸರ್ಸ್ ತಂಡ ಆಡಿರುವ 8 ಪಂದ್ಯಗಳಿಂದ 2 ಗೆಲುವಿನೊಂದಿಗೆ 9ನೇ ಸ್ಥಾನದಲ್ಲೇ ಮುಂದುವರಿದಿದೆ.

ಹೈದರಾಬಾದ್‌ನ ರಾಜೀವ್ ಗಾಂಧಿ ಕ್ರೀಡಾಂಗಣದಲ್ಲಿಂದು ನಡೆದ ಪಂದ್ಯದಲ್ಲಿ ಗೆಲುವಿಗೆ 144 ರನ್ ಗಳ ಗುರಿ ಪಡೆದ ಮುಂಬೈ ಕೇವಲ 3 ವಿಕೆಟ್ ಕಳೆದುಕೊಂಡು ಇನ್ನೂ 26 ಎಸೆತಗಳು ಬಾಕಿ ಇರುವಂತೆ ಗೆದ್ದು ಬೀಗಿತು. ಮುಂಬೈ ಪರ ಆರಂಭಿಕ ರಾನ್ ರಿಕಲ್ಟನ್ ಬೇಗನೇ ಔಟಾದರೂ ರೋಹಿತ್ ಶರ್ಮಾ(70) ಮತ್ತು ವಿಲ್ ಜಾಕ್ಸ್ (22) ತಂಡದ ಇನ್ನಿಂಗ್ಸ್ ಕಟ್ಟಿದರು. ವಿಲ್ ಜಾಕ್ಸ್ ವಿಕೆಟ್ ಪತನದ ಬಳಿಕ ಸೂರ್ಯಕುಮಾರ್ ಯಾದವ್ (40) ಅವರು ರೋಹಿತ್ ಶರ್ಮಾ ಅವರ ಜೊತೆ ಸೇರಿ ಹೈದರಾಬಾದ್ ಬೌಲರ್‌ಗಳನ್ನು ಬೆಂಡೆತ್ತಿದರು.

ಈ ಸೀಸನ್ ನಲ್ಲಿ 2ನೇ ಅರ್ಧಶತಕ ಬಾರಿಸಿದ ರೋಹಿತ್ ಶರ್ಮಾ 46 ಎಸೆತಗಳಿಂದ 8 ಬೌಂಡರಿ ಮತ್ತು 3 ಸಿಕ್ಸರ್ ಗಳನ್ನು ಒಳಗೊಂಡ 70 ರನ್ ಗಳನ್ನು ಚಚ್ಚಿದರು. ಇನ್ನು ಸೂರ್ಯಕುಮಾರ್ ಅವರು 19 ಎಸೆತಗಳಿಂದ 5 ಬೌಂಡರಿ ಮತ್ತು 2 ಸಿಕ್ಸರ್ ಗಳಿದ್ದ 40 ರನ್ ಗಳಿಸಿ ಅಜೇಯರಾಗುಳಿದರು.

**ಸನ್ ರೈಸರ್ಸ್ ಬ್ಯಾಟಿಂಗ್ ವೈಫಲ್ಯ:** ಇದಕ್ಕೂ ಮೊದಲು ಟಾಸ್ ಸೋತು ಬ್ಯಾಟಿಂಗ್‌ಗೆ ಇಳಿಸಲ್ಪಟ್ಟ ಹೈದರಾಬಾದ್ ತಂಡ ತನ್ನ ಖ್ಯಾತಿಗೆ ತಕ್ಕಂತೆ ಆಟವಾಡಲೇ ಇಲ್ಲ. ಅಗ್ರಕ್ರಮಾಂಕದ ಟ್ರಾವಿಸ್ ಹೆಡ್ (0), ಇಶಾನ್ ಕಿಶನ್(1), ಅಭಿಷೇಕ್ ಶರ್ಮಾ(8), ನಿತೀಶ್ ಕುಮಾರ್ ರೆಡ್ಡಿ (2), ಅನಿಕೇತ್ ವರ್ಮಾ (12) ಮೊದಲಾದ ಘಟಾನುಘಟಿ ಬ್ಯಾಟರ್ ಗಳು ಮುಂಬೈ ಬಿಗಿ ದಾಳಿಗೆ ತತ್ತರಿಸಿದರು. ಹೈದರಾಬಾದ್ ತಂಡ ಕೇವಲ 35 ರನ್ ಗಳಿಗೆ 5 ವಿಕೆಟ್ ಕಳೆದುಕೊಂಡಿತ್ತು. ಈ ಸಂದರ್ಭದಲ್ಲಿ ಸ್ಫೋಟಕ ಬ್ಯಾಟರ್ ಹೆನ್ರಿಚ್ ಕ್ಲಾಸನ್ ಜೊತೆ ಸೇರಿ ಹೈದರಾಬಾದ್ ನ ಮಾನ ಕಾಪಾಡಿದರು. ಕ್ಲಾಸನ್ 44 ಎಸೆತಗಳಲ್ಲಿ 9 ಬೌಂಡರಿ ಮತ್ತು 2 ಸಿಕ್ಸರ್ ಗಳಿದ್ದ 71 ರನ್ ಗಳಿಸಿ ಬುಮ್ರಾ ಬೌಲಿಂಗ್ ನಲ್ಲಿ ತಿಲಕ್ ವರ್ಮಾಗೆ ಕ್ಯಾಚ್ ನೀಡಿದರು. ಅಭಿನವ್ ಮನೋಹರ್ ಅವರು 37 ಎಸೆತಗಳಿಂದ 2 ಬೌಂಡರಿ ಮತ್ತು 3 ಸಿಕ್ಸರ್ ಗಳಿದ್ದ 43 ರನ್ ಗಳಿಸಿ ಬೌಲ್ಟ್ ಬೌಲಿಂಗ್ ನಲ್ಲಿ ಹಿಟ್ ವಿಕೆಟ್ ಆದರು. ಅಂತಿಮವಾಗಿ ಸನ್ ರೈಸರ್ಸ್ 8 ವಿಕೆಟ್ ನಷ್ಟಕ್ಕೆ 143 ರನ್ ಗಳನ್ನಷ್ಟೇ ಗಳಿಸಲು ಶಕ್ತವಾಯಿತು. ಮುಂಬೈ ಪರ ಟ್ರೆಂಟ್ ಬೌಲ್ಟ್ 26 ರನ್ ಗೆ 4 ವಿಕೆಟ್ ಮತ್ತು ದೀಪಕ್ ಚಾಹಲ್ 12 ರನ್ ಗಳಿಗೆ 2 ವಿಕೆಟ್ ಕಹಳಿಸಿದರು. ಉಳಿದೆರಡು ವಿಕೆಟ್ ಗಳನ್ನು ಜಸ್ಪ್ರೀತ್ ಬುಮ್ರಾ ಮತ್ತು ಹಾರ್ದಿಕ್ ಪಾಂಡ್ಯ ಹಂಚಿಕೊಂಡರು.

# ಮೌನಾಚರಣೆ ವೇಳೆಯೂ ಹಾರ್ದಿಕ್ ಪಾಂಡ್ಯ ಹುಚ್ಚಾಟ




ಇಂಡಿಯನ್ ಪ್ರೀಮಿಯರ್ ಲೀಗ್‌ನ 41ನೇ ಪಂದ್ಯದ ಆರಂಭಕ್ಕೂ ಪಹಲ್ಗಾಮ್ ಉಗ್ರರ ದಾಳಿಯಲ್ಲಿ ಮೃತಪಟ್ಟವರಿಗಾಗಿ ಒಂದು ನಿಮಿಷ ಮೌನಾಚರಣೆ ಮಾಡಲಾಗಿತ್ತು. ಈ ಮೌನಾಚರಣೆ ವೇಳೆ ಮುಂಬೈ ಇಂಡಿಯನ್ಸ್ ತಂಡದ ನಾಯಕ ಹಾರ್ದಿಕ್ ಪಾಂಡ್ಯ ಅಗೌರವಯುತವಾಗಿ ನಡೆದುಕೊಂಡಿದ್ದು ಇದೀಗ ಚರ್ಚೆಗೆ ಕಾರಣವಾಗಿದೆ.

ಎಲ್ಲರೂ ಮೌನಾಚರಣೆಗಾಗಿ ನಿಂತಿದ್ದ ಸಂದರ್ಭದಲ್ಲಿ ಹಾರ್ದಿಕ್ ಪಾಂಡ್ಯ ನಗುತ್ತಾ ಸಹ ಆಟಗಾರರೊಂದಿಗೆ ಹರಟೆ ಹೊಡೆಯುತ್ತಿದ್ದರು. ಇದಾದ ಬಳಿಕ ಮೌನಾಚರಣೆ ಶುರುವಾಗಿದೆ. ಈ ವೇಳೆಯೂ ಹಾರ್ದಿಕ್ ಪಾಂಡ್ಯ ತಮ್ಮ ವರ್ತನೆಯಲ್ಲಿ ಯಾವುದೇ ಬದಲಾವಣೆ ಮಾಡಿಕೊಂಡಿರಲಿಲ್ಲ.

ತನ್ನ ಪ್ಯಾಂಟ್ ಲೇಸ್ ಟೈಟ್ ಮಾಡಿಕೊಳ್ಳುತ್ತಾ ನಿಂತಿದ್ದ ಹಾರ್ದಿಕ್ ಪಾಂಡ್ಯ ಪಕ್ಕದಲ್ಲಿದ್ದ ಅಂಪೈರ್ ಜೊತೆ ಹರಟೆ ಮುಂದುವರೆಸಿದ್ದರು. ಇದೀಗ ಈ ವಿಡಿಯೋ ವೈರಲ್ ಆಗಿದ್ದು, ಸೂಕ್ಷ್ಮ ಸಂದರ್ಭಗಳಲ್ಲಿ ಮೃತರಿಗೆ ಅಗೌರವ ತೋರಿರುವ ಹಾರ್ದಿಕ್ ಪಾಂಡ್ಯ ನಡೆಗೆ ಸೋಷಿಯಲ್ ಮೀಡಿಯಾದಲ್ಲಿ ಆಕ್ರೋಶಗಳು ವ್ಯಕ್ತವಾಗುತ್ತಿದೆ.

## ಇದು ರಾಜಕೀಯ ಮಾಡುವ ಸಮಯವಲ್ಲ

# ನ್ಯಾಯ ಕೊಡಿಸುವ ಸಮಯ



**ನವದೆಹಲಿ:** ಇದು ರಾಜಕೀಯ ಮಾಡುವ ಸಮಯವಲ್ಲ. ಮೃತಪಟ್ಟ ಅಮಾಯಕರಿಗೆ ನ್ಯಾಯ ಕೊಡಿಸುವ ಸಮಯ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

ಪಹಲ್ಗಾಮ್‌ನಲ್ಲಿ ನಡೆದ ದಾಳಿಯ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಅವರು, ಪ್ರವಾಸಿಗರ ಹತ್ಯೆಯನ್ನು ಖಂಡಿಸಿದ್ದಾರೆ. ಉಗ್ರರು ಪ್ರವಾಸಿಗರನ್ನು ಹತ್ಯೆ ಮಾಡಿರುವ ದುರದೃಷ್ಟಕರ ಘಟನೆ ನಡೆದಿದೆ. ಉಗ್ರರು ಅಮಾಯಕರನ್ನ ಕೊಂದಿದ್ದಾರೆ. ಇದು ತುಂಬಾ ದುಃಖಕರ ಸಂಗತಿ, ಕಾಂಗ್ರೆಸ್ ಪಕ್ಷ ಉಗ್ರರ ಈ ಕೃತ್ಯವನ್ನ ಉಗ್ರವಾಗಿ ಖಂಡಿಸುತ್ತದೆ. ಈ ಘಟನೆ ದೇಶದ ಒಗ್ಗಟ್ಟು, ಐಕ್ಯತೆ ಮೇಲಿನ ದಾಳಿ ಎಂದಿದ್ದಾರೆ.

ಬುಧವಾರ ರಾತ್ರಿ ನಾನು ಅಮಿತ್ ಶಾ ಜೊತೆ ಹಾಗೂ ಒಮರ್ ಅಬ್ದುಲ್ಲಾರೊಂದಿಗೆ ಮಾತನಾಡಿದ್ದೇನೆ. ಜಮ್ಮು ಮತ್ತು ಕಾಶ್ಮೀರದ ನಾಯಕರ ಜೊತೆಯೂ ಮಾತಾಡಿದ್ದೇನೆ. ಯಾರು ಈ ಕೃತ್ಯದ ಹಿಂದಿದ್ದಾರೆ ಅವರ ವಿರುದ್ಧ ಕಠಿಣ ಕ್ರಮ ಜರುಗಿಸುವುದಾಗಿ ಅಮಿತ್ ಶಾ ನನಗೆ ಹೇಳಿದ್ದಾರೆ. ಇದು ರಾಜಕೀಯ ಮಾಡುವ ಸಮಯ ಅಲ್ಲ. ಮೃತರಾದ ಅಮಾಯಕರಿಗೆ ನ್ಯಾಯ ಕೊಡಿಸುವ ಸಮಯ. ಹಾಗಾಗಿ ಈ ವಿಚಾರದಲ್ಲಿ ಒಟ್ಟಾಗಿ ಹೋರಾಡಬೇಕು ಎಂದು ಹೇಳಿದ್ದಾರೆ.

ಕರ್ನಾಟಕದ ಮಂಜುನಾಥ್ ರಾವ್, ಭರತ್ ಭೂಷಣ್ ಮೃತರಾಗಿದ್ದಾರೆ. ಅವರ ಪತ್ನಿಯರಾದ ಪಲ್ಲವಿ, ಸುಜಾತ ಅವರೊಂದಿಗೆ ಮಾತನಾಡಿದ್ದೇನೆ. ಘಟನಾ ಸ್ಥಳಕ್ಕೆ ಸಂತೋಷ್ ಲಾಡ್ ಕೂಡ ಹೋಗಿದ್ದಾರೆ. ಅವರ ಜೊತೆಯೂ ಮಾತನಾಡಿದ್ದೇನೆ. ಕರ್ನಾಟಕದಿಂದ 200 ಟೂರಿಸ್ಟ್ ಹೋಗಿದ್ದಾರೆ ಎನ್ನಲಾಗಿದೆ. ಎಲ್ಲರನ್ನೂ ಸುರಕ್ಷಿತವಾಗಿ ಕರೆತರಲು ಸರ್ಕಾರ ಕ್ರಮ ಕೈಗೊಂಡಿದೆ ಎಂದಿದ್ದಾರೆ.

ಘಟನೆಯ ಬಗ್ಗೆ ಓಮರ್ ಅಬ್ದುಲ್ಲಾ ಅವರ ಜೊತೆಯೂ ಮಾತಾಡಿದ್ದೇನೆ. ಕೇಂದ್ರ ಸರ್ಕಾರದ ಜವಾಬ್ದಾರಿಯೂ ಹೆಚ್ಚಿದೆ. ಉಗ್ರರನ್ನ ಬಗ್ಗುಬಡಿಯಬೇಕು. ಮೃತರಿಗೆ ಸಂತಾಪ ಸೂಚಿಸುತ್ತೇವೆ. ಕಾಂಗ್ರೆಸ್ ಪಕ್ಷ ಕುಟುಂಬದವರ ಜೊತೆ ಇದೆ. ಇದು ಭಾರತದ ಮೇಲಿನ ನೇರ ದಾಳಿಯಾಗಿದೆ. ಪಾಕಿಸ್ತಾನಿ ಪ್ರಾಯೋಜಿತ ಉಗ್ರ ಚಟುವಟಿಕೆಗಳನ್ನ ಬಗ್ಗು ಬಡಿಯಬೇಕು ಎಂದು ಬರೆದಿದ್ದಾರೆ.

ಕಾಶ್ಮೀರದಲ್ಲಿ ಟೂರಿಸ್ಟ್‌ಗಳಿಗೆ ರಕ್ಷಣೆ ಒದಗಿಸಬೇಕು. ಕೇಂದ್ರ ಸರ್ಕಾರ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಅಮರನಾಥ ಯಾತ್ರೆಯ ಸೆಕ್ಯೂರಿಟಿ ಕೂಡಾ ಟೈಟ್ ಮಾಡಬೇಕು. ಉಗ್ರರ ವಿರುದ್ಧ ಹೋರಾಟದಲ್ಲಿ ಕೇಂದ್ರ ಸರ್ಕಾರದ ಜೊತೆ ನಾವು ಇರುತ್ತೇವೆ. ಕೇಂದ್ರ ಸರ್ಕಾರ ಸರ್ವಪಕ್ಷ ಸಭೆ ಕರೆದು ಎಲ್ಲರ ಅಭಿಪ್ರಾಯ ಪಡೆಯಲಿ. ಇದು ರಾಜಕೀಯ ಮಾಡಲು ಅಲ್ಲ. ಆದರೆ ಎಲ್ಲರಿಂದಲೂ ಸಲಹೆ ಪಡೆಯಿರಿ. ಎಲ್ಲರೂ ಒಂದಾಗಿದ್ದೇವೆ ಎಂಬ ಸಂದೇಶವನ್ನು ರವಾನಿಸಿ ಎಂದಿದ್ದಾರೆ.

# ಪಹಲ್ಗಾಮ್ ಉಗ್ರರ ದಾಳಿ; ಮಾಹಿತಿ ಕೊರತೆ ಕೇಂದ್ರದ ಗುಪ್ತಚರ ಇಲಾಖೆಯ ವೈಫಲ್ಯ: ಸಿಎಂ



**ಬೆಂಗಳೂರು:** ಕಾಶ್ಮೀರದ ಪಹಲ್ಗಾಮ್‌ನ ಉಗ್ರರ ದಾಳಿಯ ಸಂದರ್ಭದಲ್ಲಿ ಕಾಶ್ಮೀರದಿಂದ ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರಲು ಸರ್ಕಾರ ಸಕಲ ವ್ಯವಸ್ಥೆ ಮಾಡಿದೆ ಹಾಗೂ ಉಗ್ರರ ದಾಳಿಯ ಮಾಹಿತಿ ಕೊರತೆ ಕೇಂದ್ರದ ಗುಪ್ತಚರ ಇಲಾಖೆಯ ವೈಫಲ್ಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಬೆಂಗಳೂರಿನಲ್ಲಿ ಈ ಕುರಿತು ಮಾತನಾಡಿದ ಅವರು, ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ನಡೆದಿರುವ ಉಗ್ರರ ದಾಳಿಯನ್ನು ತೀವ್ರವಾಗಿ ಖಂಡಿಸಿದ್ದಾರೆ. ಅಲ್ಲದೇ ಕರ್ನಾಟಕದ ಪ್ರವಾಸಿಗರಲ್ಲಿ ಮಂಜುನಾಥ್ ಹಾಗೂ ಭರತ್ ಭೂಷಣ್ ಎಂಬವರು ಮೃತರಾಗಿರುವ ಬಗ್ಗೆ ಮಾಹಿತಿ ನೀಡಿದರು. ಕನ್ನಡಿಗರ ರಕ್ಷಣೆ ಹಾಗೂ ಇನ್ನಿತರ ವ್ಯವಸ್ಥೆಗಳಿಗಾಗಿ ಅಧಿಕಾರಿಗಳ ತಂಡವನ್ನು ಕಾಶ್ಮೀರಕ್ಕೆ ರವಾನಿಸಲಾಗಿದೆ. ಕಾಶ್ಮೀರಕ್ಕೆ ತೆರಳಿರುವ 40ಕ್ಕೂ ಅಧಿಕ ಕನ್ನಡಿಗರನ್ನು ವಿಶೇಷ ವಿಮಾನ ವ್ಯವಸ್ಥೆ ಮಾಡಿ ಸುರಕ್ಷಿತವಾಗಿ ಕರೆತರಲು ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರನ್ನೂ ಕಾಶ್ಮೀರಕ್ಕೆ ಕಳುಹಿಸಲಾಗಿದೆ ಎಂದರು. ಕಾಶ್ಮೀರದ ಪಹಲ್ಗಾಮ್ ನಲ್ಲಿ ನಡೆದಿರುವ ಉಗ್ರರ ದಾಳಿ ಪೂರ್ವಯೋಜಿತ ಸಂಚು. ಪ್ರಾಣಹತ್ಯೆ ಮಾಡಿರುವ ಈ ಘಟನೆ ಅತ್ಯಂತ ಖಂಡನೀಯ. ಘಟನೆಯಲ್ಲಿ ಸುಮಾರು 28 ಜನ ಮೃತಪಟ್ಟಿರುವ ಭೀಕರವಾದ ಉಗ್ರರ ದಾಳಿ ನಡೆಯುವ ಮಾಹಿತಿ ಮೊದಲೇ ತಿಳಿಯದಿರುವುದು ಕೇಂದ್ರದ ಗುಪ್ತಚರ ಇಲಾಖೆಯ ವೈಫಲ್ಯವಾಗಿದೆ. ಈ ಹಿಂದೆ ನಡೆದ ಪುಲ್ವಾಮಾ ಘಟನೆಯಲ್ಲಿಯೂ ಗುಪ್ತಚರ ಮಾಹಿತಿಯ ವೈಫಲ್ಯವಿದೆ ಎಂದರು.

ದೇಶದ ಜನರಿಗೆ ಕೇಂದ್ರ ಭದ್ರತೆ ಒದಗಿಸಬೇಕು:

ಮೃತರ ಕುಟುಂಬಗಳಿಗೆ ಪರಿಹಾರ ನೀಡುವ ಬಗ್ಗೆ ಸರ್ಕಾರ, ಸಕಾರಾತ್ಮಕವಾಗಿ ಚಿಂತಿಸಿ ಪರಿಶೀಲಿಸಲಿದೆ. ಪೆಹಲ್ಗಾಮಿನ ಉಗ್ರರ ದಾಳಿ ಪ್ರಕರಣದಲ್ಲಿ ಕೇಂದ್ರ ಗುಪ್ತಚರ ಇಲಾಖೆ ವಿಫಲವಾಗಿದೆ. ಭಯೋತ್ಪಾದಕರನ್ನು ನಿರ್ಮೂಲನೆಗೊಳಿಸುವ ಜೊತೆಗೆ ದೇಶದ ಜನರಿಗೆ ಭದ್ರತೆ ನೀಡುವ ಕಾರ್ಯವನ್ನು ಕೇಂದ್ರ ಸಮರ್ಥವಾಗಿ ನಿರ್ವಹಿಸಬೇಕು ಎಂದು ಅಭಿಪ್ರಾಯಪಟ್ಟರು.

# ಆರ್‌ಎಸ್‌ಎಸ್ ಮುಖಂಡನ ಮೇಲೆ ಮುಸ್ಲಿಂ ಯುವಕರಿಂದ ಹಲ್ಲೆ

**ಧಾರವಾಡ:** ಮನೆ ಹೊಕ್ಕು ರಾಷ್ಟ್ರೀಯ ಸ್ವಯಂಸೇವಕ ಸಂಘಟನೆ ಮುಖಂಡನಿಗೆ ನಾಲ್ವರು ಮುಸ್ಲಿಂ ಯುವಕರು ಹಲ್ಲೆ ಮಾಡಿರುವ ಘಟನೆ ಧಾರವಾಡ ನಗರದ ಹಳೆ ತಹಸೀಲ್ದಾರ್ ಕಚೇರಿ ಓಣಿಯಲ್ಲಿ ನಡೆದಿದೆ. ಸಿರೀಶ್ ಬಳ್ಳಾರಿ ಹಲ್ಲೆಗೊಳಗಾದ ಆರ್‌ಎಸ್ ಎಸ್ ಮುಖಂಡ. ಯುವಕರು ಸಿಗರೇಟ್ ಸೇದುತ್ತಾ ನಿಂತಿದ್ದರು. ಈ ವೇಳೆ, ಸಿರೀಶ್ ಬಳ್ಳಾರಿಯವರು ದೂರಕ್ಕೆ ಹೋಗಿ ಸಿಗರೇಟು ಸೇದುವಂತೆ ಹೇಳಿದ್ದಾರೆ. ಇಷ್ಟಕ್ಕೆ ಆಕ್ರೋಶಗೊಂಡ ನಾಲ್ವರು ಮುಸ್ಲಿಂ ಯುವಕರು, ಸಿರೀಶ್ ಬಳ್ಳಾರಿಯವರ ಮನೆಯೊಳಗೆ ಹೊಕ್ಕು ಹಲ್ಲೆ ಮಾಡಿದ್ದಾರೆ. ಇದರಿಂದ, ಸಿರೀಶ್ ಬಳ್ಳಾರಿಯವರ ಕೈ ಹಾಗೂ ಮುಖಕ್ಕೆ ತೀವ್ರ ಗಾಯವಾಗಿದೆ.

ಸಿರೀಶ್ ಬಳ್ಳಾರಿಯವರನ್ನು ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ. ಧಾರವಾಡ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ಆರೋಪಿಗಳನ್ನು ಬಂಧಿಸುವಂತೆ ಹಿಂದೂಪರ ಸಂಘಟನೆಗಳಿಂದ ಒತ್ತಾಯಿಸಿದ್ದು, ನೂರಾರು ಕಾರ್ಯಕರ್ತರು ಠಾಣೆಯ ಮುಂದೆ ಜಮಾಯಿಸಿದ್ದಾರೆ.

Printed, Published & Owned by N.Venugopal Krishna, Printed at Dashapramathi Mudranalaya, No.45, 4th Cross, Srigandhadakaval, Bengaluru-560079. Published at No.45, 4th Cross, Srigandhadakaval, Bengaluru-560079. Editor: N.Venugopal Krishna, Mobile No.+91 94835 89085, email: sanjemugilu@gmail.com, RNI No.KARKAN/2002/08054